24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA । EDITOR : K.R. RENU । RNI No. DELKAN/2003/10363 । ಪುಟ 8 । ಸಂಪುಟ 24 । ಸಂಚಿಕೆ 130 । ನವದೆಹಲಿ । ಬೆಲೆ ₹10। ನವಂಬರ್ 5, 2026, ಗುರುವಾರ

ಒಳಪುಟಗಳಲ್ಲಿ

ಮಾರಾಟ ತೆರಿಗೆ ಮೇಲೆ ಹೆಚ್ಚುವರಿ ಸುಂಕ ವಿಧಿಸಲು ರಾಜ್ಯಗಳಿಗೆ ಅಧಿಕಾರ: ಸುಪ್ರೀಂ ಕೋರ್ಟ್ - ಪು.4

ಜಿಬಿಎ ಚುನಾವಣೆ: ಕಾಂಗ್ರೆಸ್‌ನಲ್ಲಿ ಚುರುಕುಗೊಂಡ ಸಿದ್ಧತೆ - ಪು.5

ಅಗ್ನಿವೀರರ ಸೇವಾವಧಿ ಎರಡು ವರ್ಷ ವಿಸ್ತರಿಸಿದ ಕೇಂದ್ರ



ನವದೆಹಲಿ, ನ.4: ಅಗ್ನಿಪಥ್ ಯೋಜನೆಯಡಿ ಸೇನೆಯಲ್ಲಿ ನಾಲ್ಕು ವರ್ಷಗಳ ಸೇವೆ ಪೂರ್ಣಗೊಳಿಸುವ ಅಗ್ನಿವೀರರಿಗೆ ಹೆಚ್ಚುವರಿಯಾಗಿ 2 ವರ್ಷ ಸೇವಾವಧಿ ವಿಸ್ತರಿಸಲು ಬುಧವಾರ ನಡೆದ ಕೇಂದ್ರ ಸಂಪುಟ ಸಭೆ ನಿರ್ಧರಿಸಿದೆ. ಇದರಿಂದ ಅಗ್ನಿವೀರರ ಸೇವಾವಧಿ ಒಟ್ಟು 6 ವರ್ಷವಾಗಲಿದೆ. ಸಭೆಯ ಬಳಿಕ ಮಾಹಿತಿ ನೀಡಿದ ಸಿಡಿಎಸ್ ಜನರಲ್ ಎನ್.ಎಸ್. ರಾಜಾ ಸುಬ್ರಮಣಿ, ಹೆಚ್ಚುವರಿ ಸೇವಾವಧಿ ಪೂರ್ಣಗೊಳಿಸುವ ಅಗ್ನಿವೀರರನ್ನು ಅವರ ಕಾರ್ಯಕ್ಷಮತೆಯ ಮೌಲ್ಯಮಾಪನದ ಆಧಾರದ ಮೇಲೆ ಸಶಸ್ತ್ರ ಪಡೆಗಳಲ್ಲಿ ಕಾಯಂ ಸೇವೆಗೆ ಪರಿಗಣಿಸಲಾಗುತ್ತದೆ. ಅಲ್ಲದೆ, ಸೇವಾವಧಿ ವಿಸ್ತರಣೆ ಪಡೆದವರಿಗೆ ಹೆಚ್ಚುವರಿ ವೇತನ ಸೌಲಭ್ಯಗಳನ್ನೂ ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ. ಮೊದಲ ಬ್ಯಾಚ್‌ನ ಸುಮಾರು 18,300 ಅಗ್ನಿವೀರರು ಈ ವರ್ಷದ ಅಂತ್ಯದ ವೇಳೆಗೆ ಸೇವೆಯಿಂದ ನಿರ್ಗಮಿಸುವ ನಿರೀಕ್ಷೆಯಿತ್ತು. ಹೊಸ ನಿರ್ಧಾರದಿಂದ ಅನುಭವ ಹೊಂದಿರುವ ಅಗ್ನಿವೀರರ ಸೇವೆಯನ್ನು ಮತ್ತೆರಡು ವರ್ಷ ಬಳಸಿಕೊಳ್ಳಲು ಅವಕಾಶ ಸಿಗಲಿದೆ.


ಗ್ರಾಮೀಣ ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿಗೆ ಕೈಜೋಡಿಸಿ

ಬೆಂಗಳೂರು, ನ.4: ನಮ್ಮ ಸರ್ಕಾರ ಸಿಎಸ್‌ಆರ್ ಹೊಸನೀತಿ ಜಾರಿಮಾಡಿದೆ. ನಾಡಿನ ಎಲ್ಲಾ ಖಾಸಗಿ ಶಾಲೆಯ ಆಡಳಿತ ಮಂಡಳಿಗಳು ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ದತ್ತು ಅಥವಾ ಅವುಗಳ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ವಿಧಾನಸೌಧದಲ್ಲಿ ಬುಧವಾರ ನಡೆದ ಸಾಮಾಜಿಕ ಸಾಂಸ್ಥಿಕ ಹೊಣೆಗಾರಿಕಾ ಪ್ರತಿನಿಧಿಗಳ ಸಭೆಯಲ್ಲಿ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗ್ರಾಮೀಣ ಪ್ರದೇಶದ ಶಾಲೆ ಮಕ್ಕಳನ್ನು ನಿಮ್ಮ ಶಾಲೆಯ ಮಕ್ಕಳ ಜೊತೆಗೆ ಸೇರಿಸಿಕೊಂಡು ಗುಣಮಟ್ಟದ ಶಿಕ್ಷಣ ನೀಡಿ ಬದುಕಲ್ಲಿ ಅವರು ಮೇಲೆ ಬರುವುದಕ್ಕೆ ನೆರವಾಗಬೇಕು. ಒಟ್ಟು 2 ಸಾವಿರ ಸರ್ಕಾರಿ ಶಾಲೆಗಳನ್ನು ಈ ರೀತಿ ಖಾಸಗಿ ಶಾಲೆಗಳೊಂದಿಗೆ ಜೋಡಿಸುವ ಚಿಂತನೆ ಇದೆ. ಆರಂಭದಲ್ಲಿ 1 ಸಾವಿರ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಖಾಸಗಿ ಶಾಲೆಗಳ ಜೋಡಿಸುವ ಗುರಿ ಹೊಂದಿದ್ದೇವೆ. ಇದು ಕೇವಲ ಆರಂಭ 4–5 ವರ್ಷದ ಹೊತ್ತಿಗೆ ನಮ್ಮ ಪ್ರಯತ್ನಕ್ಕೆ ಒಳ್ಳೆಯ ಫಲ ದೊರೆಯಲಿದೆ ಎಂದರು.

ರಾಜ್ಯದಲ್ಲಿ ವಾರ್ಷಿಕ ಒಟ್ಟು 8,800 ಕೋಟಿ ಸಿಎಸ್‌ಆರ್ ನಿಧಿ ಇದೆ. ರಾಜ್ಯದ ಎಲ್ಲಾ ಕಂಪನಿಗಳ ಆಡಳಿತ ಮಂಡಳಿಗಳೊಂದಿಗೆ ಮಾತುಕತೆ ನಡೆಸಿ ಸಿಎಸ್‌ಆರ್ ನಿಧಿಯನ್ನು ಗ್ರಾಮೀಣ ಭಾಗದ ಪ್ರಾಥಮಿಕ ಶಾಲೆಗಳ ಅಭಿವೃದ್ಧಿಗೆ ವಿನಿಯೋಗವೇ ಮೊದಲ ಆದ್ಯತೆ ಆಗಬೇಕು. ಅವರು ಈಗಾಗಲೇ ಕೆಲಸ ಆರಂಭಗೊಳಿಸಿದ್ದಾರೆ. ಈಗ ನಿಮ್ಮ ಸರದಿ ಎಂದು ಆಗಮಿಸಿದ್ದ ಖಾಸಗಿ ಆಡಳಿತ ಮಂಡಳಿಯವರಿಗೆ ಡಿ.ಕೆ. ಶಿವಕುಮಾರ್ ತಿಳಿಸಿದರು. ಕೆಲವರು ಮುಂಬಯಿಯಲ್ಲಿ ಕಚೇರಿ ತೆರೆದು, ಇಲ್ಲಿ ಕಂಪನಿಯ ನೋಂದಣಿ ಮಾಡಿಸಿ, ಇಲ್ಲಿ ಗಳಿಸಿದ ಹಣವನ್ನು ಅಲ್ಲಿ ವಿನಿಯೋಗ ಮಾಡುತ್ತಿದ್ದಾರೆ. ಹೀಗೆ ಬಿಡುಗಡೆ ಮಾಡಿ, ಹಾಗೇ ಶೇ.50ರಷ್ಟು ಹಣ ವಾಪಸ್ಸು ತೆಗೆದುಕೊಳ್ಳುತ್ತಾರೆ. ಈ ದಂಧೆಗೆ ಕಡಿವಾಣ ಹಾಕಬೇಕು ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್‌ಗೆ ಮನವಿ ಮಾಡಿದ್ದೇನೆ ಎಂದರು.

2 ಸಾವಿರ ಶಾಲೆಗಳನ್ನು ಖಾಸಗಿ ಶಾಲೆಗೊಂದಿಗೆ ಜೋಡಿಸಲು ಚಿಂತನೆ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್



ಖಾಸಗಿ ಶಾಲೆಯ ಆಡಳಿತ ಮಂಡಳಿಗಳಿಗೆ ಶಾಲೆಗಳನ್ನು ಅನುಕೂಲಕ್ಕೆ ತಕ್ಕಂತೆ ಆಯ್ಕೆ ಮಾಡಿಕೊಳ್ಳಲು ಅವಕಾಶವಿರಲಿದೆ. ನಿಮ್ಮ ಆರ್ಥಿಕ ಸ್ಥಿತಿಗತಿ ನೋಡಿಕೊಂಡು ನಿರ್ಧಾರ ಮಾಡಬಹುದು. ನಿಮ್ಮ ನೈಪುಣ್ಯ ಇರುವ ಶಿಕ್ಷಕರನ್ನು ಸರ್ಕಾರಿ ಶಾಲೆಗೆ ಕಳುಹಿಸಿಕೊಡಿ. ನಿಮ್ಮ ಶಾಲೆಯಿಂದ 10 ಶಿಕ್ಷಕರನ್ನು ಕೊಡಿ. ಅವರಿಗೆ ಸಂಬಳ ನೀವು ಕೊಡಿ. ಖಾಸಗಿ ಶಾಲೆಯ ಬಸ್ಸನ್ನು ಮಾರಲು ಹೋಗಬೇಡಿ. ಸರ್ಕಾರಿ ಶಾಲೆಗೆ ಕೊಡಿ. ಲ್ಯಾಬ್ ವಸ್ತುಗಳು, ಕಂಪ್ಯೂಟರ್‌ಗಳನ್ನು ಕೊಟ್ಟರೆ, ಅನುಕೂಲ ಆಗುತ್ತದೆ. ಇದೊಂದು ರೀತಿ ಜ್ಞಾನ ವಿನಿಮಯ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಜ್ಞಾನ ವಿನಿಮಯ

ದೇಶದ ಭವಿಷ್ಯ ನಿರ್ಧರಿಸುವ ಶಕ್ತಿಯೇ ಶಿಕ್ಷಣ

ಶಿಕ್ಷಣವೆಂಬುದು ಕೇವಲ ಒಂದು ಮಗುವಿನ ಭವಿಷ್ಯವನ್ನು ರೂಪಿಸುವ ಸಾಧನವಲ್ಲ; ಅದು ಇಡೀ ಸಮಾಜ ಮತ್ತು ದೇಶದ ಭವಿಷ್ಯವನ್ನು ನಿರ್ಧರಿಸುವ ಶಕ್ತಿಯಾಗಿದೆ. ಪ್ರತಿಯೊಂದು ಮಗುವಿಗೂ ಸಮಾನ ಅವಕಾಶ, ಗುಣಮಟ್ಟದ ಶಿಕ್ಷಣ ಹಾಗೂ ಉಜ್ವಲ ಭವಿಷ್ಯ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಪಾಲುದಾರರು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು ಕೈಜೋಡಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಮನವಿ ಮಾಡಿದರು.

ಮೋದಿ ದೇಶದ್ರೋಹ ಎಸಗಿದ್ದಾರೆ, ಅಮಿತ್ ಶಾ ಗೃಹಸಚಿವರಾಗಿ ಮುಂದುವರಿಯಲ್ಲ



ಚಂಡೀಗಢ, ನ.4: ಮುಖ್ಯಮಂತ್ರಿ ಭಗವಂತ್ ಮಾನ್ ಅವರ ಸ್ವಕ್ಷೇತ್ರವಾದ ಸಂಗ್ರೂರಿನಲ್ಲಿ ನಡೆದ ರ‍್ಯಾಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಪ್ರಧಾನಿ ನರೇಂದ್ರ ಮೋದಿ ಅವರು ದೇಶಕ್ಕೆ ದ್ರೋಹ ಬಗೆದಿದ್ದಾರೆ. ಹಾಗೂ ಮುಂದಿನ ಮೂರು ವರ್ಷಗಳಲ್ಲಿ ಕೇಂದ್ರ ಗೃಹ ಸಚಿವ ಅಮಿತ್‌ಶಾ ಆ ಹುದ್ದೆಯಲ್ಲಿ ಮುಂದುವರಿಯುವುದಿಲ್ಲ ಎಂದು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಭವಿಷ್ಯ ನುಡಿದಿದ್ದಾರೆ. 2027ರ ಪಂಜಾಬ್ ವಿಧಾನಸಭಾ ಚುನಾವಣೆಗಾಗಿ ಕಾಂಗ್ರೆಸ್ ತನ್ನ ಪ್ರಚಾರವನ್ನು ಅಧಿಕೃತವಾಗಿ ಪ್ರಾರಂಭಿಸಿದ್ದು, ಪಂಜಾಬ್ ಮುಖ್ಯಮಂತ್ರಿ ಭಗವಂತ್‌ಮಾನ್ ಕ್ಷೇತ್ರ ಸಂಗ್ರೂರಿನ ಘಗುವಾಲಾ ಗ್ರಾಮದಲ್ಲಿ ಬುಧವಾರ ಕಾಂಗ್ರೆಸ್‌ನ ಇನ್ಸಾಫ್ ರ‍್ಯಾಲಿಯಲ್ಲಿ ಮಾತನಾಡಿ, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ಮತ್ತು ಪಂಜಾಬ್‌ನ ಆಡಳಿತಾರೂಢ ಆಮ್ ಆದ್ಮಿ ಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕೇಂದ್ರ ಸರ್ಕಾರವು ರಾಷ್ಟ್ರೀಯ ಹಿತಾಸಕ್ತಿಗಳನ್ನು ಬಲಿ ಕೊಡುತ್ತಿದೆ. ಪ್ರಧಾನಿ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೂಚನೆಯ ಮೇರೆಗೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು.

2029ರೊಳಗೆ ಪಂಜಾಬನ್ನು ನಶಾಮುಕ್ತ ಗೊಳಿಸುವುದಾಗಿ ಘೋಷಿಸಿರುವ ಅಮಿತ್ ಶಾ ಹೇಳಿಕೆಗೆ ಪ್ರತಿಕ್ರಿಯಿಸಿದ ರಾಹುಲ್ ಗಾಂಧಿ, ಮೂರು ವರ್ಷಗಳ ನಂತರ ಅಮಿತ್‌ಶಾ ಗೃಹ ಸಚಿವರಾಗಿ ಇರುವುದಿಲ್ಲ ಎಂದಿದ್ದಾರೆ.

ವೋಟ್ ಚೋರಿ, ಒಳನುಸುಳುವಿಕೆ: ಬಹಿರಂಗ ಚರ್ಚೆಗೆ ಬನ್ನಿ



ವೋಟ್ ಚೋರಿ" ಕುರಿತು ಲೋಕಸಭೆಯಲ್ಲಿ ರಾಹುಲ್ ಗಾಂಧಿ ಪ್ರಶ್ನೆಗಳಿಗೆ ಉತ್ತರಿಸಲು ಸರ್ಕಾರ ಹಿಂಜರಿಯುತ್ತಿದೆ. ಈ ದೇಶದ ಮತಗಳನ್ನು ಕಳವು ಮಾಡಲಾಗಿದೆ, ಮತ್ತು ಮತ ಕಳ್ಳತನದ ಮೂಲಕ ರೂಪುಗೊಂಡ ಸರ್ಕಾರಗಳು ದೆಹಲಿ ಸೇರಿ ದೇಶದ ಹಲವೆಡೆ ಆಡಳಿತ ನಡೆಸುತ್ತಿವೆ. ಸ್ವಾತಂತ್ರ್ಯದ ನಂತರ ಸ್ಥಾಪಿತವಾದ ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಿಜೆಪಿ ಮತ್ತು ಅದರ ಸೈದ್ಧಾಂತಿಕ ಮಾತೃಸಂಸ್ಥೆಯಾದ ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ದುರ್ಬಲಗೊಳಿಸಿದೆ ಎಂದು ದೂರಿರುವ ಮಲ್ಲಿಕಾರ್ಜುನ ಖರ್ಗೆ ದೂರಿದರು. ವೋಟ್ ಚೋರಿ, ಒಳನುಸುಳುವಿಕೆ ವಿಷಯ ಕುರಿತು ಬಹಿರಂಗ ಚರ್ಚೆಗೆ ಬರುವಂತೆ ಮೋದಿ ಹಾಗೂ ಅಮಿತ್‌ಶಾಗೆ ಬಹಿರಂಗ ಸವಾಲು ಹಾಕಿದ್ದಾರೆ.

■ ಮೋದಿ–ಅಮಿತ್ ಶಾಗೆ ಖರ್ಗೆ ಸವಾಲು





ನಿತ್ಯ ಪಂಚಾಂಗ 5.11.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಬಹುಳ, ಏಕಾದಶಿ, ಉತ್ತರಾ ನಕ್ಷತ್ರ, ಸರ್ವತ್ರ/ರಮಾ ಏಕಾದಶಿ, ಶೃಂಗೇರಿ ಚಂದ್ರಶೇಖರ ಭಾರತೀ ಜಯಂತಿ, ಮೇಲ್ಕೋಟೆ ಅಷ್ಟತೀರ್ಥೋತ್ಸವ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಗೃಹಲಕ್ಷ್ಮಿ ಯೋಜನೆಯ 3 ಕಂತಿನ 7405.86 ಕೋಟಿ ರೂ. ಹಣ ಬಿಡುಗಡೆ: ದಿನೇಶ್ ಗೂಳಿಗೌಡ



ಬೆಂಗಳೂರು: ಗೃಹಲಕ್ಷ್ಮಿ ಯೋಜನೆಯ 34, 35 ಮತ್ತು 36ನೇ ಕಂತುಗಳನ್ನು ಒಳಗೊಂಡ ಮೂರು ಕಂತಿನ 7405.86 ಕೋಟಿ ರೂ. ಹಣವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಒಮ್ಮೆಲೆ ಬಿಡುಗಡೆ ಮಾಡಿದ್ದಾರೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರು ತಿಳಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆಯಡಿ ಇದುವರೆಗೂ 33 ಕಂತಿನ ಹಣ ಫಲಾನುಭವಿಗಳ ಖಾತೆಗೆ ಜಮೆಯಾಗಿದೆ. ಈಗ 34ನೇ ಕಂತಿನ 2500 ಕೋಟಿ ರೂ., 35ನೇ ಕಂತಿನ 2452.93 ಕೋಟಿ ರೂ. ಮತ್ತು 36ನೇ ಕಂತಿನ 2452.93 ಕೋಟಿ ರೂ. ಹಣವನ್ನು ಒಮ್ಮೆಲೆ ಬಿಡುಗಡೆ ಆಗಿದೆ. ಇದರಿಂದ ಅಕ್ಟೋಬರ್ ವರೆಗೆ ರಾಜ್ಯದ 1.24 ಕೋಟಿ ಮಹಿಳೆಯರಿಗೆ 86,838.36 ಕೋಟಿ ರೂ. ಗೃಹಲಕ್ಷ್ಮಿ ಹಣ ತಲುಪಲಿದೆ. ಈ ಮೂಲಕ ಪ್ರತಿ ಫಲಾನುಭವಿಗೆ 72,000 ರೂ. ತಲುಪಿದಂತಾಗಲಿದೆ ಎಂದು ಹೇಳಿದ್ದಾರೆ.

ಬರದ ಈ ಸಂದರ್ಭದಲ್ಲಿ ಗೃಹಲಕ್ಷ್ಮಿ ಹಣ ಮಹಿಳೆಯರಿಗೆ ಆರ್ಥಿಕವಾಗಿ ಶಕ್ತಿ ನೀಡಲಿದೆ. ದೀಪಾವಳಿ ಹಬ್ಬದ ಈ ಸಂದರ್ಭದಲ್ಲಿ ಗೃಹಲಕ್ಷ್ಮಿ ಹಣ ಬಿಡುಗಡೆ ಮಾಡಿರುವ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರಿಗೆ ಧನ್ಯವಾದಗಳನ್ನು ತಿಳಿಸಿದ್ದಾರೆ.

ಬಿಜೆಪಿ ನಾಯಕರ ಹೇಳಿಕೆಗಳಿಗೆ ಆಕ್ಷೇಪ: ಕಾನೂನು ಕ್ರಮದ ಎಚ್ಚರಿಕೆ ನೀಡಿದ ಸಚಿವ ಖರ್ಗೆ

ಬೆಂಗಳೂರು, ನ.4: ಬಿಜೆಪಿ ನಾಯಕ ಛಲವಾದಿ ನಾರಾಯಣಸ್ವಾಮಿ ಹಾಗೂ ಇತರ ಬಿಜೆಪಿ ನಾಯಕರ ಹೇಳಿಕೆಗಳಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಮೆದುಳಿಗೂ ನಾಲಿಗೆಗೂ ಸಂಪರ್ಕವಿದೆಯೇ ಎಂದು ಪ್ರಶ್ನಿಸಿ ವಾಗ್ದಾಳಿ ನಡೆಸಿದ್ದಾರೆ.

ರಾಜಕೀಯ ಟೀಕೆಯ ಹೆಸರಿನಲ್ಲಿ ವೈಯಕ್ತಿಕ ನಿಂದನೆ ಹಾಗೂ ಪ್ರಚೋದನಕಾರಿ ಹೇಳಿಕೆಗಳನ್ನು ನೀಡುವುದನ್ನು ಸಹಿಸುವುದಿಲ್ಲ. ಈ ರೀತಿಯ ಹೇಳಿಕೆಗಳ ವಿರುದ್ಧ ಕಾನೂನುಬದ್ಧವಾಗಿ ಯಾವ ಕ್ರಮ ಕೈಗೊಳ್ಳಬೇಕೋ ಅದನ್ನು ಸರ್ಕಾರ ಕೈಗೊಳ್ಳಲಿದೆ ಎಂದು ಎಚ್ಚರಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಛಲವಾದಿ ನಾರಾಯಣಸ್ವಾಮಿ ಅವರು ಕಲಬುರಗಿಗೆ ಬಂದು ನನ್ನನ್ನು ನಾಯಿ ಎಂದು ಕರೆದಿದ್ದರು. ಬಳಿಕ ನಾಯಿ ಎಂದರೆ ತಪ್ಪಿಲ್ಲ, ನಾಯಿ ನಾರಾಯಣ ಎಂದು ಹೇಳಿದ್ದರು. ಆರ್‌ಎಸ್‌ಎಸ್‌ನ ಚೆಡ್ಡಿಯನ್ನು ತಲೆಯ ಮೇಲೆ ಹೊತ್ತುಕೊಂಡ ಮಾತ್ರಕ್ಕೆ ದೊಡ್ಡ ಸರ್ವಜ್ಞರಾಗಲು ಸಾಧ್ಯವಿಲ್ಲ. ಇದು ಉತ್ತರ ಪ್ರದೇಶ ಅಥವಾ ಗುಜರಾತ್ ಅಲ್ಲ. ನಿಮ್ಮ ವರ್ತನೆ ಮಿತಿಮೀರುತ್ತಿದೆ. ಇಂತಹ ಹೇಳಿಕೆಗಳಿಗೆ ಕಡಿವಾಣ ಹಾಕಬೇಕು ಎಂದು ಬಿಜೆಪಿ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕೊಲೆಗೆ ನೇರವಾಗಿ ಪ್ರಚೋದನೆ ನೀಡುವಂತಹ ಹೇಳಿಕೆಗಳನ್ನು ನೀಡಲಾಗುತ್ತಿದೆ. ಬಾಯಿಗೆ ಬಂದಂತೆ ಮಾತನಾಡಿ, ನಂತರ ಸ್ಪಷ್ಟನೆ ನೀಡಿದರೆ ಸಾಲದು. ಇಂತಹ ಪ್ರಚೋದನಕಾರಿ ಹೇಳಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಲಿದೆ ಎಂದರು.

ಆರ್‌ಎಸ್‌ಎಸ್ ವಿರುದ್ಧವೂ ಆರೋಪ

ಬಿಜೆಪಿ ನಾಯಕರ ಹೇಳಿಕೆಗಳ ಹಿಂದೆ ಆರ್‌ಎಸ್‌ಎಸ್‌ನ ನಿರ್ದೇಶನವಿದೆ ಎಂದು ಆರೋಪಿಸಿದ ಪ್ರಿಯಾಂಕ್ ಖರ್ಗೆ, ಬೆಳಿಗ್ಗೆ ಆರ್‌ಎಸ್‌ಎಸ್‌ನಿಂದ ವಾಟ್ಸ್‌ಆಪ್ ಸಂದೇಶಗಳು ಬರುತ್ತವೆ. ಇಂದು ಡಿ.ಕೆ. ಶಿವಕುಮಾರ್ ವಿರುದ್ಧ ಮಾತನಾಡಿ, ಪ್ರಿಯಾಂಕ್ ಖರ್ಗೆ ವಿರುದ್ಧ ಮಾತನಾಡಿ ಎಂಬ ಸೂಚನೆಗಳನ್ನು ನೀಡಲಾಗುತ್ತದೆ. ಇಂತಹ ಸಂದೇಶಗಳ ಪ್ರಭಾವದಿಂದಲೇ ಬಿಜೆಪಿ ನಾಯಕರು ಮನಬಂದಂತೆ ಮಾತನಾಡುತ್ತಿದ್ದಾರೆ ಎಂದು ದೂರಿದರು.

ಬದುಕಿನಲ್ಲಿ ರಾಜಯೋಗದೊಂದಿಗೆ ಕೌಶಲ್ಯವೂ ಇರಬೇಕು: ಸಿಎಂ ಡಿಕೆಶಿ

2032ರ ವೇಳೆಗೆ ಕರ್ನಾಟಕವನ್ನು ಒಂದು ಟ್ರಿಲಿಯನ್ ಡಾಲರ್ ಆರ್ಥಿಕತೆ ರಾಜ್ಯವನ್ನಾಗಿಸುವ ಗುರಿ

ಬೆಂಗಳೂರು, ನ.4: ಬದುಕಿನಲ್ಲಿ ರಾಜಯೋಗದ ಜತೆಗೆ ಕೌಶಲ್ಯವೂ ಇರಬೇಕು. ಪದವಿ ಜೊತೆಗೆ ಕೌಶಲ್ಯ ಅತ್ಯಂತ ಮುಖ್ಯವಾದುದು. ಕೌಶಲ್ಯವು ಉದ್ಯೋಗ, ಆದಾಯ ಮತ್ತು ಗೌರವಕ್ಕೆ ದಾರಿ ಮಾಡಿಕೊಡಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಬುಧವಾರ ಬೆಂಗಳೂರು ಕೌಶಲ್ಯ ಶೃಂಗಸಭೆಯಲ್ಲಿ ಮಾತನಾಡಿ, ಕೌಶಲ್ಯವೇ ಒಂದು ಧರ್ಮ, ಪದವಿ ಜ್ಞಾನದ ಬಾಗಿಲು ತೆಗೆಯುತ್ತೆ. ಕೌಶಲ್ಯ ಯಶಸ್ಸಿನ ದಾರಿ ತೋರಿಸುತ್ತೆ. ಪ್ರತಿಭೆ ಓದಿನಿಂದ ಬರಬಹುದು. ಕೌಶಲ್ಯ ಪರಿಶ್ರಮದಿಂದ ಬರುತ್ತದೆ. ಇಂದಿನ ಯುವಕರ ಕೈಗಳಿಗೆ ಕೌಶಲ್ಯ ನೀಡಿದರೆ, ನಾಳಿನ ಕರ್ನಾಟಕದ ಭವಿಷ್ಯ ಅವರ ಕೈಯಲ್ಲಿರುತ್ತದೆ. ಭವಿಷ್ಯಕ್ಕಾಗಿ ಇಂದೇ ಸಿದ್ಧತೆ ಮಾಡಿಕೊಳ್ಳುವವರೇ ಭವಿಷ್ಯವನ್ನು ರೂಪಿಸುತ್ತಾರೆ ಎಂದು ಹೇಳಿದರು.

ನಾಳೆಯ ಅವಕಾಶಗಳಿಗಾಗಿ ನಮ್ಮ ಯುವಜನರನ್ನು ಇಂದೇ ಸಿದ್ಧಗೊಳಿಸಬೇಕು ಎಂದು ನಾವು ನಿರ್ಧರಿಸಿದ್ದೇವೆ. ಶಿಕ್ಷಣ ಜ್ಞಾನವನ್ನು ನೀಡುತ್ತದೆ. ಕೌಶಲ್ಯ ಆ ಜ್ಞಾನವನ್ನು ಅವಕಾಶ, ಆದಾಯ ಮತ್ತು ಗೌರವವನ್ನು ತಂದು ಕೊಡುವುದಕ್ಕೆ ಪರಿವರ್ತನೆ ಮಾಡಲಿದೆ" ಎಂದು ತಿಳಿಸಿದರು.

ಕರ್ನಾಟಕವು 2032ರ ವೇಳೆಗೆ ಒಂದು ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗುವ ಗುರಿಯತ್ತ ಸಾಗುತ್ತಿದೆ. ಆದರೆ ಬಂಡವಾಳವೊಂದೇ ಈ ಭವಿಷ್ಯವನ್ನು ನಿರ್ಮಿಸಲಾರದು. ಅದನ್ನು ನಿರ್ಮಿಸೋದಕ್ಕೆ ಕೌಶಲ್ಯ ಹೊಂದಿದ ಮಾನವ ಸಂಪನ್ಮೂಲ ಅತ್ಯಗತ್ಯ. ಇಡೀ ಪ್ರಪಂಚ ಬೆಂಗಳೂರಿನ ಕಡೆ ನೋಡುತ್ತಿದೆ. ನಮ್ಮ ರಾಜ್ಯ ಪ್ರತಿಭಾವಂತರ ನಾಡು. ಇದು ಪ್ರಧಾನಿ ಮೋದಿ ಸೇರಿದಂತೆ ಅನೇಕರ ಮಾತು. 1.3 ದಶಲಕ್ಷ ಐಟಿ ಉದ್ಯೋಗಿಗಳು ಸಿಲಿಕಾನ್ ವ್ಯಾಲಿಯಲ್ಲಿ ಕೆಲಸ ಮಾಡುತ್ತಿದ್ದಾರೆ. 2.6 ಮಿಲಿಯನ್ ಜನರು ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದಾರೆ. ಇದು ಕರ್ನಾಟಕದ ಶಕ್ತಿ. ಜಾಗತಿಕ ನಾಯಕರು ಮೊದಲು ಬರುವುದೇ ಬೆಂಗಳೂರಿಗೆ. ನಂತರ ಇತರೆಡೆ ಹೋಗುತ್ತಾರೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

2029ರ ವೇಳೆಗೆ 3.5 ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ



ನಮ್ಮ ಸರ್ಕಾರವು ಕರ್ನಾಟಕ ರಾಜ್ಯ ಕೌಶಲ್ಯಾಭಿವೃದ್ಧಿ ನೀತಿ 2025–32ರ ಮೂಲಕ ಬಲವಾದ ಅಡಿಪಾಯ ಹಾಕಿದೆ. ನಮ್ಮ ಗುರಿ ಕೇವಲ ಉದ್ಯೋಗ ಹುಡುಕುವವರನ್ನು ಸೃಷ್ಟಿಸುವುದಲ್ಲ. ಉದ್ದಿಮೆ ಪ್ರಾರಂಭ ಮಾಡುವವರನ್ನು, ಭವಿಷ್ಯ ರೂಪಿಸುವವರನ್ನು, ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಬಲ್ಲ ಯುವಜನರನ್ನು ರೂಪಿಸುವುದು ನಮ್ಮ ಗುರಿ. ಕರ್ನಾಟಕದಲ್ಲಿ ಈಗಾಗಲೇ ಸುಮಾರು 550 ಜಾಗತಿಕ ಸಾಮರ್ಥ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 2029ರ ವೇಳೆಗೆ ಸುಮಾರು 500 ಹೊಸ ಕೇಂದ್ರಗಳು ಮತ್ತು 3.5 ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಗುರಿ ಹೊಂದಿದ್ದೇವೆ. ಈ ಅವಕಾಶಗಳು ಬರುವ ಮೊದಲೇ ನಮ್ಮ ಕೌಶಲ್ಯಾಭಿವೃದ್ಧಿ ವ್ಯವಸ್ಥೆಯನ್ನು ನಾವು ತಯಾರು ಮಾಡುತ್ತಿದ್ದೇವೆ. ನಮ್ಮ ಯುವಜನರನ್ನು ಕೇವಲ ಉದ್ಯೋಗಗಳಿಗಾಗಿ ಸಿದ್ಧಪಡಿಸುತ್ತಿಲ್ಲ. ನಾಳಿನ ಜಗತ್ತಿಗಾಗಿ ಸಿದ್ಧಪಡಿಸುತ್ತಿದ್ದೇವೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಸುಬ್ರತೋ ಬಾಗ್ಚಿ ಅವರಿಗೆ ಕೌಶಲ್ಯಾಭಿವೃದ್ಧಿ ವಿಷನ್ ಗ್ರೂಪ್ ಅಧ್ಯಕ್ಷತೆ

ಕರ್ನಾಟಕದ ಕೌಶಲ್ಯಾಭಿವೃದ್ಧಿಯ ಭವಿಷ್ಯಕ್ಕೆ ಮಾರ್ಗದರ್ಶನ ನೀಡಲು ನಮ್ಮ ಸರ್ಕಾರವು ಕೌಶಲ್ಯಾಭಿವೃದ್ಧಿ ವಿಷನ್ ಗ್ರೂಪ್ ಅನ್ನು ರಚಿಸಿದೆ. ಮೈಂಡ್‌ಟ್ರೀ ಸಂಸ್ಥೆಯ ಸಹ–ಸ್ಥಾಪಕರಾದ ಸುಬ್ರೋತೋ ಬಾಗ್ಚಿ ಅವರು ಈ ಮಹತ್ವದ ಸಮಿತಿಯ ಅಧ್ಯಕ್ಷತೆ ವಹಿಸಲು ಒಪ್ಪಿಕೊಂಡಿರುವುದು ನನಗೆ ಸಂತೋಷ ತಂದಿದೆ" ಎಂದು ಅಭಿನಂದನೆಗಳನ್ನು ತಿಳಿಸಿದರು.

ಏಳು ವರ್ಷಗಳಲ್ಲಿ 7 ಲಕ್ಷ ತರಬೇತಿ ಗುರಿ

ನಮ್ಮ ಪ್ರಮುಖ ಯೋಜನೆಯಾದ ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆ 2.0 ಅಡಿಯಲ್ಲಿ ತರಬೇತಿ, ಹಿಂದಿನ ಕಲಿಕೆಯ ಮಾನ್ಯತೆ ವಿಶೇಷ ಯೋಜನೆಗಳು, ಉದ್ಯೋಗ ನಿಯೋಜನೆ ನೆರವು ಮತ್ತು ಡಿಜಿಟಲ್ ಆಡಳಿತವನ್ನು ಒಂದೇ ಚೌಕಟ್ಟಿನಡಿ ತರಲಾಗಿದೆ. ಈ ಯೋಜನೆಯಡಿ ಏಳು ವರ್ಷಗಳಲ್ಲಿ 7 ಲಕ್ಷ ಅಭ್ಯರ್ಥಿಗಳಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದೆ. ಇದರಲ್ಲಿ ಪ್ರತಿ ವರ್ಷ 75,000 ಅಭ್ಯರ್ಥಿಗಳಿಗೆ ಅಲ್ಪಾವಧಿ ತರಬೇತಿ ನೀಡಲಾಗುವುದು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಪೌರಕಾರ್ಮಿಕರಿಗೆ ನಿವೇಶನ ಭಾಗ್ಯ: ಸಚಿವ ಕೆ.ಎಚ್ ಮುನಿಯಪ್ಪ

ಬೆಂಗಳೂರು,ನ.4:ಪುರಸಭೆಯ ಪೌರಕಾರ್ಮಿಕರಿಗೆ ನಿವೇಶನ ಹಂಚಿಕೆಗೆ ಒಂದು ತಿಂಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಬೆಂಗಳೂರು ಗ್ರಾ. ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ ಹೇಳಿದರು.

ದೇವನಹಳ್ಳಿ ಟೌನ್ ನ ಪುರಸಭೆ ಕಾರ್ಯಾಲಯ ಆವರಣದಲ್ಲಿ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಹಾಗೂ ಆಯುಧ ಪೂಜೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರುಈ ಹಿಂದೆ ಇದೇ ಸಂದರ್ಭದಲ್ಲಿ ಪೌರಕಾರ್ಮಿಕರಿಗೆ ನಿವೇಶನ ಹಂಚಿಕೆ ಸಂಬಂಧಿಸಿದಂತೆ ಮಾತನಾಡಿದ್ದೆ. ಪೌರಕಾರ್ಮಿಕರಿಗೆ ನೀವೇಶನ ಹಂಚಿಕಗೆ ಸಂಬಂಧಿಸಿದಂತೆ ದೇವನಹಳ್ಳಿ ತಾಲ್ಲೂಕಿನ ಸಣ್ಣೆ ಗ್ರಾಮ ಹಾಗೂ ಕೆಂಪತಿಮ್ಮನಹಳ್ಳಿ ಯಲ್ಲಿ ನಿವೇಶನ ಅಭಿವೃದ್ಧಿ ಪಡಿಸಲಾಗಿದೆ. 30 ದಿನಗಳೊಳಗೆ ಹಕ್ಕುಪತ್ರ ವಿತರಣೆಗೆ ಸಿದ್ಧತೆ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಒಂದು ತಿಂಗಳಲ್ಲಿ ಹಕ್ಕು ಪತ್ರ ವಿತರಿಸಲಿದ್ದೇವೆ. ಜೊತೆಗೆ ವಿಜಯಪುರ ಪುರಸಭೆಯ ಪೌರಕಾರ್ಮಿಕರಿಗೆ ಹಕ್ಕು



ಪತ್ರ ವಿತರಣೆಗೆ ಸಿದ್ಧತೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದರು.

ದೇವನಹಳ್ಳಿಯಲ್ಲಿ 40–50 ವರ್ಷ ಬಾಳಿಕೆ ಬರುವ ಕಾಂಕ್ರೀಟ್ ರಸ್ತೆ ಮಾಡಲಾಗಿದೆ. ಬಜೆಟ್‌ನಲ್ಲಿ ಘೋಷಿಸಿರುವಂತೆ ದೇವನಹಳ್ಳಿ ಟೌನ್ ನಲ್ಲಿ ಯುಜಿಡಿ(ಒಳಚರಂಡಿ ಕಾಮಗಾರಿ) ಶೀಘ್ರ ಪ್ರಾರಂಭ ಮಾಡಲಾಗುವುದು. ವಿಜಯಪುರ ಪುರಸಭೆಗೆ ಕೂಡ ಯುಜಿಡಿ ಯೋಜನೆ ಅನುಷ್ಠಾನಗೊಳಿಸಲಾಗುವುದು ಎಂದರು.

ದೇವನಹಳ್ಳಿಯಲ್ಲಿ ಕೆಂಪೇಗೌಡ ಸ್ಮಾರಕ, ಮೆಟ್ರೋ ರೂಪುರೇಷೆ, ವಿಜಯಪುರ, ದೇವನಹಳ್ಳಿಗೆ ಕಾವೇರಿ ನೀರು ತರುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಜೊತೆಗೆ ಚರ್ಚಿಸಲಾಗಿದೆ, ಶೀಘ್ರ ಮುಖ್ಯಮಂತ್ರಿಗಳನ್ನು ಕರೆಸಿ ಕಾರ್ಯಕ್ರಮ ಮಾಡಲಾಗುವುದು ಎಂದು ಸಚಿವರು ಹೇಳಿದರು.

ದೇವನಹಳ್ಳಿಯಿಂದ ಬಾಗೇಪಲ್ಲಿವರೆಗೂ ದಶಪಥದ ಕಾಮಗಾರಿ ಶೀಘ್ರ ಆರಂಭವಾಗಲಿದೆ. ಜೊತೆಗೆ ದೇವನಹಳ್ಳಿ ಯಿಂದ ವೇಮಗಲ್ ವರೆಗೆ 6 ಪಥದ ರಸ್ತೆ ಕಾಮಗಾರಿ ಆರಂಭವಾಗಿದೆ. ದೇವನಹಳ್ಳಿ ತಾಲ್ಲೂಕು ನನಗೆ ಶಾಸಕ ಸ್ಥಾನ ನೀಡಿ, ಸಚಿವ ಸ್ಥಾನ ಸಿಗುವಂತೆ ಮಾಡಿದ್ದು ಈ ತಾಲ್ಲೂಕಿನ ಜನತೆ ಋಣ ನನ್ನ ಮೇಲಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಶಾಶ್ವತ ಕೆಲಸಗಳನ್ನು ಮಾಡುವ ನಿಟ್ಟಿನಲ್ಲಿ ಯೋಜನೆ ರೂಪಿಸಲಾಗುತ್ತಿದೆ ಎಂದರು.

ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ 18000 ಪೌರಕಾರ್ಮಿಕರನ್ನು ಕಾಯಂ ಮಾಡಲಾಗಿತ್ತು. ಈಗ ಮಾನ್ಯ ಡಿಕೆ ಶಿವಕುಮಾರ್ ನೇತೃತ್ವದಲ್ಲಿ 15000 ಸಾವಿರ ಪೌರಕಾರ್ಮಿಕರ ಪರ್ಮನೆಂಟ್ ಮಾಡಲಿದ್ದೇವೆ ಎಂದರು.

ಪೌರಕಾರ್ಮಿಕರ ಕೆಲಸ ಅತ್ಯಂತ ಕಷ್ಟಕರ, ಅವರಿಂದ ನಗರ ಸ್ವಚ್ಚವಾಗಿಡಲು ಸಾಧ್ಯ. ನಗರ ಪ್ರದೇಶಗಳಲ್ಲಿ ಸ್ಮಶಾನಕ್ಕೆ ಭೂಮಿ, ಮನೆ, ನಿವೇಶನಗಳು ಮುಖ್ಯ ಅವುಗಳನ್ನು ಒದಗಿಸಿಕೊಡಲು ಸರ್ಕಾರ ಬದ್ಧವಾಗಿದೆ. ಪೌರಕಾರ್ಮಿಕರ ಕಷ್ಟಕ್ಕೆ ಸರ್ಕಾರ ಸದಾ ನೆರವಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪೌರಕಾರ್ಮಿಕರಾದ ಮುನಿಯಪ್ಪ, ರಮೇಶ್, ಕಲಾವತಿ, ನಿರ್ಮಲ ಅವರನ್ನು ಉತ್ತಮ ಕೆಲಸಗಾರರು ಎಂದು ಗುರುತಿಸಿ ಸನ್ಮಾನಿಸಿದರು. ಜೊತೆಗೆ ನಿವೃತ್ತಿ ಪೌರಕಾರ್ಮಿಕರಿಗೆ ಸನ್ಮಾನಿಸಲಾಯಿತು.

ಬಳಿಕ ದೇವನಹಳ್ಳಿಯಲ್ಲಿ ನೂತನ ಹೈಟೆಕ್ ಬಸ್ ನಿಲ್ದಾಣ ಸ್ಥಾಪನೆಗೆ ಸಂಬಂಧಿಸಿ ಸ್ಥಳ ಪರಿಶೀಲನೆ ನಡೆಸಿದರು. ನಂತರ ನೂತನ ಹೂ ಮಾರುಕಟ್ಟೆ, ವಾರ್ಡ್ ನಂ 11 ರಲ್ಲಿ ಅಂಗನವಾಡಿ ನೂತನ ಕಟ್ಟಡ, ವಾರ್ಡ್ ನಂ 23 ರಲ್ಲಿ ಕುಡಿಯುವ ನೀರಿನ ಶುದ್ಧೀಕರಣ ಘಟಕ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ. ಕೆಎನ್ ಅನುರಾಧ, ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಜಗನ್ನಾಥ, ತಹಶೀಲ್ದಾರ್ ಅನಿಲ್, ಪುರಸಭೆ ಮುಖ್ಯಾಧಿಕಾರಿ ಶಿವಮೂರ್ತಿ, ಮುಖಂಡರಾದ ಪ್ರಸನ್ನ, ಚಿನ್ನಪ್ಪ, ಮಂಜುನಾಥ್, ತಹಶೀಲ್ದಾರ್ ಅನಿಲ್, ಮುಖಂಡರು, ಪುರಸಭೆಯ ಮಾಜಿ ಅಧ್ಯಕ್ಷರು, ಸದಸ್ಯರು, ಸಿಬ್ಬಂದಿ ಉಪಸ್ಥಿತರಿದ್ದರು.

ಎಸ್‌ಐಆರ್ ವಿರುದ್ಧ ಅಪಪ್ರಚಾರ ಮಾಡುವ ಕಾಂಗ್ರೆಸ್‌ಗೆ ಜನರಿಂದಲೇ ತಕ್ಕಪಾಠ: ಸಚಿವ ಡಾ.ಜಿತೇಂದ್ರ ಸಿಂಗ್

ಬೆಂಗಳೂರು, ನ.4: ಎಸ್‌ಐಆರ್ ವಿಷಯದಲ್ಲಿ ಅಪಪ್ರಚಾರ ಮಾಡುವ ಕಾಂಗ್ರೆಸ್ ಪಕ್ಷಕ್ಕೆ ಜನರೇ ಮುಂದಿನ ದಿನಗಳಲ್ಲಿ ತಕ್ಕ ಉತ್ತರ ಕೊಡಲಿದ್ದಾರೆ ಎಂದು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳೀದ್ದಾರೆ.

ಮಂಗಳೂರಿನ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನಪರಿಷತ್ ಚುನಾವಣೆಯು ಮತಪತ್ರದ ಆಧಾರದಲ್ಲೇ ನಡೆದಿದೆ. ಆದರೂ ಕಾಂಗ್ರೆಸ್ ಪಕ್ಷ ಸೋತಿದೆ. ಜನತೆ ಕಾಂಗ್ರೆಸ್ಸನ್ನು ದ್ವೇಷಿಸುವಂತಾಗಿದೆ ಎಂದು ತಿಳಿಸಿದರು.

ಮತದಾರರ ಸ್ಥಳಾಂತರ, ಸಾವು, ಹೊರದೇಶದಿಂದ ಅಕ್ರಮ ನುಸುಳುವಿಕೆಯ ಹಿನ್ನೆಲೆಯಲ್ಲಿ ಮತದಾರರ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ನಡೆಸುವುದು ಅನಿವಾರ್ಯವಾಗುತ್ತದೆ. ಕಾಂಗ್ರೆಸ್ ಪಕ್ಷವು ಸುಪ್ರೀಂ ಕೋರ್ಟ್, ಚುನಾವಣಾ ಆಯೋಗದ ವಿರುದ್ಧ ಮಾತನಾಡುತ್ತಿತ್ತು. ಕಳೆದ 20 ವರ್ಷಗಳಿಂದ ಎಸ್‌ಐಆರ್ ನಡೆದಿರಲಿಲ್ಲ. ಹೀಗೆ ಸುದೀರ್ಘ ಕಾಲ ನಡೆಯದ ಎಸ್‌ಐಆರ್ ವಿಚಾರದಲ್ಲಿ ಕ್ರಮ ಕೈಗೊಂಡಿದ್ದಕ್ಕಾಗಿ ನರೇಂದ್ರ ಮೋದಿಯವರ ನೇತೃತ್ವದ ಸರಕಾರ ಹಾಗೂ ಚುನಾವಣಾ ಆಯೋಗಕ್ಕೆ ಅಭಿನಂದನೆ ಸಲ್ಲುತ್ತದೆ ಎಂದು ಹೇಳಿದರು.

ಎರಡು ಕಡೆ ಇದ್ದವರ ಹೆಸರು ರದ್ದು ಮಾಡಿದ್ದು ಕಾಂಗ್ರೆಸ್, ಟಿಎಂಸಿಯಂಥ ಪಕ್ಷಗಳಿಗೆ ಸಮಸ್ಯೆಯಾಗಿದೆ. ಮೃತಪಟ್ಟವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದಿರುವುದು ತಪ್ಪೇ ಎಂದು ಪ್ರಶ್ನಿಸಿದ ಜಿತೇಂದ್ರ ಸಿಂಗ್, ಉತ್ತರ ಪ್ರದೇಶ, ಮಹಾರಾಷ್ಟ್ರ ಸೇರಿ ವಿವಿಧ ರಾಜ್ಯಗಳಲ್ಲಿ ಒಬ್ಬರೇ ಎರಡು ಮತ ಹೊಂದಿದ್ದವರ ಒಂದು ಕಡೆಯ ಹೆಸರು ರದ್ದು ಮಾಡಲಾಗಿದೆ. ಕರ್ನಾಟಕದಲ್ಲೂ 7 ಲಕ್ಷಕ್ಕೂ ಹೆಚ್ಚು ಮತದಾರರ ಹೆಸರು ಎರಡು ಕಡೆ ಮತದಾರರ ಪಟ್ಟಿಯಲ್ಲಿ ಇತ್ತು ಎಂದು ಗಮನ ಸೆಳೆದರು.ಪ್ರಜಾಪ್ರಭುತ್ವದ ಸಶಕ್ತೀಕರಣಕ್ಕೆ ಎಸ್‌ಐಆರ್ ಅನಿವಾರ್ಯ ಪ್ರಜಾಪ್ರಭುತ್ವದ ಸಶಕ್ತೀಕರಣಕ್ಕೆ ಎಸ್‌ಐಆರ್ ಅನಿವಾರ್ಯತೆ ಇತ್ತು ಎಂದ ಅವರು, ಅರ್ಹತೆ ಇದ್ದ ಯಾರ ಹೆಸರನ್ನೂ ಈ 13 ಕೋಟಿಯಲ್ಲಿ ರದ್ದು ಮಾಡಿಲ್ಲ ಎಂದು ಹೇಳಿದರು. ಬೋಗಸ್ ಮತ ಪಡೆಯುತ್ತಿದ್ದ ಹಾಗೂ ಮೃತ ಮತದಾರರ ಹೆಸರಿನಲ್ಲಿ ಬೇರೊಬ್ಬರಿಂದ ಮತದಾನ ಮಾಡಿಸುತ್ತಿದ್ದ ಕಾಂಗ್ರೆಸ್ ಪಕ್ಷಕ್ಕೆ ಈ ಪರಿಷ್ಕರಣೆಯಿಂದ ಆತಂಕ ಉಂಟಾಗಿದೆ ಎಂದು ವಿಶ್ಲೇಷಿಸಿದರು.

ರಾಹುಲ್ ವಿರುದ್ಧ ಬಸವರಾಜ ಬೊಮ್ಮಾಯಿ ವಾಗ್ದಾಳಿ



ಬೆಂಗಳೂರು, ನ.4: ಜಾರ್ಜ್ ಸೋರೋಸ್‌ನಿಂದ ಹಣ ಪಡೆದು ಭಾರತದ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸಲು ರಾಹುಲ್ ಗಾಂಧಿ ಹೋರಾಟ ಮಾಡುತ್ತಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು ಒಬ್ಬ ಹತಾಶ ರಾಜಕಾರಣಿಯಂತೆ ವರ್ತಿಸುತ್ತಿದ್ದಾರೆ. ತಮ್ಮ ಮೇಲಿರುವ ಆರೋಪಗಳನ್ನು ಇತರರ ಮೇಲೆ ಹೊರಿಸುವ ಪ್ರವೃತ್ತಿಯನ್ನು ಬೆಳೆಸಿಕೊಂಡಿದ್ದಾರೆ. ಜಾರ್ಜ್ ಸೋರೋಸ್‌ನಂತಹ ವಿದೇಶಿ ಶಕ್ತಿಗಳೊಂದಿಗೆ ಸಂಪರ್ಕ ಹೊಂದಿರುವವರ ಮೂಲಕ ಭಾರತದ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ ಪ್ರಯತ್ನಗಳು ನಡೆಯುತ್ತಿವೆ ಎಂಬ ಗಂಭೀರ ಪ್ರಶ್ನೆಗಳು ಇಂದು ದೇಶದ ಮುಂದೆ ಇವೆ. ವಿದೇಶಿ ಸಂಪರ್ಕಗಳ ಬಗ್ಗೆ ಮಾತನಾಡುವುದಾದರೆ, ಪದೇಪದೇ ವಿದೇಶ ಪ್ರವಾಸ ಕೈಗೊಳ್ಳುವ ರಾಹುಲ್ ಗಾಂಧಿಯವರೇ ತಮ್ಮ ವಿದೇಶಿ ಸಂಪರ್ಕಗಳ ಬಗ್ಗೆ ಸ್ಪಷ್ಟನೆ ನೀಡಬೇಕು. ವಿದೇಶಿ ನೆಲದಲ್ಲಿ ಭಾರತದ ಪ್ರಜಾಪ್ರಭುತ್ವದ ಬಗ್ಗೆ ಟೀಕೆ ಮಾಡುವುದು, ದೇಶದ ಆಂತರಿಕ ವಿಚಾರಗಳನ್ನು ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಚರ್ಚಿಸುವುದು ಮತ್ತು ಭಾರತದ ಘನತೆಗೆ ಧಕ್ಕೆ ತರುವ ಹೇಳಿಕೆ ನೀಡುವುದು ಅವರ ರಾಜಕೀಯ ನಡವಳಿಕೆಯಾಗಿದೆ ಎಂದು ಟೀಕಿಸಿದ್ದಾರೆ.

ಇಂತಹ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ನಿಲುವು ಮತ್ತು ಅದರ ಚಟುವಟಿಕೆಗಳ ಬಗ್ಗೆ ದೇಶದ ಜನತೆಗೆ ಸ್ಪಷ್ಟನೆ ನೀಡುವ ಜವಾಬ್ದಾರಿ ಕಾಂಗ್ರೆಸ್ ನಾಯಕರ ಮೇಲಿದೆ, ವಿದೇಶಿ ಹಣದ ಪ್ರಭಾವದಿಂದ ಭಾರತದ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ, ದೇಶದ ಏಕತೆ, ಅಖಂಡತೆ ಮತ್ತು ಸಾರ್ವಭೌಮತ್ವಕ್ಕೆ ಧಕ್ಕೆ ತರುವ ಪ್ರಯತ್ನ ನಡೆದರೂ ಅವುಗಳನ್ನು ಸಹಿಸಲು ಸಾಧ್ಯವಿಲ್ಲ. ಇಂತಹ ಪ್ರಯತ್ನಗಳ ಬಗ್ಗೆ ದೇಶದ ಜನತೆ ಜಾಗೃತರಾಗಿರಬೇಕು ಎಂದಿದ್ದಾರೆ.

ಇಡೀ ದೇಶದ ಜನರಿಗೆ ಮಾಡುವ ಅವಮಾನ

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮೊದಲು ದೇಶವನ್ನು ಪ್ರೀತಿಸುವ, ದೇಶದ ಹಿತವನ್ನೇ ಉಸಿರಾಗಿಸಿಕೊಂಡಿರುವ ನಾಯಕರು. ವೈಯಕ್ತಿಕ ಸುಖ, ಸ್ವಾರ್ಥ ಮತ್ತು ಅಧಿಕಾರದ ಆಸೆಗಳನ್ನು ಬದಿಗಿಟ್ಟು ತಮ್ಮ ಇಡೀ ಜೀವನವನ್ನು ದೇಶಸೇವೆಗೆ ಮುಡಿಪಾಗಿಟ್ಟಿರುವ ಮಹಾನ್ ನಾಯಕರು. ಅಂತಹ ವ್ಯಕ್ತಿಯ ವಿರುದ್ಧ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುವುದು ಕೇವಲ ಒಬ್ಬ ವ್ಯಕ್ತಿಗೆ ಮಾಡುವ ಅವಮಾನವಲ್ಲ, ಅದು ದೇಶದ ಅಭಿವೃದ್ಧಿಯನ್ನು ಬಯಸುವ ಕೋಟ್ಯಂತರ ಭಾರತೀಯರ ಭಾವನೆಗಳಿಗೆ ಮಾಡುವ ಅವಮಾನವಾಗಿದೆ. ಸೂರ್ಯನ ತೇಜಸ್ಸಿನ ಮುಂದೆ ಇತರ ಬೆಳಕುಗಳು ಮಂಕಾಗುವಂತೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೇಶಸೇವೆ, ದೂರದೃಷ್ಟಿ ಮತ್ತು ನಾಯಕತ್ವದ ಮುಂದೆ ಇಂತಹ ಕ್ಷುಲ್ಲಕ ಟೀಕೆಗಳಿಗೆ ಯಾವುದೇ ಮಹತ್ವವಿಲ್ಲ ಎಂದು ಬೊಮ್ಮಾಯಿ ಹೇಳಿದ್ದಾರೆ. ಆದ್ದರಿಂದ ಇಂತಹ ವ್ಯರ್ಥ ಆರೋಪಗಳಿಗೆ ಹೆಚ್ಚು ಮಹತ್ವ ನೀಡುವ ಅಗತ್ಯವಿಲ್ಲ. ಪ್ರಧಾನಮಂತ್ರಿ ನರೇಂದ್ರ ಮೋದಿ 2047ರ ವೇಳೆಗೆ ಭಾರತವನ್ನು ವಿಕಸಿತ ರಾಷ್ಟ್ರವನ್ನಾಗಿ ರೂಪಿಸುವ ಸಂಕಲ್ಪ ಮಾಡಿದ್ದಾರೆ. ಆತ್ಮನಿರ್ಭರ ಭಾರತ ನಿರ್ಮಾಣದ ಮೂಲಕ ಭಾರತವನ್ನು ಜಾಗತಿಕ ಮಟ್ಟದಲ್ಲಿ ಬಲಿಷ್ಠ ರಾಷ್ಟ್ರವನ್ನಾಗಿ ಮಾಡುವ ಗುರಿ ಹೊಂದಿದ್ದಾರೆ. ಈ ಮಹತ್ವದ ಸಂಕಲ್ಪಕ್ಕೆ ನಾವೆಲ್ಲರೂ ಸಂಪೂರ್ಣ ಬೆಂಬಲವಾಗಿ ನಿಲ್ಲಬೇಕು. ಅವರ ಸಂಕಲ್ಪವನ್ನು ನನಸಾಗಿಸಲು ನಾವೆಲ್ಲರೂ ಒಗ್ಗಟ್ಟಿನಿಂದ ಶ್ರಮಿಸೋಣ ಎಂದು ಬೊಮ್ಮಾಯಿ ಕರೆ ನೀಡಿದ್ದಾರೆ.

ದೆಹಲಿ ಕನ್ನಡ ಶಾಲೆಯಲ್ಲಿ ಕನ್ನಡದ ಕಂಪು-ಸಂಭ್ರಮದ ಕರ್ನಾಟಕ ರಾಜ್ಯೋತ್ಸವ!

ನವದೆಹಲಿ, ನ.4: ನಾಡು ದೂರವಾದರೂ ನುಡಿಯ ನಂಟು ದೂರವಾಗದು; ನೆಲ ಬದಲಾದರೂ ಕನ್ನಡದ ಮೇಲಿನ ಅಭಿಮಾನ ಎಂದಿಗೂ ಮಾಸದು. ಈ ಮಾತಿಗೆ ಸಾಕ್ಷಿಯಾಯಿತು ದೆಹಲಿ ಕನ್ನಡಶಾಲೆ ಮತ್ತು ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ನಡೆದ 71ನೇ ಕರ್ನಾಟಕ ರಾಜ್ಯೋತ್ಸವದ ಸಂಭ್ರಮ.

ಕನ್ನಡ ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯ ವೈಭವವನ್ನು ಸಾರುವ ಈ ವಿಶೇಷ ಸಂದರ್ಭದಲ್ಲಿ ಶಾಲೆಯ ಆವರಣ ಕನ್ನಡಮಯವಾಗಿ ಕಂಗೊಳಿಸಿತು. ನಾಡಗೀತೆಯ ಸುಮಧುರ ಸ್ವರಗಳ ನಡುವೆ ಅಧ್ಯಕ್ಷ ಡಾ. ಅವನೀಂದ್ರನಾಥರಾವ್ ವೈ ಅವರು ಕನ್ನಡ ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವದ ಸಂಭ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಭಾರತ ಮಹಾಕುಲ ಸಚಿವರು ಮತ್ತು ಜನಗಣನಾ ಆಯುಕ್ತರ ಕಚೇರಿಯ ಸಹಾಯಕ ಮಹಾ ಕುಲಸಚಿವ ಡಾ. ಬಿ.ಪಿ. ಹೇಮಾನಂದ ಅವರು ಮಾತನಾಡಿ, ಹೊರನಾಡಿನಲ್ಲಿ ನೆಲೆಸಿರುವ ಕನ್ನಡಿಗರ ಭಾಷಾಭಿಮಾನ, ಕನ್ನಡದ ಮೇಲಿನ ಪ್ರೀತಿ ಹಾಗೂ ನಾಡಿನ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾಳಜಿ ಅನನ್ಯವಾದುದು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಅವನೀಂದ್ರನಾಥರಾವ್ ಮಾತನಾಡಿ, ವಿವಿಧ ಸಂಸ್ಕೃತಿ ಮತ್ತು ಧರ್ಮಗಳ ಸಂಗಮವಾಗಿರುವ ಕರ್ನಾಟಕವು ಕಲೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಶ್ರೀಮಂತಿಕೆಯಿಂದ ವಿಶ್ವದ ಗಮನ ಸೆಳೆದಿದೆ. ಇಂತಹ ಶ್ರೀಮಂತ ಪರಂಪರೆಯ ನಾಡು ಇನ್ನಷ್ಟು ಅಭಿವೃದ್ಧಿ ಹೊಂದಿ ಉನ್ನತಿಯ ಶಿಖರಕ್ಕೇರಲಿ ಎಂದು ಆಶಿಸಿದರು.

ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ಆರ್. ರೇಣುಕುಮಾರ್ ಅವರು ಕರ್ನಾಟಕ ರಾಜ್ಯೋತ್ಸವದ ಐತಿಹಾಸಿಕ ಮಹತ್ವವನ್ನು ವಿವರಿಸಿ, ಎಲ್ಲರಿಗೂ ರಾಜ್ಯೋತ್ಸವದ ಶುಭಾಶಯಗಳನ್ನು ಕೋರಿದರು. ಇದಕ್ಕೂ ಮುನ್ನ ದೆಹಲಿ ಕರ್ನಾಟಕ ಸಂಘದಿಂದ ಕರ್ನಾಟಕ ಭವನದವರೆಗೆ ನಡೆದ ಸೌಹಾರ್ದ ನಡಿಗೆ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಕಾರ್ಯದರ್ಶಿಗಳು, ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶುಪಾಲರು, ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸೇರಿದಂತೆ ನೂರಾರು ಕನ್ನಡಾಭಿಮಾನಿಗಳು ಉತ್ಸಾಹದಿಂದ ಪಾಲ್ಗೊಂಡು ಕನ್ನಡದ ಏಕತೆ, ಅಭಿಮಾನ ಮತ್ತು ಸಾಂಸ್ಕೃತಿಕ ಒಗ್ಗಟ್ಟನ್ನು ಸಾರಿದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ವೀಣಾ ಜಗದೀಶ್, ಆಡಳಿತ ಮಂಡಳಿಯ ಸದಸ್ಯರಾದ ಬಿ.ಎಸ್. ಮೋಹನ್‌ಕುಮಾರ್, ಗಿರೀಶ್ ಎಸ್., ರಾಧಾಕೃಷ್ಣ, ಹರಿಪ್ರಿಯಾ ಎಸ್., ಡಾ. ಅಶೋಕ್ ಗೋನಾಳ್ ಹಾಗೂ ಉಪ ಪ್ರಾಂಶುಪಾಲೆ ಪ್ರೇಮಲತಾ ಬಿ. ಉಪಸ್ಥಿತರಿದ್ದರು. ಪ್ರಾಂಶುಪಾಲ ಪ್ರಶಾಂತ್ ಕುಮಾರ್ ಅವರು ಸ್ವಾಗತಿಸಿದರು. ಶಿಕ್ಷಕ ನಾಗರಾಜ್ ಅವರು ಅತಿಥಿಗಳನ್ನು ಪರಿಚಯಿಸಿದರು. ಆರಂಭದಲ್ಲಿ ಕನ್ನಡತಾಯಿ ಭುವನೇಶ್ವರಿಗೆ ದೀಪ ಬೆಳಗಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಪೂರ್ವಕ ನಮನಗಳನ್ನು ಅರ್ಪಿಸಲಾಯಿತು. ಶಿಕ್ಷಣ ಸಂಸ್ಥೆಯ ಗೌರವ ಕಾರ್ಯದರ್ಶಿ ಕಾಶಿನಾಥ್ ಬಿರಾದರ್ ಅವರು ವಂದನಾರ್ಪಣೆ ಮಾಡಿದರು. ಶಿಕ್ಷಕಿ ರೇಖಾ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು. ಕಾರ್ಯಕ್ರಮದ ಮತ್ತೊಂದು ಆಕರ್ಷಣೆಯಾಗಿದ್ದ ಸಾಂಸ್ಕೃತಿಕ ಸಂಭ್ರಮದಲ್ಲಿ ಕರ್ನಾಟಕದಿಂದ ಆಗಮಿಸಿದ ಕಲಾವಿದರು ಮನಮೋಹಕ ವೀರಗಾಸೆ ಪ್ರದರ್ಶನ ನೀಡಿದರು. ವೀರಗಾಸೆಯ ವೀರಾವೇಶದ ಹೆಜ್ಜೆಗಳು ಮತ್ತು ಸಾಂಪ್ರದಾಯಿಕ ಕಲೆಯ ವೈಭವಕ್ಕೆ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಹೆಜ್ಜೆಹಾಕಿ ಸಂಭ್ರಮಿಸಿದರು. ಈ ದೃಶ್ಯ ನೆರೆದಿದ್ದ ಎಲ್ಲರ ಗಮನ ಸೆಳೆದು ಕಾರ್ಯಕ್ರಮಕ್ಕೆ ವಿಶೇಷ ಕಳೆ ತಂದಿತು. ಒಟ್ಟಿನಲ್ಲಿ, ದೆಹಲಿಯ ನೆಲದಲ್ಲಿ ಕನ್ನಡದ ಕಂಪನ್ನು ಪಸರಿಸಿದ ಈ ರಾಜ್ಯೋತ್ಸವವು ನಾಡು–ನುಡಿ–ಸಂಸ್ಕೃತಿಯ ಮೇಲಿನ ಅಭಿಮಾನವನ್ನು ಮತ್ತಷ್ಟು ಗಟ್ಟಿಗೊಳಿಸಿತು. ಕನ್ನಡಿಗರು ಎಲ್ಲೇ ಇರಲಿ, ಕನ್ನಡದ ಮನಸ್ಸು ಒಂದೇ ಎಂಬ ಸಂದೇಶವನ್ನು ಸಾರಿದ ಈ ಸಂಭ್ರಮ ಎಲ್ಲರ ಮನದಲ್ಲಿ ಅವಿಸ್ಮರಣೀಯ ನೆನಪಾಗಿ ಉಳಿಯಿತು.

ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಇನ್ಮುಂದೆ ಮಕ್ಕಳ ಗ್ರಾಮಸಭೆ ಕಡ್ಡಾಯ: ಸಚಿವ ಈಶ್ವರ ಖಂಡ್ರೆ


ಬೆಂಗಳೂರು, ನ.4: ದೇಶದ ಪ್ರಥಮ ಪ್ರಧಾನಿ ಪಂಡಿತ್ ನೆಹರೂ ಅವರ ಜನ್ಮದಿನವನ್ನು ಮಕ್ಕಳ ದಿನವಾಗಿ ಆಚರಿಸುವ ಸಂದರ್ಭದಲ್ಲಿ, ಇಂದಿನ ಮಕ್ಕಳಿಗೆ ಗ್ರಾಮ ಪಂಚಾಯತಿಯ ಪರಿಕಲ್ಪನೆ ಪರಿಚಯಿಸಲು ಮಕ್ಕಳ ಗ್ರಾಮ ಸಭೆ ನಡೆಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

ಇಲಾಖೆಯ ಪ್ರಧಾನ ಕಾರ್ಯದರ್ಶಿಯವರಿಗೆ ಈ ಸಂಬಂಧ ಸೂಚನೆ ನೀಡಿರುವ ಅವರು, 2006ರಲ್ಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ಮಕ್ಕಳ ಗ್ರಾಮಸಭೆ ನಡೆಸುವಂತೆ ಸುತ್ತೋಲೆ ಹೊರಡಿಸಿದ್ದರೂ, ಕೆಲವು ಪಂಚಾಯತಿಯಲ್ಲಿ ಮಾತ್ರ ಮಕ್ಕಳ ಗ್ರಾಮಸಭೆ ನಡೆಯುತ್ತಿದೆ. ಈ ವರ್ಷದಿಂದ ಕಡ್ಡಾಯವಾಗಿ ಎಲ್ಲ ಗ್ರಾಮ ಪಂಚಾಯತಿ ಯಲ್ಲೂ ಕಾರ್ಯಕ್ರಮ ಆಯೋಜಿಸಿ, ಇಂದಿನ ಮಕ್ಕಳಿಗೆ ಗ್ರಾಮ ಪಂಚಾಯತಿಯ ಕಾರ್ಯವೈಖರಿಯ ಪರಿಚಯ ಮಾಡಿಸುವುದರ ಜೊತೆಗೆ ಮಕ್ಕಳ ಹಕ್ಕುಗಳು, ಪೌಷ್ಠಿಕಾಂಶ, ಶಿಕ್ಷಣ, ಆರೋಗ್ಯದ ಕುರಿತಂತೆಯೂ ಮಾಹಿತಿ ಒದಗಿಸಬೇಕು ಎಂದು ಸೂಚಿಸಿದ್ದಾರೆ. ಬೆಂಗಳೂರಿನ ಕಾನ್ವೆಂಟ್ ಶಾಲೆಯ ಮಕ್ಕಳಿಗೆ ಹಳ್ಳಿ ಹೇಗಿರುತ್ತದೆ ಎಂಬ ಕಲ್ಪನೆಯೂ ಇಲ್ಲ. ಹೀಗಾಗಿ ಬೆಂಗಳೂರು ಜಕ್ಕೂರಿನ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯ ಆವರಣದಲ್ಲಿರುವ ಪಾರಂಪರಿಕ ಮಾದರಿ ಗ್ರಾಮದಲ್ಲಿ ನ.13 ರಿಂದ 30ರವರೆಗೆ ಮಕ್ಕಳ ಗ್ರಾಮಸಭೆ ಆಯೋಜಿಸಿ, ವಿವಿಧ ಶಾಲೆಯ ಮಕ್ಕಳು ಪಾಲ್ಗೊಳ್ಳಲು ಅವಕಾಶ ಕಲ್ಪಿಸುವಂತೆಯೂ ತಮ್ಮ ಟಿಪ್ಪಣಿಯಲ್ಲಿ ತಿಳಿಸಿದ್ದಾರೆ. ಮಕ್ಕಳ ಗ್ರಾಮಸಭೆಯ ಮೂಲಕ ಮುಂದಿನ ಪ್ರಜೆಗಳಾದ ಮಕ್ಕಳಿಗೆ ಜಾಗತಿಕ ತಾಪಮಾನ ಏರಿಕೆಯ ಪ್ರಸಕ್ತ ಕಾಲಘಟ್ಟದಲ್ಲಿ ನೈರ್ಮಲ್ಯ, ಜಲ ಸಂರಕ್ಷಣೆ, ಕೆರೆ ಸಂರಕ್ಷಣೆ, ಪರಿಸರ ಸಂರಕ್ಷಣೆಯ ಮಹತ್ವವನ್ನೂ ತಿಳಿಸಲು ಈಶ್ವರ ಖಂಡ್ರೆ ಸೂಚಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಕೇಂದ್ರ ಪೆಟ್ರೋಲ್, ಡೀಸೆಲ್ ದರ ಇಳಿಸಿದರೆ ಪ್ರಯಾಣದರ ಇಳಿಕೆಗೆ ಸಿದ್ಧ: ಸಿಎಂ ಡಿ.ಕೆ. ಶಿವಕುಮಾರ್ ತಾಕೀತು

ಪ್ರಧಾನಿಗೆ ಹೇಳಿ ಇಂಧನ ಮೇಲಿನ ಸೆಸ್ ಹಾಗೂ ತೆರಿಗೆ ಹೊರೆ ಕಡಿಮೆ ಮಾಡಿಸುವಂತೆ ಪ್ರತಿಪಕ್ಷಗಳಿಗೆ ಸವಾಲು



ಬೆಂಗಳೂರು, ನ.4: ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಇಳಿಸಿದರೆ ಅದಕ್ಕೆ ಅನುಗುಣವಾಗಿ ರಾಜ್ಯದಲ್ಲೂ ಬಸ್ ಪ್ರಯಾಣ ದರ ಕಡಿಮೆ ಮಾಡಲು ಸಿದ್ಧ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದರು.

ಬಸ್ ಪ್ರಯಾಣ ದರ ಏರಿಕೆ ಖಂಡಿಸಿ ಪ್ರತಿಪಕ್ಷಗಳು ಗುರುವಾರ ರಾಜ್ಯಾದ್ಯಂತ ಪ್ರತಿಭಟನೆಗೆ ಕರೆ ನೀಡಿರುವ ಕುರಿತು ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಸಾರಿಗೆ ಸಂಸ್ಥೆಗಳು ನಷ್ಟದಲ್ಲಿವೆ. ಮೂರು ವಾರ ಅಥವಾ ಹತ್ತು ದಿನಗಳ ಮುಂಚಿತವಾಗಿಯೇ ಡೀಸೆಲ್ ಖರೀದಿಸಲು ಹಣವಿಲ್ಲದ ಪರಿಸ್ಥಿತಿ ಎದುರಾಗಿತ್ತು. ಸರಕಾರವೇ ಹಣ ನೀಡಬೇಕಾದ ಸ್ಥಿತಿ ನಿರ್ಮಾಣವಾಗಿತ್ತು. ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣದ ಅವಕಾಶ ಕಲ್ಪಿಸಿರುವುದರಿಂದ ಸಾರಿಗೆ ಸಂಸ್ಥೆಗಳ ಮೇಲೆ ಹೆಚ್ಚಿನ ಆರ್ಥಿಕ ಹೊರೆಬಿದ್ದಿದೆ. ಹೀಗಾಗಿ ಒಂದೊಂದು ಹಂತದಲ್ಲಿ ಎರಡು, ಮೂರು ರೂಪಾಯಿ ದರ ಹೆಚ್ಚಿಸಿರಬಹುದು ಎಂದು ಹೇಳಿದರು.

ಹಾಲಿನ ದರ ಏರಿಕೆ ಬಗ್ಗೆ ಸ್ಪಷ್ಟನೆ

ಹಾಲಿನ ದರ ಲೀಟರ್‌ಗೆ 8 ರೂ. ಬದಲಿಗೆ 12 ರೂ. ಹೆಚ್ಚಳವಾಗಿದೆ ಎಂಬ ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗೆ ಉತ್ತರಿಸಿ, ಹಾಲಿನ ದರದಲ್ಲಿ ವ್ಯತ್ಯಾಸವಾಗಲು ಅದರ ಗುಣಮಟ್ಟ ಹಾಗೂ ಕೊಬ್ಬಿನ ಅಂಶ ಕಾರಣ. ಎಲ್ಲ ಹಾಲೂ ಒಂದೇ ರೀತಿಯಲ್ಲಿರುವುದಿಲ್ಲ. ಸಾಮಾನ್ಯ ಹಾಲು, ನಾಟಿ ಹಸುವಿನ ಹಾಲು ಹಾಗೂ ಎಮ್ಮೆ ಹಾಲು ಬೇರೆ ಬೇರೆಯಾಗಿರುತ್ತವೆ. ಅವುಗಳ ಕೊಬ್ಬಿನ ಅಂಶವೂ (ಫ್ಯಾಟ್) ವಿಭಿನ್ನವಾಗಿರುತ್ತದೆ. ಈ ವ್ಯತ್ಯಾಸಗಳನ್ನು ಜನರು ಅರ್ಥಮಾಡಿಕೊಳ್ಳಬೇಕು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.


ಡೀಸೆಲ್, ಪೆಟ್ರೋಲ್ ಬೆಲೆ, ಅಡುಗೆ ಅನಿಲದ ಬೆಲೆ ಏರಿಕೆಯಾದಾಗ ವಿಪಕ್ಷಗಳು ಏಕೆ ಧ್ವನಿ ಎತ್ತಲಿಲ್ಲ, ರಸಗೊಬ್ಬರ, ಕೀಟನಾಶಕ, ಕಬ್ಬಿಣ, ಸಿಮೆಂಟ್ ಹಾಗೂ ಔಷಧಗಳ ಬೆಲೆ ಹೆಚ್ಚಳವಾದಾಗಲು ಪ್ರತಿಭಟಿಸಲಿಲ್ಲ. ಈ ಏರಿಕೆಗಳ ಬಗ್ಗೆ ವಿಪಕ್ಷಗಳಿಗೆ ಕಾಳಜಿ ಇಲ್ಲವೇ ಎಂದು ಪ್ರಶ್ನಿಸಿದರು. ಬರಗಾಲದಲ್ಲಿ ರೈತರು ಸಂಕಷ್ಟದಲ್ಲಿದ್ದಾರೆ ಎನ್ನುವ ಅರಿವಿದೆ. ಅದೇ ರೀತಿ ಸಾರಿಗೆ ಸಂಸ್ಥೆಗಳೂ ಉಳಿಯಬೇಕು. ಅವುಗಳಿಗೂ ಆರ್ಥಿಕವಾಗಿ ಚೇತರಿಸಿಕೊಳ್ಳಲು ಅವಕಾಶ ನೀಡಬೇಕು ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿ, ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ವಿಧಿಸುತ್ತಿರುವ ಸೆಸ್ ಹಾಗೂ ತೆರಿಗೆ ಹೊರೆ ಕಡಿಮೆ ಮಾಡಿಸಲಿ. ಕೇಂದ್ರ ಸರ್ಕಾರ ಇಂಧನ ಬೆಲೆ ಇಳಿಸಿದರೆ ರಾಜ್ಯ ಸರ್ಕಾರವೂ ಅದಕ್ಕೆ ತಕ್ಕಂತೆ ಕ್ರಮ ಕೈಗೊಳ್ಳಲಿದೆ ಎಂದು ವಿಪಕ್ಷಗಳಿಗೆ ಸವಾಲು ಹಾಕಿದರು.

ಸಾರಿಗೆ ಇಲಾಖೆ ನಷ್ಟ ತಗ್ಗಿಸಲು ಪ್ರಯಾಣದರ ಏರಿಕೆ: ಸಚಿವ ಬೈರತಿ ಸುರೇಶ್ ಸ್ಪಷ್ಟನೆ

ಕನಿಷ್ಠ 4 ರೂ.ನಿಂದ 18ರೂ.ವರೆಗೆ ಏರಿಕೆ, ಪರಿಷ್ಕೃತ ದರ ತಕ್ಷಣದಿಂದಲೇ ಜಾರಿ

ಬೆಂಗಳೂರು, ನ.4: ಹಾಲಿನ ದರ ಏರಿಕೆಯ ಬೆನ್ನಲ್ಲೇ ರಾಜ್ಯ ಸಾರಿಗೆ ಬಸ್ ದರವನ್ನು ಪರಿಷ್ಕರಣೆ ಮಾಡಲಾಗಿದ್ದು, ಕನಿಷ್ಠ 4ರಿಂದ 18 ರೂಪಾಯಿ ಏರಿಕೆ ಮಾಡಲಾಗಿದೆ. ವಾಯುವ್ಯ, ಕಲ್ಯಾಣ ಕರ್ನಾಟಕ ಮತ್ತು ಕೆಎಸ್‌ಆರ್‌ಟಿಸಿ ಸಾರಿಗೆ ನಿಗಮಗಳಲ್ಲಿ ಶೇ.23 ಹಾಗೂ ಬಿಎಂಟಿಸಿ ಶೇ.35ರಷ್ಟು ಪ್ರಯಾಣ ದರದಲ್ಲಿ ಏರಿಸಲಾಗಿದೆ. ಪರಿಷ್ಕೃತ ದರ ತಕ್ಷಣ ದಿಂದಲೇ ಜಾರಿಯಾಗಲಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದರು.



ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಡಿಸೇಲ್ ಬೆಲೆ ಏರಿಕೆ, ನೌಕರರ ವೇತನ ಹೆಚ್ಚಳ ಹಾಗೂ ನಿಗಮಗಳ ಹೊಣೆಗಾರಿಕೆ ಹಾಗೂ ಸಾಲ ಪ್ರಮಾಣ ಅಧಿಕವಾಗಿದೆ. ಕಳೆದ 10 ವರ್ಷಗಳಲ್ಲಿ ಬಿಎಂಟಿಸಿಯಲ್ಲಿ ಒಂದು ಬಾರಿ ಹಾಗೂ ಇನ್ನುಳಿದ ಮೂರು ನಿಗಮಗಳಲ್ಲಿ ಎರಡು ಬಾರಿ ಪ್ರಯಾಣ ದರ ಏರಿಕೆ ಮಾಡಲಾಗಿದೆ. ಹೀಗಾಗಿ ಸಾರಿಗೆ ಇಲಾಖೆಯಲ್ಲಿ ನಿಗಮಗಳು ನಷ್ಟದಲ್ಲಿವೆ. ನಷ್ಟ ಪ್ರಮಾಣ ಇಳಿಸಲು ದರ ಏರಿಕೆ ಮಾಡಲಾಗಿದೆ ಎಂದು ತಿಳಿಸಿದರು.

ಹೊಣೆಗಾರಿಕೆ ಮತ್ತು ಸಾಲವೇ 9912 ಕೋಟಿ ರೂ.ನಷ್ಟಿದೆ

ನಾಲ್ಕು ನಿಗಮಗಳಲ್ಲಿ ಬಾಕಿ ಮತ್ತು ಹೊಣೆಗಾರಿಕೆ 7,719 ಕೋಟಿ ರೂ. ಹಾಗೂ ಸಾಲ 2,192 ಕೋಟಿ ರೂ.ಗಳಷ್ಟಿದೆ. ಒಟ್ಟು 9,912 ಕೋಟಿ ಹೊಣೆಗಾರಿಕೆ ಮತ್ತು ಸಾಲವಿದೆ. ಸರ್ಕಾರದಿಂದ 5 ಸಾವಿರ ಕೋಟಿ ಶಕ್ತಿ ಯೋಜನೆಯಿಂದ ಬಾಕಿಯಿದೆ. ಪ್ರತಿ ವರ್ಷ 16 ಸಾವಿರ ಕೋಟಿ ಖರ್ಚಾಗುತ್ತಿದೆ. ಈ ಪೈಕಿ 2 ಸಾವಿರ ಕೋಟಿ ನಷ್ಟವಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

ದರ ಏರಿಕೆ ಎಷ್ಟು-

- **ಸಾಮಾನ್ಯ ಸಾರಿಗೆಗಳಲ್ಲಿ ನೆಲಮಂಗಲದಿಂದ 35 ರೂ.ನಿಂದ 44 ರೂ.**
- **ವೇಗದೂತ ಸಾರಿಗೆಗಳಲ್ಲಿ ಗರಿಷ್ಠ 18 ರೂ.**
- **ಬಿಎಂಟಿಸಿಯಲ್ಲಿ 2 ಕಿ.ಮೀವರೆಗೆ 4 ರೂ., 2-4 ಕಿ.ಮೀವರೆಗೆ 6 ರೂ., ದೂರದ ಪ್ರಯಾಣ ದರ 12 ರೂ.**
- **ಬಿಎಂಟಿಸಿ ವ್ಯಾಪ್ತಿಯಲ್ಲಿ ಓಡಾಡುವ ಹವಾನಿಯಂತ್ರಿತ ಸಾರಿಗೆಗಳಲ್ಲಿ 6 ಕಿ.ಮೀವರೆಗಿನ ಪ್ರಯಾಣಕ್ಕೆ 5 ರೂ., 6ರಿಂದ 18 ಕಿ.ಮೀ.ವರೆಗೆ 10 ರೂ.ರೂಪಾಯಿ, 6 ಕಿ.ಮೀ.ನಿಂದ 18 ಕಿ.ಮೀವರೆಗಿನ ಪ್ರಯಾಣಕ್ಕೆ 10 ರೂಪಾಯಿ ಏರಿಸಲಾಗಿದೆ. ದೂರದ ಪ್ರಯಾಣಕ್ಕೆ 15 ರೂ.**

ವಿಮಾನದ ಎಜೆಕ್ಷನ್ ಸೀಟು ತಯಾರಿಕಾ ಸಂಸ್ಥೆ ಬೇಕರ್‌ನಿಂದ 380 ಕೋಟಿ ಹೂಡಿಕೆ

ವಿಜಯಪುರದಲ್ಲಿ ಹೈಪವರ್ ಮೈಕ್ರೋವೇವ್ ತಯಾರಿಕೆ ಸ್ಥಾವರ: ಸಚಿವ ಎಂ.ಬಿ. ಪಾಟೀಲ್

ಬೆಂಗಳೂರು, ನ.4: ಯುನೈಟೆಡ್ ಕಿಂಗಡಮ್ ಮೂಲದ ಮಾರ್ಟಿನ್–ಬೇಕರ್ 380 ಕೋಟಿ ಬಂಡವಾಳ ಹೂಡಿಕೆ ಮಾಡಲಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ತಮ್ಮನ್ನು ಭೇಟಿಯಾದ ಕಂಪನಿಯ ಉನ್ನತ ಮಟ್ಟದ ಪ್ರತಿನಿಧಿಗಳ ಜತೆ ಮಾತುಕತೆ ನಡೆಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ಅವರು, ಸೇನಾ ವಿಮಾನಗಳಲ್ಲಿ ಬಳಕೆಯಾಗುವ ಎಜೆಕ್ಷನ್ ಸೀಟುಗಳು ಮತ್ತು ವಿಮಾನ ಸಹ ಸಿಬ್ಬಂದಿಯ ಜೀವರಕ್ಷಣೆಗೆ ಬೇಕಾಗುವ ಸುರಕ್ಷಾ ಸಾಧನಗಳನ್ನು ತಯಾರಿಸುವ ಮಾರ್ಟಿನ್–ಬೇಕರ್ ಕಂಪನಿಯು ಜಾಗತಿಕ ಮಟ್ಟದ ಉದ್ಯಮವಾಗಿದೆ.

ಅದು ಉನ್ನತ ಮಟ್ಟದ ಕೌಶಲ್ಯ ಬೇಡುವ 500ಕ್ಕೂ ಹೆಚ್ಚು ಉದ್ಯೋಗಸೃಷ್ಟಿ ಮಾಡಲಿರುವ ತನ್ನ ತಯಾರಿಕಾ ಸ್ಥಾವರ ನಿರ್ಮಾಣ ಯೋಜನೆಗೆ ಹಾರೋಹಳ್ಳಿ ಕೈಗಾರಿಕಾ ಪ್ರದೇಶದ 5ನೇ ಹಂತದಲ್ಲಿ 10 ಎಕರೆ ಕೇಳಿದೆ. ಇದನ್ನು ಶೀಘ್ರವೇ ಒದಗಿಸಲಾಗುವುದು ಎಂದಿದ್ದಾರೆ.



ವಿಜಯಪುರದಲ್ಲಿ ಟಾನ್ಟೋ ಇಮೇಜಿಂಗ್ ಹೂಡಿಕೆ

ರಕ್ಷಣಾ ಕ್ಷೇತ್ರಕ್ಕೆ ಅಗತ್ಯವಿರುವ ಎಲೆಕ್ಟ್ರೋ–ಆಪ್ಟಿಕಲ್, ಇನ್ಫ್ರಾರೆಡ್ ವ್ಯವಸ್ಥೆ, ಥರ್ಮಲ್ ಇಮೇಜಿಂಗ್, ಆಧುನಿಕ ಸೆನ್ಸರ್ ತಂತ್ರಜ್ಞಾನ, ಸ್ವಯಂಚಾಲಿತ ರಕ್ಷಣಾ ಸಾಧನಗಳು ಮುಂತಾದವನ್ನು ತಯಾರಿಸುವ ಟಾನ್ಟೋ ಇಮೇಜಿಂಗ್ ಇಂಡಿಯಾ ಕೂಡ ರಾಜ್ಯದಲ್ಲಿ ಹೂಡಿಕೆ ಮಾಡಲಿದೆ. ಡೀಪ್–ಟೆಕ್ ಪರಿಣತಿ ಹೊಂದಿರುವ ಕಂಪನಿಯು ಹೈ–ಪವರ್ ಮೈಕ್ರೋವೇವ್ ತಯಾರಿಕೆ ಘಟಕದ ಅಭಿವೃದ್ಧಿಗೆ ಬೆಂಗಳೂರಿನ ಐಟಿಐಆರ್ ವ್ಯಾಪ್ತಿಯಲ್ಲಿ 5 ಎಕರೆ ಮತ್ತು ತನ್ನ ಪರೀಕ್ಷಾ ಸೌಲಭ್ಯಗಳ ಘಟಕ ನಿರ್ಮಾಣಕ್ಕೆ ವಿಜಯಪುರ ಜಿಲ್ಲೆಯ ಮುಳವಾಡದಲ್ಲಿ 130 ಎಕರೆ ಜಾಗ ಕೇಳಿದೆ ಎಂದು ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಮುಳವಾಡದಲ್ಲಿ ಕಂಪನಿಯು ತನ್ನ ಎಲ್ಲ ಪರೀಕ್ಷೆ, ಮೌಲ್ಯಮಾಪನ, ಪ್ರದರ್ಶನ ಮುಂತಾದವುಗಳನ್ನು ನಡೆಸಲಿದೆ. ಬೆಂಗಳೂರಿನ ಉದ್ದೇಶಿತ ಸ್ಥಾವರದಲ್ಲಿ ಹೈಪವರ್ ಮೈಕ್ರೋವೇವ್ ಸಿಸ್ಟಂ ಮತ್ತು ಅದಕ್ಕೆ ಪೂರಕವಾದ ತಂತ್ರಜ್ಞಾನಗಳನ್ನು ಅಭಿವೃದ್ಧಿ ಪಡಿಸಲು ಕಾರ್ಯತಂತ್ರ ರೂಪಿಸಿದೆ ಎಂದು ಪಾಟೀಲ್ ಹೇಳಿದ್ದಾರೆ.

ಮಾರ್ಟಿನ್ ಬೇಕರ್ ಕಂಪನಿ ತಯಾರಿಸಿರುವ 900ಕ್ಕೂ ಹೆಚ್ಚು ಎಜೆಕ್ಷನ್ ಸೀಟುಗಳು ನಮ್ಮ ದೇಶದ ವಾಯುಪಡೆ ಮತ್ತು ನೌಕಾಪಡೆಯ ವಿಮಾನಗಳಲ್ಲಿ ಬಳಕೆಯಲ್ಲಿವೆ. ಕಂಪನಿಯು ಹೊಂದಿರುವ ಆಧುನಿಕ ತಂತ್ರಜ್ಞಾನವು ಪೈಲಟ್‌ಗಳ ಸುರಕ್ಷತೆ ಮತ್ತು ಸೇನಾ ವಿಮಾನ ಕಾರ್ಯಾಚರಣೆಗಳಲ್ಲಿ ಕಣ್ಗಾವಲು ವ್ಯವಸ್ಥೆಯಲ್ಲಿ ಮಹತ್ತ್ವದ ಪಾತ್ರ ವಹಿಸುವ ಸಾಮರ್ಥ್ಯ ಹೊಂದಿದೆ. ರಾಜ್ಯದಲ್ಲಿ ಅದು ಮಾಡುತ್ತಿರುವ ಹೂಡಿಕೆಯಿಂದ ಸ್ವದೇಶಿ ತಯಾರಿಕೆ, ನಿರ್ವಹಣೆ ಮತ್ತು ದುರಸ್ತಿ, ಪೂರೈಕೆ ಸರಪಳಿಯ ಬಲವರ್ಧನೆ ಸಾಧ್ಯವಾಗಲಿದೆ ಎಂದು ಅವರು ಹೇಳಿದ್ದಾರೆ.

ಮಾತುಕತೆಯಲ್ಲಿ ಮಾರ್ಟಿನ್–ಬೇಕರ್ ಕಂಪನಿಯ ಸಿಎಫ್ಒ ರಾಬರ್ಟ್ ಮಾರ್ಗನ್, ಟಾಮ್ ಡಟನ್ ಮತ್ತು ಕೃಷ್ಣಕುಮಾರ್, ಟಾನ್ಟೋ ಕಂಪನಿಯ ಪರವಾಗಿ ಸಿಎಫ್ಒಟಿಎಸ್ ಶಿವಶಂಕರ್, ಸಹಸಂಸ್ಥಾಪಕ ಸಿಸಿಲಿಯಾ ಡಿಸೋಜ ಮತ್ತು ಉಪಾಧ್ಯಕ್ಷ ಡಿ. ರಾಜೇಂದ್ರಕುಮಾರ್, ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿ, ಕೈಗಾರಿಕಾ ಸಚಿವರ ತಾಂತ್ರಿಕ ಸಲಹೆಗಾರ ಅರವಿಂದ ಗಲಗಲಿ, ಕರ್ನಾಟಕ ಉದ್ಯೋಗ ಮಿತ್ರ ವ್ಯವಸ್ಥಾಪಕ ನಿರ್ದೇಶಕ ದೊಡ್ಡ ಬಸವರಾಜ ಇದ್ದರು.

ಸರ್ಕಾರದ ತಪ್ಪಿಗೆ ಜನರ ಮೇಲೆ ದರ ಏರಿಕೆ ಹೊರೆ: ಆರ್.ಅಶೋಕ್ ಆಕ್ರೋಶ

ಬೆಂಗಳೂರು, ನ.4: ರಾಜ್ಯ ಸರ್ಕಾರ ಸಾರಿಗೆ ನಿಗಮಗಳಿಗೆ 5,650.95 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ. ಇದನ್ನು ನೀಡಿದ್ದರೆ ಬಸ್ ಟಿಕೆಟ್ ದರ ಏರಿಕೆ ಮಾಡುವ ಅಗತ್ಯವೇ ಇರಲಿಲ್ಲ. ಇದನ್ನು ಕೊಡದೆ ಜನರ ಮೇಲೆ ದರ ಏರಿಕೆಯ ಹೊರೆ ಹಾಕಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ಹೊರಹಾಕಿದರು.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತುಘಲಕ್ ಸರ್ಕಾರಕ್ಕಿಂತ ಹೀನಾಯವಾದ ಕಾಂಗ್ರೆಸ್ ರಾಜ್ಯದ ಇತಿಹಾಸದಲ್ಲೇ ದಾಖಲೆ ಬರೆಯುವಂತೆ ಬಸ್ ಟಿಕೆಟ್ ದರ ಏರಿಸಿದೆ. ಈ ಮಟ್ಟಿಗಿನ ದರ ಏರಿಕೆಯನ್ನೂ ಯಾವುದೇ ಸರ್ಕಾರ ಈವರೆಗೆ ಮಾಡಿಲ್ಲ. ಮನಸೋ ಇಚ್ಛೆ ಹೆಚ್ಚಳ ಮಾಡಲಾಗಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳುವಂತೆ ಸಾರಿಗೆ ಇಲಾಖೆಯಲ್ಲಿ ಸಾಕ್ಷಿಗುಡ್ಡೆಯನ್ನು ಬಿಟ್ಟು ಹೋಗುತ್ತಿದ್ದಾರೆ.

ದೀಪಾವಳಿ ಹಬ್ಬ ಬೆಳಕಿನ ಹಬ್ಬವಾಗಿದ್ದರೂ, ಜನರ ಬದುಕಲ್ಲಿ ಕತ್ತಲಿನ ಆಚರಣೆಯಾಗಲಿದೆ. ಇದು ಜನರನ್ನು ಸುಲಿಗೆ ಮಾಡುವ ವಿಧಾನವಾಗಿದೆ. ಸುಮಾರು 40% ವರೆಗೂ ಟಿಕೆಟ್ ದರ ಏರಿಸಲಾಗಿದೆ ಎಂದರು.

ಸರ್ಕಾರದಿಂದ ಸಾರಿಗೆ ನಿಗಮಗಳಿಗೆ 5650 ಕೋಟಿ ರೂ. ಬಾಕಿ

ರಾಜ್ಯ ಸರ್ಕಾರದಿಂದ ಸಾರಿಗೆ ನಿಗಮಗಳಿಗೆ ಈಗ 5,650.95 ಕೋಟಿ ಬಾಕಿ ಬರಬೇಕಿದೆ. ಕೆಎಸ್‌ಆರ್‌ಟಿಸಿಗೆ 2,943 ಕೋಟಿ, ವಾಯವ್ಯ ಸಾರಿಗೆ ನಿಗಮಕ್ಕೆ 1,306 ಕೋಟಿ, ಬಿಎಂಟಿಸಿಗೆ 1,019 ಕೋಟಿ, ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಕ್ಕೆ 999 ಕೋಟಿ ಕೊಡಬೇಕಿದೆ. ಇಷ್ಟು ಹಣ ಕೊಟ್ಟಿದ್ದರೆ ದರ ಏರಿಕೆ ಮಾಡಬೇಕಿರಲಿಲ್ಲ. ನಮ್ಮಿಂದ ಹಣ ಕೊಡಲು ಸಾಧ್ಯವಿಲ್ಲ ಎಂದು ಆರ್ಥಿಕ ಇಲಾಖೆ ಹೇಳಿದ್ದರಿಂದಲೇ ಹೀಗೆ ಮಾಡಲಾಗಿದೆ. ದೇಶದಲ್ಲೇ ನಂ.1 ಎಂಬ ಹೆಸರು ಸಾರಿಗೆ ನಿಗಮಗಳಿಗೆ ಇತ್ತು. ಅಂತಹ ಸಂಸ್ಥೆಯನ್ನು ಕಾಂಗ್ರೆಸ್ ಹಾಳು ಮಾಡಿ ಬೀದಿಗೆ ತಂದಿದೆ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು.

ಇಂದು ರಾಜ್ಯಾದ್ಯಂತ ಹೋರಾಟ

ಈ ದರ ಏರಿಕೆಯ ವಿರುದ್ಧ ಬಿಜೆಪಿ ನವೆಂಬರ್ 5 ರಂದು ರಾಜ್ಯದಾದ್ಯಂತ ಹೋರಾಟ ಮಾಡಲಿದೆ. ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ಬೆಂಗಳೂರಿನಲ್ಲಿ ತೀವ್ರವಾದ ಹೋರಾಟ ನಡೆಯಲಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.





ಎರಡು ಮಕ್ಕಳಿಗಿಂತ ಹೆಚ್ಚು ಮಕ್ಕಳಿದ್ದರೆ ಚುನಾವಣೆಗೆ ಸ್ಪರ್ಧಿಸುವಂತಿಲ್ಲ ಎಂಬ ಕಾನೂನು ಅಪ್ರಸ್ತುತ: ಸುಪ್ರೀಂ



ನವದೆಹಲಿ: ಎರಡು ಮಕ್ಕಳಿಗಿಂತ ಹೆಚ್ಚು ಮಕ್ಕಳನ್ನು ಹೊಂದಿರುವವರಿಗೆ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಅನರ್ಹತೆ ವಿಧಿಸುವ ಕಾನೂನುಗಳು ಇಂದಿನ ಜನಸಂಖ್ಯಾ ಪರಿಸ್ಥಿತಿಯಲ್ಲಿ ಪ್ರಸ್ತುತತೆ ಕಳೆದುಕೊಂಡಿವೆ ಎಂದು ಸುಪ್ರೀಂ ಕೋರ್ಟ್ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ.

ಭಾರತದಲ್ಲಿ ಫಲವತ್ತತೆ ದರ (ಒಟ್ಟು ಜನನ ಪ್ರಮಾಣ) ಗಣನೀಯವಾಗಿ ಇಳಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ, ಎರಡು ಮಕ್ಕಳ ನಿಯಮದ ಆಧಾರದಲ್ಲಿ ಜಾರಿಯಲ್ಲಿರುವ ಕಾನೂನುಗಳನ್ನು ಮರುಪರಿಶೀಲಿಸುವ ಅಗತ್ಯವಿದೆ ಎಂದು ನ್ಯಾಯಾಲಯ ಹೇಳಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಅಲೋಕ್ ಆರಾಧೆ ಅವರನ್ನೊಳಗೊಂಡ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ. 2003ರಲ್ಲಿ ಜಾವೇದ್ ವಿರುದ್ಧ ಹರಿಯಾಣ ರಾಜ್ಯ ಪ್ರಕರಣದಲ್ಲಿ ಮೂರು ನ್ಯಾಯಮೂರ್ತಿಗಳ ಪೀಠ ನೀಡಿದ್ದ ತೀರ್ಪನ್ನು ಮರುಪರಿಶೀಲನೆಗಾಗಿ ದೊಡ್ಡ ಪೀಠಕ್ಕೆ ವರ್ಗಾಯಿಸಿದೆ.

2003ರ ತೀರ್ಪಿನಲ್ಲಿ ಹರಿಯಾಣ ಪಂಚಾಯತ್ ರಾಜ್ ಕಾಯ್ದೆಯಡಿ ಇಬ್ಬರಿಗಿಂತ ಹೆಚ್ಚು ಮಕ್ಕಳನ್ನು ಹೊಂದಿರುವವರು ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸುವುದಕ್ಕೆ ಅನರ್ಹರು ಎಂಬ ನಿಯಮದ ಸಾಂವಿಧಾನಿಕ ಸಿಂಧುತ್ವವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿತ್ತು.

ಪ್ರಸ್ತುತ ಭಾರತದಲ್ಲಿ ಒಟ್ಟು ಫಲವತ್ತತೆ ದರ 1.9ಕ್ಕೆ ಇಳಿದಿದೆ. 2003ರಲ್ಲಿ ಇದು 3ರಷ್ಟಿತ್ತು. ಜನಸಂಖ್ಯೆ ಸ್ಥಿರವಾಗಿ ಮುಂದುವರಿಯಲು ಅಗತ್ಯವಿರುವ ಬದಲಿ ಫಲವತ್ತತೆ ದರ 2.1 ಆಗಿದೆ. ಈ ಪ್ರಮಾಣಕ್ಕಿಂತ ಫಲವತ್ತತೆ ದರ ಕಡಿಮೆಯಾಗಿರುವುದರಿಂದ ಮುಂದಿನ ದಿನಗಳಲ್ಲಿ ವೃದ್ಧರ ಜನಸಂಖ್ಯೆ ಹೆಚ್ಚಳವಾಗುವ ಮತ್ತು ದುಡಿಯುವ ವಯೋಮಾನದ ಜನರ ಪ್ರಮಾಣ ಕಡಿಮೆಯಾಗುವ ಸಾಧ್ಯತೆಯಿದೆ ಎಂದು ನ್ಯಾಯಪೀಠ ಗಮನಿಸಿದೆ.

ಜನಸಂಖ್ಯಾ ಹೆಚ್ಚಳದ ಭೀತಿಯ ಆಧಾರದಲ್ಲಿ ರೂಪಿಸಲಾದ ಎರಡು ಮಕ್ಕಳ ನಿಯಮಗಳು ಈಗಿನ ಬದಲಾಗಿರುವ ಜನಸಂಖ್ಯಾ ಪರಿಸ್ಥಿತಿಗೆ ಹೊಂದಿಕೆಯಾಗುವುದಿಲ್ಲ. ಇಂತಹ ಬದಲಾವಣೆಗಳನ್ನು ನಿರ್ಲಕ್ಷಿಸಿದರೆ ದೇಶ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗಬಹುದು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಇದೇ ಪ್ರಕರಣದಲ್ಲಿ ಮಹಾರಾಷ್ಟ್ರದ ಕಾಕೋಡಾ ಗ್ರಾಮ ಪಂಚಾಯತ್ನ ಮಾಜಿ ಸರಪಂಚ್ ಮಂಗಳಾ ಭೀಮರಾವ್ ಅವರಿಗೆ ಮೂರನೇ ಮಗು ಜನಿಸಿದ ಕಾರಣ ವಿಧಿಸಲಾಗಿದ್ದ ಅನರ್ಹತೆಯನ್ನೂ ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ. ಮಹಾರಾಷ್ಟ್ರ ಗ್ರಾಮ ಪಂಚಾಯತ್ ಕಾಯ್ದೆಯ ಸೆಕ್ಷನ್ 14(1)(ಜೆ–1) ಅಡಿಯಲ್ಲಿ ಇಬ್ಬರಿಗಿಂತ ಹೆಚ್ಚು ಮಕ್ಕಳನ್ನು ಹೊಂದಿರುವವರಿಗೆ ಅನರ್ಹತೆ ವಿಧಿಸುವ ನಿಯಮ ಜಾರಿಯಲ್ಲಿತ್ತು.

ಎರಡು ಮಕ್ಕಳಿಗಿಂತ ಹೆಚ್ಚು ಮಕ್ಕಳನ್ನು ಹೊಂದಿರುವ ಕಾರಣಕ್ಕೆ ವ್ಯಕ್ತಿಗಳನ್ನು ರಾಜಕೀಯ ಪ್ರಾತಿನಿಧ್ಯದಿಂದ ಹೊರಗಿಡುವುದು ಅವರ ಸಾರ್ವಜನಿಕ ಹುದ್ದೆ ನಿರ್ವಹಿಸುವ ಸಾಮರ್ಥ್ಯಕ್ಕೆ ಸಂಬಂಧಿಸದ ಮಾನದಂಡವಾಗಿದೆ ಎಂದು ನ್ಯಾಯಾಲಯ ಹೇಳಿದೆ. ಅಲ್ಲದೆ, ಮಕ್ಕಳನ್ನು ಹೊಂದುವ ಹಕ್ಕು ಮತ್ತು ಪ್ರಜಾಸತ್ತಾತ್ಮಕ ಪ್ರಕ್ರಿಯೆಯಲ್ಲಿ ಭಾಗವಹಿಸುವ ಹಕ್ಕಿನ ನಡುವೆ ಆಯ್ಕೆ ಮಾಡಿಕೊಳ್ಳುವ ಪರಿಸ್ಥಿತಿ ಸೃಷ್ಟಿಯಾಗುತ್ತದೆ. ಇದು ಸಂವಿಧಾನದ 21ನೇ ವಿಧಿಯಡಿ ಖಾತರಿಪಡಿಸಿರುವ ವೈಯಕ್ತಿಕ ಸ್ವಾಯತ್ತತೆಯ ಹಕ್ಕಿಗೂ ಸಂಬಂಧಿಸಿದೆ ಎಂದು ಪೀಠ ತಿಳಿಸಿದೆ.

ದೇಶದ ಏಳು ರಾಜ್ಯಗಳು ಎರಡು ಮಕ್ಕಳ ನಿಯಮವನ್ನು ರದ್ದುಗೊಳಿಸಿದ್ದು, 15 ರಾಜ್ಯಗಳಲ್ಲಿ ಇಂತಹ ನೀತಿ ಜಾರಿಯಲ್ಲಿಲ್ಲ ಎಂದು ಪ್ರಕರಣದಲ್ಲಿ ಸಲ್ಲಿಸಲಾದ ಮಾಹಿತಿಯಲ್ಲಿ ಉಲ್ಲೇಖಿಸಲಾಗಿದೆ. ಅಸ್ಸಾಂ, ಗೋವಾ, ಗುಜರಾತ್, ಮಹಾರಾಷ್ಟ್ರ, ಒಡಿಶಾ ಮತ್ತು ಉತ್ತರಾಖಂಡ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಈ ನಿಯಮ ಮುಂದುವರಿದಿದೆ. ಎರಡು ಮಕ್ಕಳ ನಿಯಮಕ್ಕೆ ಸಂಬಂಧಿಸಿದ ಹಿಂದಿನ ತೀರ್ಪುಗಳ ಮರುಪರಿಶೀಲನೆಗೆ ಸುಪ್ರೀಂ ಕೋರ್ಟ್ ಈಗ ದೊಡ್ಡ ಪೀಠಕ್ಕೆ ವಿಷಯವನ್ನು ವರ್ಗಾಯಿಸಿದೆ.

ಮಾರಾಟ ತೆರಿಗೆ ಮೇಲೆ ಹೆಚ್ಚುವರಿ ಸುಂಕ ವಿಧಿಸಲು ರಾಜ್ಯಗಳಿಗೆ ಅಧಿಕಾರ: ಸುಪ್ರೀಂ ಕೋರ್ಟ್

ನವದೆಹಲಿ, ನ.4: ಮಾರಾಟ ತೆರಿಗೆ ಅಥವಾ ಖರೀದಿ ತೆರಿಗೆಯ ಮೇಲೆ ಹೆಚ್ಚುವರಿ ತೆರಿಗೆ, ಹೆಚ್ಚುವರಿ ಶುಲ್ಕ ಅಥವಾ ಸೆಸ್ ವಿಧಿಸುವ ರಾಜ್ಯ ವಿಧಾನಮಂಡಲಗಳ ಅಧಿಕಾರವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ.

ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಏಳು ನ್ಯಾಯಮೂರ್ತಿಗಳ ಸಾಂವಿಧಾನಿಕ ಪೀಠ ಬುಧವಾರ ಈ ಮಹತ್ವದ ತೀರ್ಪು ನೀಡಿದೆ. ಸುಮಾರು 27 ವರ್ಷಗಳಿಂದ ವಿಚಾರಣೆಗೆ ಬಾಕಿ ಉಳಿದಿದ್ದ ಪ್ರಕರಣದ ಕುರಿತು ನ್ಯಾಯಾಲಯ ಸ್ಪಷ್ಟನೆ ನೀಡಿದೆ.

ರಾಜ್ಯ ಸರ್ಕಾರಗಳು ಈಗಾಗಲೇ ವಿಧಿಸಿರುವ ಮಾರಾಟ ತೆರಿಗೆಯ ಶೇಕಡಾವಾರು ಆಧಾರದ ಮೇಲೆ ಹೆಚ್ಚುವರಿ ತೆರಿಗೆ ಅಥವಾ ಸರ್ಚಾರ್ಜ್ ವಿಧಿಸಬಹುದೇ ಎಂಬ ಪ್ರಶ್ನೆ ಪ್ರಕರಣದ ಕೇಂದ್ರಬಿಂದುವಾಗಿತ್ತು. ಒಡಿಶಾ ಮಾರಾಟ ತೆರಿಗೆ ಕಾಯ್ದೆ, 1947ರ ಸೆಕ್ಷನ್ 5ಎ ಅಡಿಯಲ್ಲಿ ಈ ವಿವಾದ ಹುಟ್ಟಿಕೊಂಡಿತ್ತು. ವಾರ್ಷಿಕ ವಹಿವಾಟು 10 ಲಕ್ಷದಿಂದ ಒಂದು ಕೋಟಿ ರೂಪಾಯಿವರೆಗೆ ಇರುವ ವ್ಯಾಪಾರಿಗಳಿಗೆ ಶೇಕಡಾ 10ರಷ್ಟು ಹಾಗೂ ಒಂದು ಕೋಟಿ ರೂಪಾಯಿಗೂ ಅಧಿಕ ವ್ಯವಹಾರ ಹೊಂದಿರುವವರಿಗೆ ಶೇಕಡಾ 15ರಷ್ಟು ಹೆಚ್ಚುವರಿ ತೆರಿಗೆ ವಿಧಿಸುವ ವ್ಯವಸ್ಥೆಯನ್ನು ಪ್ರಶ್ನಿಸಲಾಗಿತ್ತು.

ರಾಜ್ಯಗಳಿಗೆ ಮಾರಾಟ ಮತ್ತು ಖರೀದಿ ತೆರಿಗೆ ವಿಧಿಸುವ ಅಧಿಕಾರ ಸಂವಿಧಾನದ ಏಳನೇ ಅನುಸೂಚಿಯ ರಾಜ್ಯ ಪಟ್ಟಿಯ 54ನೇ ನಮೂದಿನಡಿ ಬರುತ್ತದೆಯೇ ಅಥವಾ ಈ ಹೆಚ್ಚುವರಿ ತೆರಿಗೆ ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿರುವ ಆದಾಯ ತೆರಿಗೆಗೆ ಸಂಬಂಧಿಸಿದ್ದೇ ಎಂಬುದು ವಿವಾದವಾಗಿತ್ತು. ಈ ಹಿಂದೆ 1974ರಲ್ಲಿ ಎಸ್. ಕೊಡಾರ್ ವಿರುದ್ಧ ಕೇರಳ ರಾಜ್ಯ ಪ್ರಕರಣದಲ್ಲಿ ಐವರು ನ್ಯಾಯಮೂರ್ತಿಗಳ ಪೀಠ ಹೆಚ್ಚುವರಿ ಮಾರಾಟ ತೆರಿಗೆ ವಿಧಿಸುವುದನ್ನು ಮಾನ್ಯ ಮಾಡಿತ್ತು. ಇದೀಗ ಸುಪ್ರೀಂ ಕೋರ್ಟ್ ಈ ಹಿಂದಿನ ತೀರ್ಪು ಇಂದಿಗೂ ಅನ್ವಯವಾಗುತ್ತದೆ ಎಂದು ಸ್ಪಷ್ಟಪಡಿಸಿದೆ.ಪ್ರಕರಣಕ್ಕೆ ಸಂಬಂಧಿಸಿದ ಕಾನೂನುಗಳು ನಂತರ ಬದಲಾವಣೆಗೊಂಡಿದ್ದು, 2017ರಲ್ಲಿ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯೂ ಜಾರಿಗೆ ಬಂದಿದೆ. ಹೀಗಾಗಿ ಈಗ ಈ ಪ್ರಶ್ನೆಯನ್ನು ಮತ್ತೊಮ್ಮೆ ನಿರ್ಧರಿಸುವ ಪ್ರಾಯೋಗಿಕ ಅಗತ್ಯವಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

27 ವರ್ಷಗಳ ಹಳೆಯ ಪ್ರಕರಣಕ್ಕೆ ತೆರೆ ಎಳೆದ ಏಳು ನ್ಯಾಯಮೂರ್ತಿಗಳ ಸಾಂವಿಧಾನಿಕ ಪೀಠ

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರು ತಮ್ಮ ತೀರ್ಪಿನಲ್ಲಿ, ಪ್ರಕರಣದ ಪ್ರಶ್ನೆ ಈಗ ಪ್ರಾಯೋಗಿಕ ಮಹತ್ವ ಕಳೆದುಕೊಂಡಿದ್ದು, ಏಳು ನ್ಯಾಯಮೂರ್ತಿಗಳ ಪೀಠದಿಂದ ಮತ್ತಷ್ಟು ವಿಚಾರಣೆ ನಡೆಸುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ನ್ಯಾಯಮೂರ್ತಿ ಕೆ.ವಿ. ವಿಶ್ವನಾಥನ್ ಅವರು ಪ್ರತ್ಯೇಕ ಸಹಮತದ ತೀರ್ಪು ನೀಡಿದ್ದಾರೆ.

ಏಳು ನ್ಯಾಯಮೂರ್ತಿಗಳ ಪೀಠದಲ್ಲಿ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರೊಂದಿಗೆ ನ್ಯಾಯಮೂರ್ತಿಗಳಾದ ಕೆ.ವಿ. ವಿಶ್ವನಾಥನ್, ಎಸ್.ವಿ. ಭಟ್ಟಿ, ಜೋಯ್‌ಮಾಲ್ಯ ಬಾಗ್ಚಿ, ಎನ್.ವಿ. ಅಂಜಾರಿಯಾ, ಅರುಣ್ ಪಳ್ಳಿ ಮತ್ತು ವಿ. ಮೋಹನಾ ಇದ್ದರು.

ಮುಂಬೈನಲ್ಲಿ ಪರವಾನಗಿ ಇಲ್ಲದೆ ಪಟಾಕಿ ಮಾರಾಟ, ಸಂಗ್ರಹಕ್ಕೆ ನಿಷೇಧ

ಮುಂಬೈ: ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಪಟಾಕಿಗಳ ಮಾರಾಟ ಮತ್ತು ಸಂಗ್ರಹದ ಮೇಲೆ ಮುಂಬೈ ಪೊಲೀಸರು ಕಟ್ಟುನಿಟ್ಟಿನ ನಿರ್ಬಂಧ ವಿಧಿಸಿದ್ದಾರೆ. ಬೃಹನ್ಮುಂಬೈ ಪೊಲೀಸ್ ವ್ಯಾಪ್ತಿಯ ಸಾರ್ವಜನಿಕ ಸ್ಥಳಗಳಲ್ಲಿ ಅಧಿಕೃತ ಪರವಾನಗಿ ಇಲ್ಲದೆ ಪಟಾಕಿ ಹಾಗೂ ಸಿಡಿಮದ್ದುಗಳನ್ನು ಮಾರಾಟ ಮಾಡುವುದು, ಸಂಗ್ರಹಿಸುವುದು, ಪ್ರದರ್ಶಿಸುವುದು ಮತ್ತು ಮಾರಾಟದ ಉದ್ದೇಶದಿಂದ ಸಾಗಣೆ ಮಾಡುವುದನ್ನು ನಿಷೇಧಿಸಲಾಗಿದೆ.

ಮುಂಬೈ ಪೊಲೀಸ್ ಉಪ ಆಯುಕ್ತ (ಕಾರ್ಯಾಚರಣೆ) ಹಾಗೂ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಅಕ್ಬರ್ ಪಠಾಣ್ ಈ ಸಂಬಂಧ ಆದೇಶ ಹೊರಡಿಸಿದ್ದಾರೆ. ನವೆಂಬರ್ 3ರಿಂದ ಜಾರಿಗೆ ಬಂದಿರುವ ಈ ನಿರ್ಬಂಧ ಡಿಸೆಂಬರ್ 2ರವರೆಗೆ ಮುಂದುವರಿಯಲಿದೆ.

ಮಹಾರಾಷ್ಟ್ರ ಪೊಲೀಸ್ ಕಾಯ್ದೆ, 1951ರ ಅಡಿಯಲ್ಲಿ ಸಾರ್ವಜನಿಕರ ಸುರಕ್ಷತೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಉಂಟಾಗಬಹುದಾದ ತೊಂದರೆಗಳನ್ನು ತಡೆಗಟ್ಟುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳು ಅಥವಾ ರಾಜ್ಯ ಸರ್ಕಾರದಿಂದ ಮಾನ್ಯ ಪರವಾನಗಿ ಪಡೆದವರಿಗೆ ಮಾತ್ರ ಸಾರ್ವಜನಿಕ ಸ್ಥಳಗಳಲ್ಲಿ ಪಟಾಕಿ ಮಾರಾಟಕ್ಕೆ ಅವಕಾಶವಿರಲಿದೆ.

ಪರವಾನಗಿ ಇಲ್ಲದೆ ಪಟಾಕಿಗಳನ್ನು ಮಾರಾಟಕ್ಕೆ ಇಡುವುದು, ಸಾರ್ವಜನಿಕ ಸ್ಥಳಗಳಲ್ಲಿ ಸಂಗ್ರಹಿಸುವುದು, ಪ್ರದರ್ಶಿಸುವುದು ಅಥವಾ ಮಾರಾಟಕ್ಕಾಗಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸಾಗಿಸುವುದಕ್ಕೂ ನಿರ್ಬಂಧ ಅನ್ವಯಿಸಲಿದೆ.

ಆದೇಶದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಪ್ರಮುಖ ಸ್ಥಳಗಳಲ್ಲಿ ಸೂಚನೆಗಳನ್ನು ಪ್ರದರ್ಶಿಸುವಂತೆ ಹಾಗೂ ಧ್ವನಿವರ್ಧಕ ಮತ್ತು ಮೆಗಾಫೋನ್‌ಗಳ ಮೂಲಕ ಮಾಹಿತಿ ಪ್ರಕಟಿಸುವಂತೆ ಪೊಲೀಸ್ ಆಡಳಿತ ಸೂಚಿಸಿದೆ.

ದೀಪಾವಳಿ ಸಂದರ್ಭದಲ್ಲಿ ಸಾರ್ವಜನಿಕ ಸುರಕ್ಷತೆಯನ್ನು ಕಾಪಾಡುವುದು ಹಾಗೂ ಪರವಾನಗಿ ಇಲ್ಲದ ಪಟಾಕಿ ವ್ಯಾಪಾರಕ್ಕೆ ಕಡಿವಾಣ ಹಾಕುವುದು ಈ ನಿರ್ಬಂಧದ ಪ್ರಮುಖ ಉದ್ದೇಶವಾಗಿದೆ.

ರಾಜಸ್ಥಾನದಲ್ಲಿ ರೈಲ್ವೆಹಳಿ ಮೇಲೆ ಸ್ಫೋಟ: ಭಾರತ–ಪಾಕ್ ಗಡಿ ಸಮೀಪ ಘಟನೆ

ನವದೆಹಲಿ.ನ.4: ಭಾರತ–ಪಾಕಿಸ್ತಾನ ಅಂತರರಾಷ್ಟ್ರೀಯ ಗಡಿಯ ಸಮೀಪ ರಾಜಸ್ಥಾನದ ಶ್ರೀಗಂಗಾನಗರ ಜಿಲ್ಲೆಯಲ್ಲಿ ರೈಲ್ವೆ ಹಳಿಯ ಮೇಲೆ ಪ್ರಬಲ ಸ್ಫೋಟ ಸಂಭವಿಸಿದ್ದು, ರೈಲ್ವೆ ಇಲಾಖೆಯಲ್ಲಿ ಆತಂಕ ಮೂಡಿಸಿದೆ. ಮಂಗಳವಾರ ರಾತ್ರಿ ಅನೂಪ್‌ಗಢ–ಸೂರತ್‌ಗಢ ರೈಲು ಮಾರ್ಗದ 50 ಜಿಬಿ ಗ್ರಾಮದ ಸಮೀಪ ಈ ಘಟನೆ ನಡೆದಿದೆ. ರಾತ್ರಿ ಸುಮಾರು 9.45ರ ವೇಳೆಗೆ ಸ್ಫೋಟ ಸಂಭವಿಸಿದ್ದು, ರೈಲ್ವೆ ಹಳಿಗೆ ಆಧಾರವಾಗಿದ್ದ ಎರಡು ಕಾಂಕ್ರೀಟ್ ಸ್ಲೀಪರ್‌ಗಳು ಸಂಪೂರ್ಣವಾಗಿ ಹಾನಿಗೊಂಡಿವೆ. ಅಲ್ಲದೆ, ಹಳಿಗಳ ಕೆಳಭಾಗದಲ್ಲಿ ಸುಮಾರು ಎರಡು ಅಡಿ ಆಳದ ಗುಂಡಿ ನಿರ್ಮಾಣವಾಗಿದೆ. ರೈಲ್ವೆ ಹಳಿಗೆ ಸ್ಲೀಪರ್‌ಗಳನ್ನು ಜೋಡಿಸುವ ಲಾಕ್‌ಗಳಿಗೂ ಹಾನಿಯಾಗಿದೆ. ಸ್ಫೋಟದ ಸದ್ದು ಸುಮಾರು 200 ಮೀಟರ್ ದೂರದವರೆಗೂ ಕೇಳಿಸಿದೆ ಎಂದು ವರದಿಯಾಗಿದೆ. ಸ್ಫೋಟ ಸಂಭವಿಸುವ ಸುಮಾರು 45 ನಿಮಿಷಗಳ ಮೊದಲು ಅನೂಪ್‌ಗಢದಿಂದ ಸೂರತ್ಗಢಕ್ಕೆ ತೆರಳುತ್ತಿದ್ದ ಪ್ರಯಾಣಿಕರ ರೈಲು ಇದೇ ಮಾರ್ಗವಾಗಿ ಸಂಚರಿಸಿತ್ತು. ರೈಲು ಸುರಕ್ಷಿತವಾಗಿ ಸ್ಥಳವನ್ನು ದಾಟಿದ ಬಳಿಕ ಸ್ಫೋಟ ಸಂಭವಿಸಿರುವುದರಿಂದ ಸಂಭವಿಸಬಹುದಾಗಿದ್ದ ಭಾರೀ ರೈಲು ದುರಂತ ತಪ್ಪಿದಂತಾಗಿದೆ.



ಸ್ಫೋಟದ ಸದ್ದು ಕೇಳಿದ ಸ್ಥಳೀಯರು ರೈಲ್ವೆ ಹಳಿ ಬಳಿ ತೆರಳಿ ಪರಿಶೀಲಿಸಿದ್ದು, ಬಳಿಕ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ರಾತ್ರಿ ಸುಮಾರು 11 ಗಂಟೆಗೆ ಪೊಲೀಸರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ತನಿಖೆಗೆ ಎಟಿಎಸ್, ಸಿಐಡಿ ತಂಡಗಳು

ಘಟನೆ ಹಿನ್ನೆಲೆಯಲ್ಲಿ ಭದ್ರತಾ ಸಂಸ್ಥೆಗಳು ಸ್ಥಳಕ್ಕೆ ಧಾವಿಸಿವೆ. ಎಟಿಎಸ್, ಸಿಐಡಿ, ಗುಪ್ತಚರ ಇಲಾಖೆ, ಶ್ವಾನದಳ, ಬಾಂಬ್ ನಿಷ್ಕ್ರಿಯ ದಳ ಹಾಗೂ ವಿಧಿವಿಜ್ಞಾನ ಪ್ರಯೋಗಾಲಯದ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಸ್ಫೋಟಕ್ಕೆ ಕಾರಣವೇನು ಮತ್ತು ಇದರಲ್ಲಿ ಯಾರಾದರೂ ಉದ್ದೇಶಪೂರ್ವಕವಾಗಿ ಭಾಗಿಯಾಗಿದ್ದಾರೆಯೇ ಎಂಬ ಬಗ್ಗೆ ತನಿಖೆ ಮುಂದುವರಿದಿದೆ. ಗಂಗಾನಗರ ಪೊಲೀಸ್ ವರಿಷ್ಠಾಧಿಕಾರಿ ಹರಿಶಂಕರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಿಧಿವಿಜ್ಞಾನ ತಂಡವು ಸ್ಥಳದಲ್ಲಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷಿಸಿದ ಬಳಿಕವಷ್ಟೇ ಸ್ಫೋಟದ ನಿಖರ ಸ್ವರೂಪ ಮತ್ತು ಕಾರಣ ತಿಳಿಯಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇತ್ತೀಚೆಗೆ ಗಡಿ ಪ್ರದೇಶದಲ್ಲಿ ಪತ್ತೆಯಾಗಿದ್ದ 7.5 ಕೆ.ಜಿ. ಆರ್‌ಡಿಎಕ್ಸ್‌ಗೂ ಈ ಸ್ಫೋಟಕ್ಕೂ ಯಾವುದೇ ಸಂಬಂಧ ದೃಢಪಟ್ಟಿಲ್ಲ ಎಂದು ಪೊಲೀಸ್ ವರಿಷ್ಠಾಧಿಕಾರಿ ಸ್ಪಷ್ಟಪಡಿಸಿದ್ದಾರೆ. ಸ್ಫೋಟದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಅನೂಪ್‌ಗಢ–ಸೂರತ್‌ಗಡ ರೈಲು ಮಾರ್ಗದಲ್ಲಿ ಬುಧವಾರ ನಾಲ್ಕು ಪ್ರಯಾಣಿಕರ ರೈಲುಗಳ ಸೇವೆಯನ್ನು ರದ್ದುಗೊಳಿಸಲಾಗಿದೆ.

2026ರ ನಂತರ ಇಸ್ರೇಲ್‌ಗೆ ನೆರವು ಸ್ಥಗಿತ: ಟ್ರಂಪ್ ಘೋಷಣೆ!

ನವದೆಹಲಿ, ನ.4: ಅಮೆರಿಕ ಮತ್ತು ಇಸ್ರೇಲ್ ನಡುವಿನ ದಶಕಗಳ ಕಾಲದ ಮಿಲಿಟರಿ ಬಾಂಧವ್ಯದಲ್ಲಿ ಸಂಚಲನ ಮೂಡಿಸುವಂತಹ ಮಹತ್ವದ ಬೆಳವಣಿಗೆಯೊಂದರಲ್ಲಿ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಸ್ರೇಲ್ ನೀಡಲಾಗುತ್ತಿರುವ ವಾರ್ಷಿಕ 400 ಕೋಟಿ ಡಾಲರ್ ಆರ್ಥಿಕ ಮಿಲಿಟರಿ ನೆರವನ್ನು ಈ ವರ್ಷದ ಅಂತ್ಯಕ್ಕೆ ಸಂಪೂರ್ಣವಾಗಿ ಸ್ಥಗಿತಗೊಳಿಸುವುದಾಗಿ ಘೋಷಿಸಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಜೊತೆಗೆ ನಡೆಸಿದ ಮಾತುಕತೆಯ ಬಳಿಕ ಈ ಒಪ್ಪಂದಕ್ಕೆ ಬರಲಾಗಿದೆ ಎಂದು ಟ್ರಂಪ್ ತಿಳಿಸಿದ್ದಾರೆ.



ಮಧ್ಯಂತರ ಚುನಾವಣೆಯ ಮತದಾನದ ದಿನದಂದೇ ಹೊರಬಿದ್ದ ಈ ದಿಢೀರ್ ಪ್ರಕಟಣೆಯು ಜಾಗತಿಕ ರಾಜಕೀಯ ಕ್ಷೇತ್ರದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಇಸ್ರೇಲ್ ಈಗ ತನ್ನದೇ ಆದ ಬಲವಾದ ಆರ್ಥಿಕತೆಯನ್ನು ಹೊಂದಿದ್ದು, ಅವರಿಗೆ ಇನ್ನು ಮುಂದೆ ಅಮೆರಿಕದ ತೆರಿಗೆದಾರರ ಹಣದ ಸಹಾಯ ಬೇಕಾಗಿಲ್ಲ ಎಂಬುದು ಟ್ರಂಪ್ ಅಭಿಪ್ರಾಯ.

ಡೆಮಾಕ್ರಟಿಕ್ ಪಕ್ಷದ ಎಡಪಂಥೀಯ ನಾಯಕರು ಮತ್ತು ಪ್ರಗತಿಪರ ಅಭ್ಯರ್ಥಿಗಳು ಇಸ್ರೇಲ್‌ಗೆ ನೀಡಲಾಗುವ ದ್ವಿಪಕ್ಷೀಯ ನೆರವನ್ನು ರಿಪಬ್ಲಿಕನ್ ಪಕ್ಷದ ವಿರುದ್ಧ ಪ್ರಮುಖ ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುತ್ತಿದ್ದರು. ವಿಶೇಷವಾಗಿ ಮಿಚಿಗನ್‌ನಿಂದ ಸೆನೆಟ್‌ಗೆ ಆಯ್ಕೆಯಾಗಿರುವ ಅಬ್ದುಲ್ ಎಲ್–ಸಯೀದ್ ಅವರಂತಹ ನಾಯಕರ ಟೀಕೆಗಳನ್ನು ಹತ್ತಿಕ್ಕಲು ಟ್ರಂಪ್ ಈ ಹೆಜ್ಜೆ ಇಟ್ಟಿದ್ದಾರೆ ಎನ್ನಲಾಗಿದೆ. ಟ್ರಂಪ್ ಬೆಂಬಲಿಗರು ಮತ್ತು ಮಾಗಾ ಪಂಥದ ನಾಯಕರು ಇರಾನ್ ವಿರುದ್ಧದ ಯುದ್ಧದಲ್ಲಿ ಅಮೆರಿಕ ಭಾಗಿಯಾಗಿರುವುದನ್ನು ಪ್ರಶ್ನಿಸುತ್ತಿದ್ದಾರೆ. ಎಂಟು ತಿಂಗಳಿಗೂ ಹೆಚ್ಚು ಕಾಲದಿಂದ ನಡೆಯುತ್ತಿರುವ ಈ ಸಂಘರ್ಷದಿಂದಾಗಿ ಅಮೆರಿಕದಲ್ಲಿ ಇಂಧನ ಬೆಲೆಗಳು ಏರಿಕೆಯಾಗಿದ್ದು, ಟ್ರಂಪ್ ಜನಪ್ರಿಯತೆಯ ಮೇಲೆಯೂ ಪರಿಣಾಮ ಬೀರಿದೆ.

ಇಸ್ರೇಲ್‌ಗೆ ಹಣಕಾಸಿನ ನೆರವು ನಿಲ್ಲಿಸಿದರೂ, ಅಮೆರಿಕವು ಇಸ್ರೇಲ್‌ಗೆ ಶಸ್ತ್ರಾಸ್ತ್ರಗಳನ್ನು ಮಾರಾಟ ಮಾಡುವುದನ್ನು ಮುಂದುವರಿಸಲಿದೆ ಮತ್ತು ಅಗತ್ಯ ಬಿದ್ದಾಗ ನೆರವಿಗೆ ಬರಲಿದೆ ಎಂದು ಟ್ರಂಪ್ ಸ್ಪಷ್ಟಪಡಿಸಿದ್ದಾರೆ. ಆದಾಗ್ಯೂ, ಪ್ರಸ್ತುತ ಚಾಲ್ತಿಯಲ್ಲಿರುವ ದ್ವಿಪಕ್ಷೀಯ ಒಪ್ಪಂದ ಪತ್ರದ ಪ್ರಕಾರ 2028ರ ಸೆಪ್ಟೆಂಬರ್‌ವರೆಗೆ ಇಸ್ರೇಲ್‌ಗೆ ಈ ನೆರವು ಮುಂದುವರಿಯಬೇಕಿತ್ತು. ಹೀಗಿರುವಾಗ, ಈ ವರ್ಷದ ಡಿಸೆಂಬರ್ ಒಳಗೇ ಇದನ್ನು ಹೇಗೆ ಸ್ಥಗಿತಗೊಳಿಸಲಾಗುತ್ತದೆ ಎಂಬ ಸ್ಪಷ್ಟ ವಿವರಣೆಯನ್ನು ಟ್ರಂಪ್ ನೀಡಿಲ್ಲ. ಅಮೆರಿಕ ಕಾಂಗ್ರೆಸ್ ಪ್ರತಿವರ್ಷ ಇದಕ್ಕೆ ಅನುಮೋದನೆ ನೀಡಬೇಕಿರುವುದರಿಂದ, ಶಾಸನಾತ್ಮಕವಾಗಿ ಈ ನಿರ್ಧಾರ ಹೇಗೆ ಜಾರಿಗೆ ಬರಲಿದೆ ಎಂಬುದು ಕುತೂಹಲಕಾರಿಯಾಗಿದೆ.

ಅಮೆರಿಕದ ಈ ನಿರ್ಧಾರ ಇಸ್ರೇಲ್ ರಾಜಕೀಯದಲ್ಲೂ ದೊಡ್ಡ ಬಿರುಗಾಳಿಯನ್ನೇ ಎಬ್ಬಿಸಿದೆ.

ಇಸ್ರೇಲ್ ಪ್ರಧಾನಿ ನೆತನ್ಯಾಹು ಕಳೆದ ತಿಂಗಳು ನೀಡಿದ ಸಂದರ್ಶನವೊಂದರಲ್ಲಿ, ಅಮೆರಿಕದ ರಾಜಕೀಯ ಸ್ಥಿತಿಗತಿಗಳು ಬದಲಾಗುತ್ತಿದ್ದು, ಅಮೆರಿಕದ ಆರ್ಥಿಕ ನೆರವಿನ ಮೇಲಿನ ಅವಲಂಬನೆಯನ್ನು ಇಸ್ರೇಲ್ ಹಂತ ಹಂತವಾಗಿ ಕಡಿಮೆ ಮಾಡಿಕೊಳ್ಳಬೇಕಾಗಿದೆ ಎಂದು ಸುಳಿವು ನೀಡಿದ್ದರು.

ಬ್ಲಡ್ ಬ್ಯಾಂಕ್ ಹ್ಯಾಕ್ ಮಾಡಿದ ಹ್ಯಾಕರ್‌ಗಳು

ನವದೆಹಲಿ, ನ.4: ಫ್ರಿಜ್ ಎಂದರೆ ಆಹಾರ ಪದಾರ್ಥಗಳು ಕೆಡದಂತೆ ತಂಪಾಗಿಡುವ ಸಾಧನ. ಆದರೆ ಇದೇ ಫ್ರಿಜ್ ಈಗ ಹ್ಯಾಕರ್‌ಗಳ ಕೈಯಲ್ಲಿ ಅಪಾಯಕಾರಿ ಅಸ್ತ್ರವಾಗುತ್ತಿದೆ ಸೂಪರ್‌ಮಾರ್ಕೆಟ್‌ಗಳ ಶೀತಲೀಕರಣ ವ್ಯವಸ್ಥೆಗಳನ್ನು ಗುರಿಯಾಗಿಸಿಕೊಂಡಿದ್ದ ಸೈಬರ್ ದಾಳಿಕೋರರು ಇದೀಗ ಜೀವ ಉಳಿಸುವ ರಕ್ತ ಮತ್ತು ಪ್ಲಾಸ್ಮಾ ಸಂಗ್ರಹಣಾ ಘಟಕಗಳ ಮೇಲೂ ದಾಳಿ ನಡೆಸಿದ್ದಾರೆ. ಫ್ರಾನ್ಸ್‌ನಲ್ಲಿ ನಡೆದ ಈ ಘಟನೆ ಜಗತ್ತಿನಾದ್ಯಂತ ಆತಂಕ ಮೂಡಿಸಿದೆ.



ಫ್ರಾನ್ಸ್‌ನ ರಾಷ್ಟ್ರೀಯ ರಕ್ತ ಸಂಸ್ಥೆಯಾದ ಎಟಾಬ್ಲಿಸ್ಮೆಂಟ್ ಫ್ರಾನ್ಸೇ ದು ಸಾಂಗ್' ನಿರ್ವಹಣೆಯ ರಕ್ತ ಸಂಗ್ರಹಣಾ ಘಟಕಗಳ ಶೀತಲೀಕರಣ ವ್ಯವಸ್ಥೆಗೆ ಹ್ಯಾಕರ್‌ಗಳು ಪ್ರವೇಶ ಪಡೆದಿದ್ದಾರೆ ಎನ್ನಲಾಗಿದೆ. ನವೆಂಬರ್ 1 ಮತ್ತು 2ರ ನಡುವೆ ನಡೆದ ದಾಳಿಯಲ್ಲಿ ಫ್ರೀಜರ್‌ಗಳ ತಾಪಮಾನವನ್ನು ಮೈನಸ್ 30 ಡಿಗ್ರಿ ಸೆಲ್ಸಿಯಸ್ನಿಂದ ಬರೋಬ್ಬರಿ 110 ಡಿಗ್ರಿ ಸೆಲ್ಸಿಯಸ್ಗೆ ಬದಲಾಯಿಸಲಾಗಿದೆ.

ರಾತ್ರಿ ಕರ್ತವ್ಯದಲ್ಲಿದ್ದ ತಂತ್ರಜ್ಞರೊಬ್ಬರು ತಾಪಮಾನದಲ್ಲಿ ಅಸಹಜ ಏರಿಕೆಯಾಗಿರುವುದನ್ನು ಗಮನಿಸಿದ್ದಾರೆ. ತಕ್ಷಣವೇ ತುರ್ತುಕ್ರಮ ಕೈಗೊಂಡಿದ್ದರಿಂದ ರಕ್ತದ ಮಾದರಿಗಳು ಮತ್ತು ಪ್ಲಾಸ್ಮಾ ಸಂಪೂರ್ಣವಾಗಿ ಹಾಳಾಗುವುದನ್ನು ತಪ್ಪಿಸಲಾಗಿದೆ. ಆರೋಗ್ಯ ಸಚಿವಾಲಯದ ಪ್ರಕಾರ, ಈ ಘಟನೆಯಿಂದ ಆಸ್ಪತ್ರೆಗಳ ರಕ್ತ ಪೂರೈಕೆ ಅಥವಾ ರಕ್ತ ವರ್ಗಾವಣೆ ಸೇವೆಗೆ ಯಾವುದೇ ತೊಂದರೆಯಾಗಿಲ್ಲ. ಒಂದು ವೇಳೆ ರಕ್ತ ಹಾಳಾಗಿದ್ದರೆ ಅದರಿಂದ ಭಾರಿ ಜೀವಹಾನಿ ಸಂಭವಿಸುವ ಸಾಧ್ಯತೆ ಇತ್ತು.ಇದು ಮೊದಲ ದಾಳಿಯಲ್ಲ. ಇದಕ್ಕೂ ಮೊದಲು ಯುರೋಪಿನ ಹಲವು ದೇಶಗಳ ಸೂಪರ್‌ಮಾರ್ಕೆಟ್‌ಗಳ ಶೀತಲೀಕರಣ ವ್ಯವಸ್ಥೆಗಳ ಮೇಲೆ ಸೈಬರ್ ದಾಳಿಗಳು ನಡೆದಿದ್ದವು. ಫ್ರಾನ್ಸ್‌ನಲ್ಲಿಯೇ ಸುಮಾರು 700 ಸೂಪರ್‌ಮಾರ್ಕೆಟ್‌ಗಳ ಶೀತಲೀಕರಣ ವ್ಯವಸ್ಥೆಗಳನ್ನು ಹ್ಯಾಕರ್‌ಗಳು ನಿಯಂತ್ರಣಕ್ಕೆ ಪಡೆದಿದ್ದರು ಎನ್ನಲಾಗಿದೆ. ಮೈನಸ್ 27 ಡಿಗ್ರಿಯಲ್ಲಿದ್ದ ಫ್ರೀಜರ್‌ಗಳ ತಾಪಮಾನವನ್ನು 50 ಡಿಗ್ರಿಗಿಂತ ಹೆಚ್ಚಿಸಿದ ಪರಿಣಾಮ ಮಾಂಸ, ಹಾಲಿನ ಉತ್ಪನ್ನಗಳು ಸೇರಿದಂತೆ ಅಪಾರ ಪ್ರಮಾಣದ ಆಹಾರ ಪದಾರ್ಥಗಳು ಹಾಳಾಗಿದ್ದವು. ಕೆಲವು ಮಳಿಗೆಗಳಿಗೆ ಒಂದು ಲಕ್ಷಕ್ಕೂ ಹೆಚ್ಚು ಯುರೋಗಳ ನಷ್ಟ ಉಂಟಾಗಿತ್ತು.

ಇಂದಿನ ಆಧುನಿಕ ಫ್ರಿಜ್‌ಗಳು ಮತ್ತು ಶೀತಲೀಕರಣ ಘಟಕಗಳನ್ನು ಇಂಟರ್ನೆಟ್ ಮೂಲಕ ನಿಯಂತ್ರಿಸುವ ವ್ಯವಸ್ಥೆ ಹೊಂದಿವೆ. ತಂತ್ರಜ್ಞರು ದೂರದ ಸ್ಥಳದಿಂದಲೇ ಅವುಗಳ ತಾಪಮಾನವನ್ನು ಪರಿಶೀಲಿಸಲು ಮತ್ತು ಬದಲಾಯಿಸಲು ಸಾಧ್ಯವಿದೆ. ಆದರೆ ಇಂತಹ ವ್ಯವಸ್ಥೆಗಳಿಗೆ ಸೂಕ್ತ ಭದ್ರತೆ ಇಲ್ಲದಿದ್ದರೆ, ಹ್ಯಾಕರ್‌ಗಳು ಅವುಗಳ ನಿಯಂತ್ರಣವನ್ನು ತಮ್ಮ ಕೈಗೆ ಪಡೆಯಬಹುದು. ಹಳೆಯ ತಂತ್ರಾಂಶ ಮತ್ತು ದುರ್ಬಲ ಪಾಸ್‌ವರ್ಡ್ ಇಂತಹ ದಾಳಿಗಳಿಗೆ ಅವಕಾಶ ಮಾಡಿಕೊಡಬಹುದು. ಈ ಪ್ರಕರಣದಲ್ಲಿ EFS ಸಂಸ್ಥೆಯೊಂದಿಗೆ ಕೆಲಸ ಮಾಡುತ್ತಿದ್ದ ಶೀತಲೀಕರಣ ನಿರ್ವಹಣಾ ಗುತ್ತಿಗೆದಾರ ಸಂಸ್ಥೆಯ ವ್ಯವಸ್ಥೆಗೆ ಹ್ಯಾಕರ್‌ಗಳು ಪ್ರವೇಶ ಪಡೆದಿರುವ ಶಂಕೆಯಿದೆ. ಆರಂಭದಲ್ಲಿ ಆರೋಗ್ಯ ಮೇಲ್ವಿಚಾರಣೆಗೆ ಸಂಬಂಧಿಸಿದ ರಕ್ತದ ಮಾದರಿಗಳಷ್ಟೇ ಅಪಾಯದಲ್ಲಿವೆ ಎನ್ನಲಾಗಿತ್ತು. ಬಳಿಕ ರಕ್ತ ವರ್ಗಾವಣೆಗೆ ಬಳಸುವ ಪ್ಲಾಸ್ಮಾವೂ ಆ ಘಟಕಗಳಲ್ಲಿ ಸಂಗ್ರಹವಾಗಿತ್ತು ಎಂಬುದು ದೃಢಪಟ್ಟಿದೆ.

ಪ್ರತಿಭಟನೆಯೂ ಒಂದು ಅರ್ಥವ್ಯವಸ್ಥೆ: ಸುಪ್ರೀಂ ಕೋರ್ಟ್

ನವದೆಹಲಿ, ನ.4: ಪ್ರತಿಭಟನೆಗಳು ಎಂದರೆ ಬರೀ ರಸ್ತೆ ತಡೆ, ಘೋಷಣೆಗಳು ಮತ್ತು ವ್ಯಾಪಾರ–ವಹಿವಾಟಿಗೆ ಧಕ್ಕೆ ಎಂಬ ಭಾವನೆ ಸಾಮಾನ್ಯ. ಆದರೆ, ಪ್ರತಿಭಟನೆಗಳು ಕೇವಲ ವ್ಯಾಪಾರಕ್ಕೆ ವೈರಿಯಲ್ಲ, ಅಲ್ಲಿಯೂ ಸಣ್ಣಪುಟ್ಟ ವ್ಯಾಪಾರಿಗಳ ಹೊಟ್ಟೆಪಾಡು ನಡೆಯುವ ಒಂದು ಪ್ರತಿಭಟನಾ ಅರ್ಥವ್ಯವಸ್ಥೆಯಾಗಿರುತ್ತದೆ ಎಂಬ ಸ್ವಾರಸ್ಯಕರ ಹಾಗೂ ಮಹತ್ವದ ಹೇಳಿಕೆಯನ್ನು ಸುಪ್ರೀಂ ಕೋರ್ಟ್ ನೀಡಿದೆ.

ದೆಹಲಿಯ ದಸರಾ ಹಾಗೂ ದೀಪಾವಳಿ ಯಂತಹ ಪ್ರಮುಖ ಹಬ್ಬಗಳ ಸಂದರ್ಭದಲ್ಲಿ ಸಾಲು ಸಾಲು ಧರಣಿಗಳಿಂದಾಗಿ ಸ್ಥಳೀಯ ವರ್ತಕರ ವ್ಯಾಪಾರ ನೆಲಕಚ್ಚುತ್ತಿದೆ ಎಂದು ಆರೋಪಿಸಿ ಕಿರಾಣ ಸಮಿತಿ ದೆಹಲಿ ಹಾಗೂ ನ್ಯೂ ದೆಹಲಿ ಟ್ರೇಡರ್ಸ್ ಅಸೋಸಿಯೇಷನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ವೇಳೆ ನ್ಯಾಯಪೀಠ ಈ ಗಮನಾರ್ಹ ಮಾತುಗಳನ್ನು ಆಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿ ಜೋಯ್ಮಾಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ. ಮೋಹನಾ ಅವರನ್ನೊಳಗೊಂಡ ಪೀಠವು ಈ ಅರ್ಜಿಯ ವಿಚಾರಣೆ ನಡೆಸಿತು.ವಿಚಾರಣೆ ವೇಳೆ ಪೀಠವು, ಪ್ರತಿಭಟಿಸುವ ಹಕ್ಕು ಹಾಗೂ ವ್ಯಾಪಾರ ಮಾಡುವ ಹಕ್ಕುಗಳೆರಡೂ ಸಂವಿಧಾನಬದ್ಧವಾದವು ಎಂದು ನುಡಿಯಿತು. ಇಲ್ಲಿ ನಾವು ದೊಡ್ಡ ದೊಡ್ಡ ವಾಣಿಜ್ಯ ಸಂಸ್ಥೆಗಳ ಬಗ್ಗೆ ಹೇಳುತ್ತಿಲ್ಲ. ದಿನಗೂಲಿ ನೌಕರರು, ತರಕಾರಿ ಮಾರಾಟಗಾರರು, ಬೀದಿಬದಿ ವ್ಯಾಪಾರಿಗಳ ಬದುಕಿನ ಮೂಲ ಆಧಾರದ ಬಗ್ಗೆ ಮಾತನಾಡುತ್ತಿದ್ದೇವೆ. ಅವರ ಹೊಟ್ಟೆಪಾಡಿನ ಹಕ್ಕು ಮತ್ತು ಪ್ರತಿಭಟನಾಕಾರರ ಅಭಿವ್ಯಕ್ತಿ ಸ್ವಾತಂತ್ರ್ಯದ ನಡುವೆ ಸಮತೋಲನ ಅಗತ್ಯ ಎಂದು ಸಿಜೆಐ ಸೂರ್ಯ ಕಾಂತ್ ಹೇಳಿದರು.ವರ್ತಕರ ಪರ ಹಿರಿಯ ವಕೀಲ ಮುಕುಲ್ ರೋಹಟಗಿ ವಾದ ಮಂಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಮೂರ್ತಿ ಜೋಯ್ಮಾಲ್ಯ ಬಾಗ್ಚಿ, ಪ್ರತಿಭಟನಾ ಸ್ಥಳಗಳಲ್ಲಿ ಕೇವಲ ನಷ್ಟವಷ್ಟೇ ಆಗುವುದಿಲ್ಲ. ಅಲ್ಲಿಗೆ ಬರುವ ಜನರಿಗೆ ನೀರು, ತಿಂಡಿ–ತಿನಿಸು ಪೂರೈಸುವ ಸಣ್ಣ ತಳ್ಳುವ ಬಂಡಿ ವ್ಯಾಪಾರಿಗಳಿಗೆ, ಬೀದಿಬದಿ ಮಾರಾಟಗಾರರಿಗೆ ವ್ಯಾಪಾರವಾಗುತ್ತದೆ. ಜಾತ್ರೆಗಳಲ್ಲಿ ಜಾತ್ರೆ ಅರ್ಥವ್ಯವಸ್ಥೆ ಇರುವಂತೆ ಪ್ರತಿಭಟನೆಗಳ ಸುತ್ತಲೂ ಒಂದು ಚಟುವಟಿಕೆ ನಡೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಕೇಂದ್ರ ಸರ್ಕಾರದ ಪರ ವಾದ ಮಂಡಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಜುಲೈನಲ್ಲಿ ನೀಟ್ ಪರೀಕ್ಷೆ ಅಕ್ರಮದ ವಿರುದ್ಧ ಕಾಕ್ರೋಚ್ ಜನತಾ ಪಾರ್ಟಿ ನಡೆಸಿದ ಪ್ರತಿಭಟನೆಯನ್ನು ನೆನಪಿಸಿದರು. ಅವರು ಒಂದು ದಿನದ ಶಾಂತಿಯುತ ಪ್ರತಿಭಟನೆಗೆ ಅನುಮತಿ ಪಡೆದು, ನಂತರ ಅಲ್ಲಿಂದ ಕದಲುವುದಕ್ಕೆ ಒಪ್ಪಲಿಲ್ಲ. ಅನುಮತಿಯೇ ಇಲ್ಲದೆ ಸಂಸದ್ ಚಲೋ ಮೆರವಣಿಗೆ ನಡೆಸಿ ಹಿಂಸಾಚಾರಕ್ಕೆ ಕಾರಣರಾದರು. ಪ್ರತಿಭಟನಾಕಾರರು ಸಾರ್ವಜನಿಕರಿಗೆ ಮಾಡುವ ನಷ್ಟಕ್ಕೆ ಹೊಣೆ ಹೊರಬೇಕು ಎಂದರು.

ಇದಕ್ಕೆ ಸಿಜೆಐ ಸೂರ್ಯಕಾಂತ್, ಪ್ರತಿಯೊಬ್ಬರಿಗೂ ಪ್ರತಿಭಟಿಸುವ ಹಕ್ಕಿದೆ, ಆದರೆ ನೀಡಿದ ಅನುಮತಿಯ ನಿಯಮಗಳನ್ನು ಪಾಲಿಸಲೇಬೇಕು. ಯಾವುದೇ ಸ್ಥಳವನ್ನು ಅನಿರ್ದಿಷ್ಟಾವಧಿಗೆ ಆಕ್ರಮಿಸಿಕೊಳ್ಳಲು ಸಾಧ್ಯವಿಲ್ಲ. ಬೇರೆ ಪ್ರತಿಭಟನಾಕಾರರೂ ಇರುತ್ತಾರೆ, ಅವರೆಲ್ಲ ಎಲ್ಲಿಗೆ ಹೋಗಬೇಕು ಎಂದು ಪ್ರಶ್ನಿಸಿದರು. ಅಂತಿಮವಾಗಿ, ಪ್ರತಿಭಟನೆ ಆಯೋಜಿಸಿದ ಸಂಘಟನೆಗಳನ್ನು ಪ್ರಕರಣದಲ್ಲಿ ಪಾರ್ಟಿಯನ್ನಾಗಿ ಮಾಡದೆ ಯಾವುದೇ ಮಧ್ಯಂತರ ಆದೇಶ ನೀಡಲು ನಿರಾಕರಿಸಿದ ಸುಪ್ರೀಂ ಕೋರ್ಟ್, ವರ್ತಕರ ಅರ್ಜಿಗೆ ಸಂಬಂಧಿಸಿದಂತೆ ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಮುಂದೂಡಿತು.

ರಾಮನ ಹೆಸರಿನಲ್ಲಿ ಇನ್ನೆಷ್ಟು ಪಾಪ ಮಾಡುತ್ತೀರಿ: ಕಾಂಗ್ರೆಸ್ ಆಕ್ರೋಶ

ನವದೆಹಲಿ, ನ.4: ಬಿಜೆಪಿ ಸರ್ಕಾರವು ಬಡವರ ಉದ್ಯೋಗ ಮತ್ತು ಜೀವನೋಪಾಯದ ಯೋಜನೆಯಲ್ಲಿ ಬೋಗಸ್ ಹಾಜರಾತಿ ಮೂಲಕ ಕೋಟ್ಯಂತರ ರೂಪಾಯಿ ಲೂಟಿಗೆ ಅವಕಾಶ ಮಾಡಿಕೊಡುತ್ತಿದೆ. ರಾಮನ ಹೆಸರಿನಲ್ಲಿ ಇನ್ನೆಷ್ಟು ಪಾಪ ಮಾಡುತ್ತೀರಿ ಎಂದು ಕಾಂಗ್ರೆಸ್ ಪ್ರಶ್ನಿಸಿದೆ.

ಗ್ರಾಮೀಣ ಭಾಗದ ಉದ್ಯೋಗ ಖಾತ್ರಿ ಯೋಜನೆಗೆ ನೂತನವಾಗಿ ಹೆಸರಿಡಲಾದ ವಿಬಿ–ಜಿ ರಾಮ್ ಜಿ ಅಡಿಯಲ್ಲಿ ತಂತ್ರಜ್ಞಾನ ಮತ್ತು ಮೊಬೈಲ್ ಆಪ್‌ಗಳನ್ನು ದುರ್ಬಳಕೆ ಮಾಡಿಕೊಂಡು ನಕಲಿ ಹಾಜರಾತಿ ದಾಖಲಿಸುವ ವ್ಯವಸ್ಥಿತ ದಂಧೆ ನಡೆಯುತ್ತಿದೆ ಎಂದು ಕಾಂಗ್ರೆಸ್, ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದೆ.

ಈ ಕುರಿತು ಸೋಷಿಯಲ್ ಮೀಡಿಯಾ ಎಕ್ಸ್ (ಟ್ವಿಟರ್) ನಲ್ಲಿ ಕಳವಳ ವ್ಯಕ್ತಪಡಿಸಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂಪರ್ಕ) ಜೈರಾಮ್ ರಮೇಶ್, ಬಿಜೆಪಿಯ ನೀತಿಗಳು ಬಡವರ ವಿರುದ್ಧವಾಗಿವೆ ಎಂದು ಕಿಡಿಕಾರಿದ್ದಾರೆ.

ಬಿಜೆಪಿಯ ರಾಜಕೀಯದಲ್ಲಿ ರಾಮನ ಬಗ್ಗೆ ನಿಜವಾದ ಭಕ್ತಿಯೂ ಇಲ್ಲ, ಬಡವರ ಬಗ್ಗೆ ಕರುಣೆಯೂ ಇಲ್ಲ. ರಾಮನ ಹೆಸರು ಹೇಳಿಕೊಂಡು ಅಧಿಕಾರ ನಡೆಸುವುದು ಮತ್ತು ಬಡವರ ಉದ್ಯೋಗದ ಹಕ್ಕನ್ನು ಕಸಿದುಕೊಳ್ಳುವುದೇ ಬಿಜೆಪಿಯ ಅಸಲಿ ಗುಣ, ಚಾರಿತ್ರ್ಯವಾಗಿದೆ. ರಾಮನ ಹೆಸರಿನಲ್ಲಿ ಬಿಜೆಪಿ ಇನ್ನೂ ಎಷ್ಟು ಪಾಪಗಳನ್ನು ಮಾಡುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೊಬೈಲ್ ಆಧಾರಿತ ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್ ಆಪ್‌ಗೆ ಪ್ರತಿಯಾಗಿ ನಕಲಿ/ಕ್ಲೋನ್ ಆಪ್ ಬಳಕೆ ಮಾಡಿಕೊಂಡು ಕಾಮಗಾರಿ ಸ್ಥಳದಲ್ಲಿ ಇಲ್ಲದ ಕಾರ್ಮಿಕರ ಹೆಸರಿನಲ್ಲೂ ಡಿಜಿಟಲ್ ಹಾಜರಾತಿ ಹಾಕಿ ಹಣ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಉತ್ತರ ಪ್ರದೇಶ ಸೇರಿದಂತೆ ಹಲವು ರಾಜ್ಯಗಳಲ್ಲಿ ಇಂತಹ ನಕಲಿ ಹಾಜರಾತಿ ಪ್ರಕರಣಗಳು ಬೆಳಕಿಗೆ ಬಂದಿದ್ದು, ಈ ಮೂಲಕ ಕೇಂದ್ರ ಸರ್ಕಾರವು ಗ್ರಾಮೀಣ ಕೂಲಿಯನ್ನು ಲೂಟಿ ಮಾಡುವ ವ್ಯವಸ್ಥೆಗೆ ದಾರಿ ಮಾಡಿಕೊಟ್ಟಿದೆ ಎಂದು ದೂರಲಾಗಿದೆ. ಬಡವರ ಹಕ್ಕಿನ ಹಣವನ್ನು ಮಧ್ಯವರ್ತಿಗಳು ಮತ್ತು ಬೋಗಸ್ ವ್ಯವಸ್ಥೆಯ ಮೂಲಕ ಸರ್ಕಾರಿ ಪ್ರಾಯೋಜಿತವಾಗಿ ದೋಚಲಾಗುತ್ತಿದೆ ಎಂದು ಕಾಂಗ್ರೆಸ್ ನಾಯಕರು ಕರೆದಿದ್ದು, ಯೋಜನೆಯಲ್ಲಾಗಿರುವ ಈ ಎಲ್ಲಾ ನಕಲಿ ಹಾಜರಾತಿ ಮತ್ತು ಭ್ರಷ್ಟಾಚಾರದ ಕುರಿತು ನಿಷ್ಪಕ್ಷಪಾತ ತನಿಖೆಯಾಗಬೇಕು ಎಂದು ಆಗ್ರಹಿಸಿದ್ದಾರೆ.

ಸರ್ಕಾರವು ಎಷ್ಟೇ ತಂತ್ರಜ್ಞಾನ ಆಧರಿತ ತಪಾಸಣೆ ಎಂದು ಪ್ರತಿಪಾದಿಸಿದರೂ, ವಾಸ್ತವದಲ್ಲಿ ಬಡ ಗ್ರಾಮೀಣ ಕೂಲಿಕಾರರಿಗೆ ತಲುಪಬೇಕಾದ ಹಣ ದಾರಿತಪ್ಪುತ್ತಿರುವುದು ಆತಂಕಕಾರಿ ವಿಷಯವಾಗಿದೆ ಎಂದು ವಿರೋಧ ಪಕ್ಷಗಳು ದೂರಿದೆ.

ಬಿಜೆಪಿ ವಿರುದ್ಧ ಅಪಪ್ರಚಾರ ಪ್ರಕರಣ: ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ ವಿರುದ್ಧದ ಖಾಸಗಿ ದೂರು ರದ್ದು

ಬೆಂಗಳೂರು, ನ.4: ವಿಧಾನಸಭೆ ಚುನಾವಣೆ ವೇಳೆ ಬಿಜೆಪಿ ವಿರುದ್ಧ ಅಪಪ್ರಚಾರ ಕೇಸ್ ಸಂಬಂಧ ಸಿಎಂ ಡಿ.ಕೆ. ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯಗೆ ಬಿಗ್ ರಿಲೀಫ್ ಸಿಕ್ಕಿದ್ದು, ಖಾಸಗಿ ದೂರನ್ನು ಹೈಕೋರ್ಟ್ ರದ್ದುಪಡಿಸಿದೆ.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ಈ ಬಗ್ಗೆ ಆದೇಶ ನೀಡಿದ್ದು, ಆದೇಶದ ವಿವರವಾದ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಿದೆ. ಜುಲೈ 4ರಂದು ಇದೇ ಪ್ರಕರಣದಲ್ಲಿ ಅಂದಿನ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯ ವಿಚಾರಣೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿತ್ತು. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಗೂ (ಕೆಪಿಸಿಸಿ) ಇದೇ ರೀತಿ ಪರಿಹಾರ ನೀಡಲಾಗಿತ್ತು. ಇದೇ ಪ್ರಕರಣದಲ್ಲಿ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧದ ವಿಚಾರಣೆಗೂ ಈ ವರ್ಷದ ಜನವರಿಯಲ್ಲಿ ಹೈಕೋರ್ಟ್ ತಡೆ ನೀಡಿತ್ತು.

2023ರ ವಿಧಾನಸಭಾ ಚುನಾವಣೆಗೂ ಮುನ್ನ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ಸ್ಥಳೀಯ



ಪತ್ರಿಕೆಗಳಲ್ಲಿ ಪ್ರಕಟಿಸಿದ್ದ ಭ್ರಷ್ಟಾಚಾರದ ರೇಟ್ ಕಾರ್ಡ್ ಜಾಹೀರಾತುಗಳು ಮತ್ತು ಕಾಂಗ್ರೆಸ್ ಸುಳ್ಳು ಪ್ರಚಾರ ನಡೆಸಿದೆ ಎಂದು ಆರೋಪಿಸಿ ಬಿಜೆಪಿ ರಾಜ್ಯ ಘಟಕ ದೂರು ದಾಖಲಿಸಿತ್ತು. 2023ರಲ್ಲಿ ವಿಚಾರಣಾ ನ್ಯಾಯಾಲಯ ಈ ದೂರನ್ನು ಪರಿಗಣನೆಗೆ ತೆಗೆದುಕೊಂಡಿತ್ತು. ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಾತಿ ಮತ್ತು ವರ್ಗಾವಣೆಗೆ ಬಿಜೆಪಿ ನಿರ್ದಿಷ್ಟ ದರ ಮತ್ತು ಕಮಿಷನ್ ಪಡೆಯುತ್ತಿದೆ ಎಂದು ಜಾಹೀರಾತುಗಳಲ್ಲಿ ಆರೋಪಿಸಲಾಗಿತ್ತು.

ಈ ಜಾಹೀರಾತುಗಳು ಬಿಜೆಪಿಯ ವರ್ಚಸ್ಸಿಗೆ ಧಕ್ಕೆ ತಂದಿವೆ ಎಂಬುದು ಬಿಜೆಪಿ ರಾಜ್ಯ ಘಟಕದ ವಾದವಾಗಿತ್ತು. ಆರೋಪಿಗಳು ತಮ್ಮ ಕಾಲ್ಪನಿಕ ಕಲ್ಪನೆಯ ಆಧಾರದಲ್ಲಿ ಸುಳ್ಳು ಆರೋಪಗಳನ್ನು ಮಾಡಿದ್ದಾರೆ ಎಂದು ಬಿಜೆಪಿ ಹೇಳಿಕೊಂಡಿತ್ತು. ಅಲ್ಲದೆ, ಜಾಹೀರಾತುಗಳಲ್ಲಿ ಜನಪ್ರಿಯವಾಗಿದ್ದ ಡಬಲ್ ಎಂಜಿನ್ ಸರ್ಕಾರ ಎಂಬ ಪದದ ಬದಲಿಗೆ ಟ್ರಬಲ್ ಎಂಜಿನ್ ಸರ್ಕಾರ ಎಂಬ ಪದ ಬಳಸಿರುವುದು ಬಿಜೆಪಿಯ ಹೆಸರು ಮತ್ತು ಗೌರವಕ್ಕೆ ಧಕ್ಕೆ ತರುವ ಉದ್ದೇಶ ಹೊಂದಿತ್ತು. ಚುನಾವಣೆಯಲ್ಲಿ ಪಕ್ಷದ ಗೆಲುವಿನ ಅವಕಾಶಗಳ ಮೇಲೂ ಪರಿಣಾಮ ಬೀರಲು ಈ ರೀತಿ ಮಾಡಲಾಗಿತ್ತು ಎಂದು ಬಿಜೆಪಿ ಆರೋಪಿಸಿತ್ತು.

ಈ ಸಂಬಂಧ ಬಿಜೆಪಿಯ ಕೇಶವಪ್ರಸಾದ್ ಎಂಬವರು ಮಾನನಷ್ಟ ಕೇಸ್ ದಾಖಲಿಸಿದ್ದರು.



ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಮುಖಂಡ ಬಿ.ಎಸ್. ಯಡಿಯೂರಪ್ಪ ಅವರು ಬುಧವಾರ ಲೋಕಭವನಕ್ಕೆ ಭೇಟಿನೀಡಿ ರಾಜ್ಯಪಾಲೆ ಸುಧಾ ಯಾದವ್ ಅವರನ್ನು ಅಭಿನಂದಿಸಿದರು. ಹಾಗೂ ಬೆಳಕಿನ ಹಬ್ಬ ದೀಪಾವಳಿ ಶುಭಾಶಯ ಕೋರಿದರು.

ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧ ಸಚಿವ ತಂಗಡಗಿ ಆರೋಪ

ಸಿದ್ದರಾಮಯ್ಯ ಪರ ಮಾತನಾಡುತ್ತ ಕಾಂಗ್ರೆಸ್ ನಾಯಕರ ನಡುವೆ ಭಿನ್ನಾಭಿಪ್ರಾಯ ಮೂಡಿಸುವ ಯತ್ನ

ಬೆಂಗಳೂರು, ನ.4: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅನ್ಯಾಯ ವಾಗುತ್ತಿದೆ ಎಂದು ಹೇಳುವ ಮೂಲಕ ಜೆಡಿಎಸ್ ನಾಯಕ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕಾಂಗ್ರೆಸ್ ನಾಯಕರ ನಡುವೆ ಭಿನ್ನಾಭಿಪ್ರಾಯ ಮೂಡಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಆರೋಪಿಸಿದ್ದಾರೆ.



ಮುಖ್ಯಮಂತ್ರಿ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಟಿಂಗ್ ಆಪರೇಷನ್ ಮಾಡಿಸಿ ತಮ್ಮ ಕಚೇರಿಯಲ್ಲಿ ಇಬ್ಬರನ್ನು ಕೂರಿಸಿಕೊಂಡು ಪ್ರಚಾರ ಮಾಡಿಸಿದ್ದು ಕುಮಾರಸ್ವಾಮಿ ಅವರೇ. ಒಂದು ಕಡೆ ಸಿದ್ದರಾಮಯ್ಯ ಅವರ ಪರವಾಗಿ ಮಾತನಾಡುತ್ತಾ, ಮತ್ತೊಂದೆಡೆ ತಮ್ಮ ಸಾಮಾಜಿಕ ಜಾಲತಾಣಗಳ ಮೂಲಕ ಸ್ಟಿಂಗ್ ಆಪರೇಷನ್ ಪ್ರಚಾರ ಮಾಡುತ್ತಿದ್ದಾರೆ ಎಂದು ದೂರಿದರು.

ಮುಖ್ಯಮಂತ್ರಿ ಹಾಗೂ ಮಾಜಿ ಮುಖ್ಯಮಂತ್ರಿ ನಡುವೆ ಜಗಳ ಹಚ್ಚುವ ಕೆಲಸವನ್ನು ಕುಮಾರಸ್ವಾಮಿ ಮಾಡುತ್ತಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಏಕವಚನದಲ್ಲಿ ಮಾತನಾಡುತ್ತಿದ್ದಾರೆ. ಕುಮಾರಸ್ವಾಮಿ ಅವರಿಗೆ ಸೂಕ್ತ ಸಮಯದಲ್ಲಿ ಉತ್ತರ ನೀಡುತ್ತೇವೆ ಎಂದರು.

ಒಕ್ಕಲಿಗ ಸಮುದಾಯದಿಂದ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿ ಸ್ಥಾನಕ್ಕೆ ಏರುವುದನ್ನು ಕುಮಾರಸ್ವಾಮಿ ಸಹಿಸಿಕೊಳ್ಳುತ್ತಿಲ್ಲ ಎಂದು ತಂಗಡಗಿ ಟೀಕಿಸಿದರು.

ಜಿಬಿಎ ಚುನಾವಣೆ: ಕಾಂಗ್ರೆಸ್‌ನಲ್ಲಿ ಚುರುಕುಗೊಂಡ ಸಿದ್ಧತೆ

ಬೆಂಗಳೂರು, ನ.4: ಡಿಸೆಂಬರ್ ಅಂತ್ಯದೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆ ನಡೆಸಬೇಕೆಂಬ ಗಡುವು ಸಮೀಪಿಸುತ್ತಿರುವ ಬೆನ್ನಲ್ಲೇ ಕಾಂಗ್ರೆಸ್ ಪಕ್ಷದಲ್ಲಿ ಚುನಾವಣಾ ಸಿದ್ಧತೆ ಚುರುಕುಗೊಂಡಿದೆ



ಒಂದೆಡೆ ಚುನಾವಣೆಗೆ ಅಗತ್ಯ ಸಿದ್ಧತೆಗಳು ನಡೆಯುತ್ತಿದ್ದರೆ, ಮತ್ತೊಂದೆಡೆ ಜಿಬಿಎ ವ್ಯಾಪ್ತಿಯಲ್ಲಿ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮಾಹಿತಿ ಜನರಿಗೆ ತಲುಪಿಸಲು ಗ್ಯಾರಂಟಿ ಅನುಷ್ಠಾನ ಸಮಿತಿ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಜಿಬಿಎ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕೃಷ್ಣಪ್ಪ ಅವರು ಇಂದು ಸುದ್ದಿಗೋಷ್ಠಿ ನಡೆಸಿ, ಬೆಂಗಳೂರಿನಲ್ಲಿ ಐದು ಗ್ಯಾರಂಟಿ ಯೋಜನೆಗಳ ಮೂಲಕ ಸರ್ಕಾರ ಮಾಡಿರುವ ವೆಚ್ಚ, ಫಲಾನುಭವಿಗಳ ಸಂಖ್ಯೆ ಹಾಗೂ ಯೋಜನೆಗಳ ಪ್ರಗತಿಯ ಕುರಿತು ಮಾಹಿತಿ ನೀಡಲಿದ್ದಾರೆ.

ಜಿಬಿಎ ವ್ಯಾಪ್ತಿಯ 369 ವಾರ್ಡ್‌ಗಳಿಗೆ ವಾರ್ಡ್ ಸಮಿತಿಗಳನ್ನು ರಚಿಸಲು ನಿರ್ಧರಿಸಿರುವುದೂ ಚುನಾವಣಾ ಸಿದ್ಧತೆಯ ಭಾಗವಾಗಿ ಮಹತ್ವ ಪಡೆದಿದೆ.

ಬಿಜೆಪಿ ಎಂಎಲ್‌ಸಿ ಛಲವಾದಿ ನಾರಾಯಣಸ್ವಾಮಿ ಪ್ರಚೋದನಾಕಾರಿ ಹೇಳಿಕೆ

ಬೆಂಗಳೂರಿನ ನಿವಾಸದ ಮುಂದೆ ಕಾಂಗ್ರೆಸ್ ಪ್ರತಿಭಟನೆ, ಪೊಲೀಸ್ ದೂರು ದಾಖಲು


ಬೆಂಗಳೂರು,ನ.4: ಕಾಂಗ್ರೆಸ್ ದೇಶದಲ್ಲಿ ಅರಾಜಕತೆ ಸೃಷ್ಟಿಸುತ್ತಿದೆ. ಅವರನ್ನು ಬಿಜೆಪಿ ಕಾರ್ಯಕರ್ತರು ತುಂಡು ತುಂಡಾಗಿ ಕತ್ತರಿಸಿ ಅರಬ್ಬಿ ಸಮುದ್ರಕ್ಕೆ ಎಸೆಯುತ್ತಾರೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ, ಬಿಜೆಪಿ ಮುಖಂಡ ಛಲವಾದಿ ನಾರಾಯಣಸ್ವಾಮಿ ಪ್ರಚೋದನಾಕಾರಿ ಹೇಳಿಕೆ ನೀಡಿದ್ದಾರೆ. ಅವರ ಹೇಳಿಕೆ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಬೆಂಗಳೂರಿನ ನಿವಾಸದ ಮುಂದೆ ಪ್ರತಿಭಟನೆ ನಡೆಸಿದ್ದು, ಬಂಧನಕ್ಕೆ ಆಗ್ರಹಿಸಿ ಪೊಲೀಸ್ ದೂರು ಸಲ್ಲಿಸಿದ್ದಾರೆ.

ಎಸ್‌ಐಆರ್ ವಿರುದ್ಧ ಕಾಂಗ್ರೆಸ್ ನಡೆಸುತ್ತಿರುವ ಹೋರಾಟವನ್ನು ವಿರೋಧಿಸಿ ನವೆಂಬರ್ 3ರಂದು ಕೋಲಾರದಲ್ಲಿ ಬಿಜೆಪಿ ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಪಾದಯಾತ್ರೆ ಆಯೋಜಿಸಿತ್ತು. ಈ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ನಾರಾಯಣಸ್ವಾಮಿ ಪ್ರಚೋದನಕಾರಿ ಕೇಳಿಕೆ ನೀಡಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಯನ್ನು ಕಾಂಗ್ರೆಸ್ ರಾಜಕೀಯಗೊಳಿಸುತ್ತಿದೆ. ಯುವಜನರನ್ನು ದಾರಿತಪ್ಪಿಸಿ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಪ್ರಯತ್ನಿಸುತ್ತಿದೆ. ಅವರನ್ನು ಕತ್ತರಿಸಿ, ಸಮುದ್ರಕ್ಕೆ ಎಸೆಯುತ್ತೇವೆ ಎಂದಿದ್ದಾರೆ.

ಅವರ ಹೇಳಿಕೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ ನಡೆಸಿದ ಬೆನ್ನಲ್ಲೇ, ತಮ್ಮ ಹೇಳಿಕೆಗೆ ಸಮಜಾಯಿಷಿ ನೀಡಿರುವ ನಾರಾಯಣಸ್ವಾಮಿ, ನಾನು ಯಾವುದೇ ವ್ಯಕ್ತಿಗೆ ಬೆದರಿಕೆ ಹಾಕಿಲ್ಲ. ಕಾಂಗ್ರೆಸ್ ವಿರುದ್ಧ ಮಾತನಾಡಿದ್ದೇನೆಯೇ ಹೊರತು ನಿರ್ದಿಷ್ಟ ನಾಯಕರನ್ನು ಉದ್ದೇಶಿಸಿಲ್ಲ. ಕಾಂಗ್ರೆಸ್ ದೇಶದಲ್ಲಿ ಅರಾಜಕತೆ ಸೃಷ್ಟಿಸುವುದನ್ನು ಮುಂದುವರಿಸಿದರೆ ಜನರು ಮತ್ತು ಬಿಜೆಪಿ ಕಾರ್ಯಕರ್ತರು ಆ ಪಕ್ಷವನ್ನು ರಾಜಕೀಯವಾಗಿ ನಿರ್ನಾಮ ಮಾಡುತ್ತಾರೆ ಎಂಬ ಅರ್ಥದಲ್ಲಿ ಮಾತನಾಡಿದ್ದೇನೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಅವರ ಸ್ಪಷ್ಟನೆಯನ್ನು ಕಾಂಗ್ರೆಸ್ ನಾಯಕರು ತಳ್ಳಿಹಾಕಿದ್ದು, ಪ್ರತಿಪಕ್ಷ ನಾಯಕನಂತಹ ಜವಾಬ್ದಾರಿಯುತ ಸ್ಥಾನದಲ್ಲಿರುವ ವ್ಯಕ್ತಿಯೊಬ್ಬರು ಈ ರೀತಿಯ ಭಾಷೆ ಬಳಸುವುದು ಬಿಜೆಪಿಯ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದಿದ್ದಾರೆ.

ನಾರಾಯಣಸ್ವಾಮಿ ಹೇಳಿಕೆ ವಿರುದ್ಧ ಬೆಂಗಳೂರಿನಲ್ಲಿರುವ ಅವರ ನಿವಾಸದ ಎದುರು ಕಾಂಗ್ರೆಸ್ ಕಾರ್ಯಕರ್ತರು



ಪ್ರತಿಭಟನೆ ನಡೆಸಿದ್ದಾರೆ. ಪ್ರತಿಭಟನೆಯ ವೇಳೆ ಕೆಲವರು ಪೊಲೀಸ್ ಬ್ಯಾರಿಕೇಡ್ಗಳನ್ನು ದಾಟಲು ಪ್ರಯತ್ನಿಸಿದ ಹಿನ್ನೆಲೆಯಲ್ಲಿ ಪೊಲೀಸರು ಮಧ್ಯಪ್ರವೇಶಿಸಿದ್ದು, 50ಕ್ಕೂ ಹೆಚ್ಚು ಕಾರ್ಯಕರ್ತರನ್ನು ವಶಕ್ಕೆ ಪಡೆದಿದ್ದಾರೆ. ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷ ಕುಶಾಲ್ ಹರುವೇಗೌಡ ಅವರು ನಾರಾಯಣಸ್ವಾಮಿ ವಿರುದ್ಧ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ಅಂದಹಾಗೆ, ಇದೇ ಛಲವಾದಿ ನಾರಾಯಣಸ್ವಾಮಿ 2022ರಲ್ಲಿ ಚಡ್ಡಿ ಬುಟ್ಟಿ ಪ್ರತಿಭಟನೆ ನಡೆಸಿ, ದಲಿತರಿಗೆ ಅವಮಾನಿಸಿದ್ದರು. ಆ ಸಮಯದಲ್ಲಿ, ಶಾಲಾ ಪಠ್ಯಪುಸ್ತಕಗಳ ಪರಿಷ್ಕರಣೆ ಮತ್ತು ಕೇಸರೀಕರಣ ವಿರೋಧಿಸಿ ಬಿಜೆಪಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ ನಡೆಸಿತ್ತು. ಆರ್‌ಎಸ್‌ಎಸ್‌ನ ಖಾಕಿ ಚಡ್ಡಿಗಳನ್ನು ಸುಡುವುದಾಗಿ ಸಿದ್ದರಾಮಯ್ಯ ಹೇಳಿದ್ದರು.

ಆಗ ಬಿಜೆಪಿಯ ಪರಿಶಿಷ್ಟ ಜಾತಿ ಮೋರ್ಚಾ ರಾಜ್ಯಾಧ್ಯಕ್ಷರಾಗಿದ್ದ ಛಲವಾದಿ ನಾರಾಯಣಸ್ವಾಮಿ, ಆರ್‌ಎಸ್‌ಎಸ್‌ನ ಹಳೆಯ ಚಡ್ಡಿಗಳನ್ನು ಬುಟ್ಟಿಯಲ್ಲಿ ಹೊತ್ತು ಕಾಂಗ್ರೆಸ್ ಕಚೇರಿ ಮತ್ತು ಸಿದ್ದರಾಮಯ್ಯ ಅವರ ನಿವಾಸಕ್ಕೆ ಕಳಿಸುತ್ತೇವೆಂದು ಪ್ರತಿಭಟನೆ ನಡೆಸಿದ್ದರು. ಆ ಘಟನೆಯನ್ನು ತೀಕ್ಷ್ಣವಾಗಿ ಟೀಕಿಸಿದ್ದ ಸಿದ್ದರಾಮಯ್ಯ, ಆರೆಸ್ಸೆಸ್‌ನಲ್ಲಿ ದಲಿತರಿಗೆ ಉನ್ನತ ಸ್ಥಾನಮಾನ ನೀಡುವುದಿಲ್ಲ. ಆದರೆ, ಚಡ್ಡಿ ಬುಟ್ಟಿ ಹೊರುವ ಕೆಲಸಕ್ಕೆ ದಲಿತ ನಾಯಕರನ್ನು ಬಳಸಿಕೊಳ್ಳಲಾಗುತ್ತಿದೆ. ಇದು ದಲಿತರನ್ನು ಅವಮಾನಿಸುವ ಧೋರಣೆಯ ಸಂಕೇತ ಎಂದು ಆರೋಪಿಸಿದ್ದರು.

ಇನ್ನು, ಪ್ರಚೋದನಾಕಾರಿ ಮತ್ತು ದ್ವೇಷಪೂರಿತ ಹೇಳಿಕೆ ನೀಡುವುದು ಬಿಜೆಪಿಗರಿಗೆ ಹಳೆಯ ಚಾಳಿ. 2023ರ ಚುನಾವಣೆ ಸಮಯದಲ್ಲಿ ಮಂಡ್ಯದಲ್ಲಿ ಭಾಷಣ ಮಾಡಿದ್ದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಸಿದ್ದರಾಮಯ್ಯ ಅವರನ್ನು ಟಿಪ್ಪು ಸುಲ್ತಾನನಂತೆ ಮುಗಿಸಬೇಕು ಎಂದು ಪ್ರಚೋದನಾಕಾರಿ ಹೇಳಿಕೆ ನೀಡಿದ್ದರು.

2020ರ ದೆಹಲಿ ವಿಧಾನಸಭಾ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ್ದ ಬಿಜೆಪಿ ನಾಯಕ ಅನುರಾಗ್ ಠಾಕೂರ್, ಸಿಎಎ ವಿರೋಧಿ ಪ್ರತಿಭಟನಾಕಾರರು ದೇಶದ್ರೋಹಿಗಳು. ಅವರನ್ನು ಗುಂಡಿಕ್ಕಿ ಕೊಲ್ಲಿ ಎಂದು ಹಿಂಸಾಚಾರಕ್ಕೆ ಪ್ರಚೋದನೆ ನೀಡುವ ಹೇಳಿಕೆ ನೀಡಿದ್ದರು. ಅಂದಹಾಗೆ, ಅದೇ ಸಮಯದಲ್ಲಿ ಈಶಾನ್ಯ ದೆಹಲಿಯಲ್ಲಿ ಹಿಂಸಾಚಾರ ನಡೆದಿತ್ತು.

ಅದೇ ದೆಹಲಿ ಚುನಾವಣಾ ಪ್ರಚಾರದಲ್ಲಿ ಸಿಎಎ ವಿರೋಧಿ ಪ್ರತಿಭಟನಾಕಾರರ ವಿರುದ್ಧ ನಾಲಿಗೆ ಹರಿಬಿಟ್ಟಿದ್ದ ಮತ್ತೊಬ್ಬ ಬಿಜೆಪಿಗ ಪರ್ವೇಶ್ ವರ್ಮಾ, ಮನೆಗಳಿಗೆ ನುಗ್ಗಿ ಮಹಿಳೆಯರ ಮೇಲೆ ಅತ್ಯಾಚಾರ ನಡೆಸಬಹುದು, ಜನರನ್ನು ಕೊಲ್ಲಬಹುದು ಎಂದು ದ್ವೇಷಪೂರಿತ ಹೇಳಿಕೆ ನೀಡಿದ್ದರು.

ಅದಷ್ಟೇ ಯಾಕೆ, 2024ರ ಲೋಕಸಭಾ ಚುನಾವಣೆ ವೇಳೆ, ಸ್ವತಃ ಪ್ರಧಾನಿ ನರೇಂದ್ರ ಮೋದಿ ಅವರು, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಹಿಳೆಯರ ಚಿನ್ನ ಮತ್ತು ಮಂಗಳಸೂತ್ರಗಳನ್ನು ಸಂಗ್ರಹಿಸಿ, ಹೆಚ್ಚು ಮಕ್ಕಳಿರುವವರಿಗೆ ಮತ್ತು ನುಸುಳುಕೋರರಿಗೆ ಹಂಚುತ್ತದೆ ಎಂದು ದ್ವೇಷ ಭಾಷಣ ಮಾಡಿದ್ದರು.

ಇನ್ನು, ಇತ್ತೀಚೆಗೆ, ದಾವಣಗೆರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕೂಡ ಕಾಂಗ್ರೆಸ್ ನಾಯಕರನ್ನು ಈ ನನ್ ಮಕ್ಕಳು ಎಂದು ಆಕ್ಷೇಪಾರ್ಹ ಪದಗಳಿಂದ ನಿಂದಿಸಿದ್ದರು. ಬಳಿಕ, ಆಕ್ರೋಶದಲ್ಲಿ ಕೆಲವು ಪದಗಳನ್ನು ಬಳಸಿದ್ದೇನೆ. ನನ್ನ ಮಾತುಗಳಿಂದ ನೋವಾಗಿದ್ದರೆ ಕ್ಷಮೆಯಾಚಿಸುತ್ತೇನೆ ಎಂದಿದ್ದರು.

ಇದೀಗ ಛಲವಾದಿ ನಾರಾಯಣಸ್ವಾಮಿ ಅವರ ಹೇಳಿಕೆಯನ್ನು ಕಾಂಗ್ರೆಸ್ ತೀವ್ರವಾಗಿ ಖಂಡಿಸಿದೆ. ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು, ನಾರಾಯಣಸ್ವಾಮಿ ಅವರದ್ದು ರಾಜಕೀಯ ನಾಯಕರ ಭಾಷೆಯೋ ಅಥವಾ ಬೀದಿ ರೌಡಿಗಳ ಭಾಷೆಯೋ ಕಾಂಗ್ರೆಸ್ ಕಾರ್ಯಕರ್ತರು ಇಂತಹ ಬೆದರಿಕೆಗಳಿಗೆ ಹೆದರುವುದಿಲ್ಲ ಎಂದಿದ್ದಾರೆ.

ಕರವೇ ಅಭಿಯಾನ ಟೀಕಿಸಿದ್ದ ಐಪಿಎಸ್ ಅಧಿಕಾರಿ ವಿರುದ್ಧ ನಾರಾಯಣಗೌಡ ಗರಂ

ಬೆಂಗಳೂರು, ನ.4: ಕನ್ನಡಿಗರಿಗೆ ಉದ್ಯೋಗ ಸಂಬಂಧ ಕರ್ನಾಟಕ ರಕ್ಷಣಾ ವೇದಿಕೆ ಆರಂಭಿಸಿರುವ ಅಭಿಯಾನ ಟೀಕಿಸಿದ್ದ ತಮಿಳುನಾಡಿನ ಐಪಿಎಸ್ ಅಧಿಕಾರಿ ಧನುಷ್ ಕುಮಾರ ವಿರುದ್ಧ ಆಕ್ರೋಶಗೊಂಡ ಕರವೇ ಅಧ್ಯಕ್ಷ ಟಿ.ಎ ನಾರಾಯಣ ಗೌಡರು, ತನ್ನ ಚಾಳಿ ಮುಂದುವರೆಸಿದರೇ ತಕ್ಕ ಪಾಠ ಕಲಿಯಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಾರಾಯಣಗೌಡ, ಕರ್ನಾಟಕದ ಐಟಿ–ಬಿಟಿ ಕಂಪನಿಗಳಲ್ಲಿ ಕನ್ನಡಿಗರಿಗೆ ಉದ್ಯೋಗದ ಹಕ್ಕನ್ನು ಪ್ರತಿಪಾದಿಸಿ ಮಾಹಿತಿ ಸಂಗ್ರಹಿಸುತ್ತಿರುವ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಾಚರಣ 'ಯನ್ನು ವಿರೋಧಿಸಿದ್ದ ಉದ್ಯಮಿ ಮೋಹನದಾಸ ಪೈ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕರ್ನಾಟಕದಲ್ಲಿದ್ದುಕೊಂಡು ಕನ್ನಡಿಗರ ಹಿತಾಸಕ್ತಿಯನ್ನು ಹಾಳುಮಾಡಲು ಯತ್ನಿಸುತ್ತಿರುವ ಮೋಹನದಾಸ ಪೈ ಈ ರಾಜ್ಯದಲ್ಲಿದ್ದ ಶಕುನಿಯಂತಿದ್ದಾರೆ. ಕನ್ನಡಿಗರ ಉದ್ಯೋಗದ ವಿಚಾರ ಪ್ರಸ್ತಾಪಿಸಿದರೆ ಕ್ಯಾತೆ ತೆಗೆಯುವ ಅವರಿಗೆ ಕರ್ನಾಟಕದಲ್ಲಿ ಇರಲು ಯೋಗ್ಯತೆಯಿಲ್ಲ, ಅವರು ತಕ್ಷಣವೇ ರಾಜ್ಯ ತೊರೆಯಬೇಕು ಎಂದು ನಾರಾಯಣಗೌಡ ವಾಗ್ದಾಳಿ ನಡೆಸಿದ್ದಾರೆ.

ಅಷ್ಟೇ ಅಲ್ಲದೆ, ಇತ್ತೀಚೆಗೆ ವಿವಾದಾತ್ಮಕ ಹೇಳಿಕೆ ನೀಡಿದ್ದ ತಮಿಳುನಾಡಿನ ಐಪಿಎಸ್ ಅಧಿಕಾರಿ ಧನುಷ್ ಕುಮಾರ್ ವಿರುದ್ಧವೂ ಗರಂ ಆದ ಅವರು, ತಮ್ಮ ಹಳೆಯ ಚಾಳಿ ಮುಂದುವರಿಸಿದರೆ ಸೂಕ್ತ ರೀತಿಯಲ್ಲೇ ಪಾಠ ಕಲಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ಕನ್ನಡ ಉಳಿವಿಗಾಗಿ ಹಲವು ವರ್ಷಗಳಿಂದ ಹೋರಾಟ ಮಾಡುತ್ತಿದ್ದೇವೆ. ಹಲವು ವರ್ಷಗಳಿಂದ ಕನ್ನಡಿಗರಿಗೆ ಉದ್ಯೋಗ ಸಿಗುತ್ತಿಲ್ಲವೆಂಬ ಕೂಗು ಇದೆ. 1984ರಲ್ಲಿ ಅಂದಿನ ಸಿಎಂ ರಾಮಕೃಷ್ಣ ಹೆಗಡೆ ಸಮಿತಿ ರಚಿಸಿದ್ದರು. ಡಾ. ಸರೋಜಿನಿ ಮಹಿಷಿ ನೇತೃತ್ವದಲ್ಲಿ ಸಮಿತಿ ರಚನೆ ಮಾಡಿದ್ದರು. ಅಂದಿನ ಭಾಷಾ ಅಲ್ಪಸಂಖ್ಯಾತರು ಆ ವರದಿ ಜಾರಿಗೆ ಬಿಡಲಿಲ್ಲ ಎಂದು ತಿಳಿಸಿದರು.

ಐಟಿ ಕಂಪನಿಗಳಿಂದ ಉದ್ಯೋಗದ ಅಂಕಿಅಂಶಗಳನ್ನು ಸಂಗ್ರಹಿಸುವ ಪ್ರಕ್ರಿಯೆಯ ಭಾಗವಾಗಿ, ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ನೀಡಬೇಕೆಂಬ ತನ್ನ ಬೇಡಿಕೆಯನ್ನು ಕೇವಲ ಕಾರ್ಪೊರೇಟ್ ಕಚೇರಿಗಳಿಗೆ ಸೀಮಿತಗೊಳಿಸದೆ, ಅದನ್ನು ಒಂದು ವ್ಯಾಪಕ ಸಾರ್ವಜನಿಕ ಅಭಿಯಾನವನ್ನಾಗಿ ಪರಿವರ್ತಿಸಲು ಕರ್ನಾಟಕ ರಕ್ಷಣಾ ವೇದಿಕೆ ಸಿದ್ಧತೆ ನಡೆಸುತ್ತಿದೆ ಎಂದಿದ್ದಾರೆ.

ರೆಸ್ಯೂಮ್‌ನಲ್ಲಿ ಕನ್ನಡ ಇದ್ದಿದ್ದಕ್ಕೆ ಉದ್ಯೋಗ ಸಿಗುತ್ತಿಲ್ಲ. ಉದ್ಯೋಗ ಸಿಗದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ಚರ್ಚೆಯಾಗಿದೆ. ಕರ್ನಾಟಕ ರಕ್ಷಣಾ ವೇದಿಕೆ ಈ ನಿಟ್ಟಿನಲ್ಲಿ ಆಂದೋಲನ ಆರಂಭಿಸಿದ್ದು ಕಳೆದ 3 ದಿನಗಳಿಂದ ಅಭಿಯಾನ ಆರಂಭಿಸಿದೆ ಕನ್ನಡಿಗರಿಗೆ ಎಷ್ಟು ಉದ್ಯೋಗ ಕೊಟ್ಟಿದ್ದೀರೆಂದು ಮಾಹಿತಿ ಕೇಳಲಾಗಿದೆ. ಕರವೇಯ 10 ತಂಡಗಳಿಂದ ಐಟಿಬಿಟಿ ಕಂಪನಿಗಳಿಗೆ ಮನವಿ ಸಲ್ಲಿಕೆ ಮಾಡಿದ್ದೇವೆ ಎಂದರು.


ಈ ಕಂಪನಿಗಳಲ್ಲಿ ಎಷ್ಟು ಮಂದಿ ಕನ್ನಡಿಗರು ಉದ್ಯೋಗದಲ್ಲಿದ್ದಾರೆ ಮತ್ತು ಅವರು ಯಾವ ಹಂತಗಳಲ್ಲಿದ್ದಾರೆ ಎಂಬುದನ್ನು ಮೊದಲು ನಾವು ಕಂಡುಕೊಳ್ಳಬೇಕಿದೆ. ಒಮ್ಮೆ ನಮ್ಮ ಬಳಿ ಈ ಮಾಹಿತಿ ಲಭ್ಯವಾದರೆ, ನಾವು ಈ ವಿಷಯವನ್ನು ಮುಂದಕ್ಕೆ ಕೊಂಡೊಯ್ಯುತ್ತೇವೆ. ಕೇವಲ ಮಹಿಷಿ ವರದಿಯನ್ನು ಜಾರಿಗೊಳಿಸುವುದು ಮಾತ್ರವಲ್ಲ, ಅದನ್ನು ಒಂದು ಕಾನೂನಿನ ರೂಪಕ್ಕೆ ತರಬೇಕೆಂಬುದು ನಮ್ಮ ಬೇಡಿಕೆ," ಎಂದು ಅವರು ಹೇಳಿದರು. ಜನರು ಈ ಜವಾಬ್ದಾರಿಯನ್ನು ಕೇವಲ ಕೆಆರ್‌ವಿ ಮೇಲೆಯೇ ಬಿಡಬಾರದು. ಸಾಮಾನ್ಯ ಕನ್ನಡಿಗರು ತಮ್ಮ ಧ್ವನಿ ಎತ್ತಬೇಕು. ಇದೊಂದು ಜನ ಚಳುವಳಿಯಾಗಿ ಮಾರ್ಪಟ್ಟಾಗ, ಸರ್ಕಾರವು ಸ್ಪಂದಿಸಲೇಬೇಕಾಗುತ್ತದೆ," ಎಂದು ಅವರು ಹೇಳಿದರು.

ರಾಜ್ಯ ಸರ್ಕಾರಿ ನೌಕರರಿಗೆ ಶೇ.2.5ರಷ್ಟು ತುಟ್ಟಿಭತ್ಯೆ ಹೆಚ್ಚಳಕ್ಕೆ ಅನುಮೋದನೆ

ಬೆಂಗಳೂರು, ನ.4: ರಾಜ್ಯ ಸರ್ಕಾರಿ ನೌಕರರಿಗೆ ಸರ್ಕಾರವು ಸಿಹಿಸುದ್ದಿ ನೀಡಿದ್ದು, ತುಟ್ಟಿಭತ್ಯೆಯನ್ನು (ಡಿಎ) ಶೇ. 2.50 ರಷ್ಟು ಹೆಚ್ಚಳ ಮಾಡುವ ಮಹತ್ವದ ಕಡತಕ್ಕೆ ಅನುಮೋದನೆ ದೊರೆತಿದೆ. ಈ ಪರಿಷ್ಕೃತ ತುಟ್ಟಿಭತ್ಯೆಯು 2026ರ ಜುಲೈ 1ರಿಂದಲೇ ಅನ್ವಯವಾಗುವಂತೆ ಜಾರಿಗೆ ಬರಲಿದೆ ಎಂದು ತಿಳಿಸಲಾಗಿದೆ.

ಈ ಕುರಿತ ಕಡತಕ್ಕೆ ಅನುಮೋದನೆ ದೊರೆತಿದ್ದು, ನಾಳೆ ಈ ಸಂಬಂಧ ಅಧಿಕೃತ ಸರ್ಕಾರಿ ಆದೇಶ ಹೊರಬೀಳುವ ಸಾಧ್ಯತೆಯಿದೆ.

ತುಟ್ಟಿಭತ್ಯೆ ಹೆಚ್ಚಳಕ್ಕೆ ಹಸಿರು ನಿಶಾನೆ ತೋರಿದ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಾಕ್ಷರಿ ಅವರು ಸರ್ಕಾರಕ್ಕೆ ಹಾಗೂ ಸಂಬಂಧಿಸಿದ ನಾಯಕರಿಗೆ ಸಂಘದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.



ಸರ್ಕಾರದ ಈ ನಿರ್ಧಾರದಿಂದಾಗಿ ರಾಜ್ಯದ ಲಕ್ಷಾಂತರ ಸರ್ಕಾರಿ ನೌಕರರಿಗೆ ಆರ್ಥಿಕ ಅನುಕೂಲ ವಾಗಲಿದೆ. ರಾಜ್ಯದ ಸರ್ಕಾರದ ನಿರ್ಧಾರ ವನ್ನು ಸಾಗರ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಂತೋಷ್ ಕುಮಾರ್. ಎನ್ ಸ್ವಾಗತಿಸಿ, ಸರ್ಕಾರಕ್ಕೆ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರಿಗೆ ಸಮಸ್ತ ಸರ್ಕಾರಿ ನೌಕರರ ಪರವಾಗಿ ಅಭಿನಂದನೆಗಳು ಸಲ್ಲಿಸಿದ್ದಾರೆ.

ಮಾಫಿಸಾಕ್ಷಿ ಪ್ರದೋಶ್‌ರಾವ್‌ಗೆ ಷರತ್ತಿನ ಜಾಮೀನು ಮಂಜೂರು

ಬೆಂಗಳೂರು, ನ.4: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಮಾಫಿ ಸಾಕ್ಷಿ ಪ್ರದೋಶ್ ರಾವ್‌ಗೆ ಕರ್ನಾಟಕ ಹೈಕೋರ್ಟ್ ಆರು ದಿನಗಳ ಷರತ್ತುಬದ್ಧ ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ಪ್ರದೋಶ್ ರಾವ್ ತನ್ನ ತಂದೆಯ ವಾರ್ಷಿಕ ತಿಥಿಯಲ್ಲಿ ಪಾಲ್ಗೊಳ್ಳಲು 20 ದಿನಗಳ ಮಧ್ಯಂತರ ಜಾಮೀನು ನೀಡಬೇಕು ಎಂದು ಈ ಹಿಂದೆ ವಿಚಾರಣಾ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಆದರೆ ವಿಚಾರಣಾ ನ್ಯಾಯಾಲಯ ಪ್ರದೂಶ್ ಅರ್ಜಿಯನ್ನು ವಜಾ ಮಾಡಿತ್ತು. ಈ ಹಿನ್ನಲೆ ಪ್ರದೂಶ್ ಪರ ವಕೀಲರು ಹೈಕೋರ್ಟ್ ಮೆಟ್ಟಿಲೇರಿದ್ದರು. ಇಂದು ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಅನಂತ ರಾಮನಾಥ್ ಹೆಗಡೆ ಅವರಿದ್ದ ಪೀಠ ಪ್ರದೂಶ್ ರಾವ್‌ಗೆ ನವೆಂಬರ್ 7 ರಿಂದ 12 ರ ವರೆಗೂ ಷರತ್ತು ಬದ್ದ ಮಧ್ಯಂತರ



ಜಾಮೀನು ನೀಡಿದೆ.

ನವೆಂಬರ್ ಏಳರಂದು ಬೆಳಗ್ಗೆ 7 ಗಂಟೆಗೆ ಜೈಲಿನಿಂದ ಕರೆದುಕೊಂಡು ಹೋಗಬೇಕು, ಈ ವೇಳೆ ಸಿಬ್ಬಂದಿ ಭದ್ರತೆ ನೀಡಬೇಕು. ಪ್ರಕರಣಕ್ಕೆ ಸಂಬಂಧಿಸಿದವರ ಜೊತೆ ಮಾತನಾಡಲು ಅವಕಾಶ ನೀಡಬಾರದು. ಹಾಗೂ ನವೆಂಬರ್ 12 ರಂದು ಸಂಜೆ ಆರು ಗಂಟೆ ವೇಳೆಗೆ ಪರಪ್ಪನ ಆಗ್ರಹಾರಕ್ಕೆ ವಾಪಸ್ಸಾಗಬೇಕು ಎಂಬ ಷರತ್ತು ವಿಧಿಸಲಾಗಿದೆ.

ಭಾರತ ಹಾಕಿ ತಂಡದ ಮಾಜಿ ನಾಯಕ ಸೋಮಯ್ಯ ಮನೆಯಲ್ಲಿ ಕಳವು

ಬೆಂಗಳೂರು, ನ.4: ಮಾಸ್ಕೊ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆದ್ದಿದ್ದ ಭಾರತ ಹಾಕಿ ತಂಡದ ಮಾಜಿ ನಾಯಕ ಸೋಮಯ್ಯ ಅವರ ಮನೆಯಲ್ಲಿ ಕಳ್ಳತನವಾಗಿದ್ದು, 30 ಸಾವಿರ ನಗದು ಸೇರಿದಂತೆ 3.53 ಲಕ್ಷ ರೂ. ಮೌಲ್ಯದ ಸ್ವರ್ಣ ಹಾಗೂ ಬೆಳ್ಳಿ ಪದಕಗಳನ್ನು ಚೋರರು ಕದ್ದೊಯ್ದಿರುವ ಘಟನೆ ಇಂದಿರಾನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.ತಿಪ್ಪಸಂದ್ರದ ಎಚ್‌ಎಎಲ್ 3ನೇ ಹಂತದಲ್ಲಿ ವಾಸವಿರುವ ಸೋಮಯ್ಯ ಅವರು ಕುಟುಂಬದೊಂದಿಗೆ ಅ.25ರಂದು ಬೆಳಗ್ಗೆ ನಗರದಿಂದ ಕೊಡಗಿಗೆ ಹೋಗಿದ್ದಾರೆ.

ಆ ಸಮಯದಲ್ಲಿ ಕಳ್ಳರು ಇವರ ಮನೆಯ ಮುಂಬಾಗಿಲಿನ ಬೀಗ ಮೀಟಿ ಒಳಗೆ ನುಗ್ಗಿ ಚಿನ್ನ, ಬೆಳ್ಳಿ, ಕಂಚಿನ ಪದಕ, ಹಣ ಹಾಗೂ ಆಭರಣ ದೋಚಿ ಪರಾರಿಯಾಗಿದ್ದಾರೆ. ಅ.28ರಂದು ಬೆಳಗ್ಗೆ ನೆರೆಮನೆಯವರಾದ ನಾರಾಯಣ್ ಎಂಬುವವರು ಸೋಮಯ್ಯ ಅವರ ಮನೆಯ ಬಾಗಿಲು ತೆರೆದಿರುವುದನ್ನು ಗಮನಿಸಿ ಕಳ್ಳತನವಾಗಿರಬಹುದೆಂದು ತಿಳಿದು ತಕ್ಷಣ ಅವರಿಗೆ ಮೊಬೈಲ್ ಕರೆ ಮಾಡಿ ವಿಷಯ ತಿಳಿಸಿದ್ದಾರೆ.

ಸೋಮಯ್ಯ ಅವರು ತಕ್ಷಣ ಕೊಡಗಿನಿಂದ ವಾಪಸ್ ಬಂದು ನೆರೆಮನೆಯಲ್ಲಿ ಅಳವಡಿಸಿದ್ದ ಸಿಸಿ ಕ್ಯಾಮೆರಾ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ, ಅ.28ರಂದು ಬೆಳಗಿನ ಜಾವ 2.30ರ ಸುಮಾರಿಗೆ ಇಬ್ಬರು ಕಳ್ಳರು ಮನೆಯ ಬಾಗಿಲನ್ನು ಮುರಿದು ಒಳಗೆ ನುಗ್ಗಿ ಬೆಲೆಬಾಳುವ ವಸ್ತುಗಳನ್ನು ಕಳ್ಳತನ ಮಾಡಿಕೊಂಡು ಹೋಗಿರುವುದು ಗೊತ್ತಾಗಿದೆ. ಇಬ್ಬರ ಪೈಕಿ ಒಬ್ಬಾತ ನೀಲಿಬಣ್ಣದ ಶರ್ಟ್ ಹಾಗೂ ಮತ್ತೊಬ್ಬ ಕೆಂಪು ಬಣ್ಣದ ಶರ್ಟ್ ಧರಿಸಿದ್ದು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.ಈ ಬಗ್ಗೆ ಸೋಮಯ್ಯ ಅವರು ಇಂದಿರಾನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಕಳ್ಳರು 3 ಸಾವಿರ ರೂ. ಬೆಲೆಯ 144 ಗ್ರಾಂ ತೂಕದ ಎರಡು ಬೆಳ್ಳಿ



ಟ್ರೋಫಿಗಳು, 1.30 ಲಕ್ಷ ರೂ. ಮೌಲ್ಯದ ಚಿನ್ನದ ಬಳೆ, 45 ಸಾವಿರ ರೂ. ಬೆಲೆಯ 200 ಗ್ರಾಂ ತೂಕದ ಆರು ಬೆಳ್ಳಿ ಸೂನ್, 18 ಸಾವಿರ ರೂ. ಬೆಲೆಯ 80 ಗ್ರಾಂ ತೂಕದ ಬೆಳ್ಳಿ ಪಾರ್ಟ್ಸ್, 1 ಲಕ್ಷ ರೂ. ಬೆಲೆಯ 8 ಗ್ರಾಂ ಚಿನ್ನದ ಕಾಯಿನ್ ಹಾಗೂ 30 ಸಾವಿರ ರೂ. ನಗದು ದೋಚಿದ್ದು, ಇವುಗಳ ಒಟ್ಟು ಮೌಲ್ಯ 3.53 ಲಕ್ಷ ರೂ. ಎಂದು ಅಂದಾಜಿಸಲಾಗಿದೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಸಿಸಿ ಕ್ಯಾಮೆರಾ ದೃಶ್ಯಾವಳಿಯನ್ನಾಧರಿಸಿ ಖದೀಮರ ಪತ್ತೆಗೆ ಬಲೆ ಬೀಸಿದ್ದಾರೆ.

ಸಾಹುಕಾರ್ ಮತ್ತು ಕೆಪಿಎಸ್ಸಿ ಅಕ್ರಮ: ಇಡಿ ತನಿಖೆಯಿಂದ ಸ್ಫೋಟಕ ಮಾಹಿತಿ ಬಹಿರಂಗ

ಸ್ವಗ್ರಾಮದಲ್ಲಿ 35 ಕೋಟಿ ರೂ. ವೆಚ್ಚದ ಬೃಹತ್ ಸಂಕೀರ್ಣ ನಿರ್ಮಿಸಲು ಮುಂದಾಗಿದ್ದ ಶಿವಶಂಕರಪ್ಪ ಸಾಹುಕಾರ್

ಬೆಂಗಳೂರು, ನ.4: ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ನೇಮಕಾತಿ ಅಕ್ರಮ ಪ್ರಕರಣದಲ್ಲಿ ಬಂಧಿತರಾಗಿ ಅಮಾನತುಗೊಂಡಿರುವ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್, ತನ್ನ ಸ್ವಗ್ರಾಮ ಯಾದಗಿರಿಯ ಶಹಾಪುರದಲ್ಲಿ 35 ಕೋಟಿ ವೆಚ್ಚದ ಬೃಹತ್ ಸಂಕೀರ್ಣ ನಿರ್ಮಿಸಲು ಯೋಜನೆ ರೂಪಿಸಿದ್ದರೆಂದು ಜಾರಿ ನಿರ್ದೇಶನಾಲಯ (ಇಡಿ) ನ್ಯಾಯಾಲಯಕ್ಕೆ ಮಾಹಿತಿ ನೀಡಿದೆ.

ಶಾಲೆ, ವಸತಿ ನಿಲಯ, ಆಟದ ಮೈದಾನ, ಮಾಲ್ ಹಾಗೂ ಸಮಾವೇಶ ಭವನ ಒಳಗೊಂಡ ಈ ಯೋಜನೆಗೆ ಸಂಬಂಧಿಸಿದ ವಾಸ್ತುಶಿಲ್ಪದ ನಕ್ಷೆಗಳನ್ನೂ ಸಿದ್ಧಪಡಿಸಲಾಗಿತ್ತು ಎಂದು ಇಡಿ ತಿಳಿಸಿದೆ. ಸಾಹುಕಾರ್ ಅವರ ಪತ್ನಿಯ ಹೆಸರಿನಲ್ಲಿರುವ ಜಮೀನಿನಲ್ಲಿ ಈ ಯೋಜನೆ ನಿರ್ಮಿಸಲು ಉದ್ದೇಶಿಸಲಾಗಿತ್ತು ಎಂದು ತನಿಖಾ ಸಂಸ್ಥೆ ಹೇಳಿದೆ.

ಸಾಹುಕಾರ್ ಮತ್ತು ಕೆಪಿಎಸ್‌ಸಿ ಸದಸ್ಯೆ ಬಿ.ವಿ. ಗೀತಾ ಅವರ ಜಾಮೀನು ಅರ್ಜಿಗಳ ವಿಚಾರಣೆ ವೇಳೆ ವಿಶೇಷ ನ್ಯಾಯಾಲಯದ ಮುಂದೆ ಇಡಿ ಈ ಸಂಗತಿಗಳನ್ನು ಪ್ರಸ್ತಾಪಿಸಿದೆ. ಸೋಮವಾರ ಎರಡೂ ಕಡೆಯ ವಾದ–ಪ್ರತಿವಾದ ಮುಕ್ತಾಯಗೊಂಡಿದ್ದು, ನ್ಯಾಯಾಲಯ ತನ್ನ ಆದೇಶವನ್ನು ಕಾಯ್ದಿರಿಸಿದೆ.

ಇಡಿ ತನಿಖೆಯ ಪ್ರಕಾರ, ಜನವರಿ 9ರಂದು ನಡೆದ ಪಶುಸಂಗೋಪನಾ ಅಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಹಾಗೂ ಉತ್ತರ ಕೀಲಿ ಸೋರಿಕೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಲಂಚದ ಹಣ ಸಂಗ್ರಹಿಸಲಾಗಿತ್ತು. ಈ ಪ್ರಕರಣದಲ್ಲಿ ಲಂಚ ನೀಡಿದ್ದ ಅಭ್ಯರ್ಥಿಯೊಬ್ಬರ ಪೋಷಕರನ್ನು, ಸಾಹುಕಾರ್ ಉದ್ದೇಶಿಸಿದ್ದ ಶಾಲೆಯ ಉಸ್ತುವಾರಿಯನ್ನಾಗಿ ನೇಮಿಸಲು ಯೋಜಿಸಲಾಗಿತ್ತು ಎಂಬ ಅಂಶವೂ ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಸಾಹುಕಾರ್ ಮತ್ತು ರಿಯಲ್ ಎಸ್ಟೇಟ್ ಉದ್ಯಮಿ ಎಸ್.ಪಿ. ದಯಾನಂದ್ ನಡುವೆ 10 ಕೋಟಿಗೂ ಅಧಿಕ ಮೊತ್ತದ ನಗದು ವ್ಯವಹಾರ ನಡೆದಿರುವುದನ್ನು ಇಡಿ ಗುರುತಿಸಿದೆ. 2025ರ ಆಗಸ್ಟ್‌ನಿಂದ ಡಿಸೆಂಬರ್ ಅವಧಿಯಲ್ಲಿ ನಡೆದಿರುವ 4.99 ಕೋಟಿ ವಹಿವಾಟು ಇದರಲ್ಲಿ ಸೇರಿದೆ ಎಂದು ಸಂಸ್ಥೆ ತಿಳಿಸಿದೆ. ಆಗಸ್ಟ್ 18ರಿಂದ 24ರವರೆಗೆ ಸಾಹುಕಾರ್ ನಿವಾಸದಲ್ಲಿ ನಡೆಸಿದ ಶೋಧದ ವೇಳೆ ಅಭ್ಯರ್ಥಿಗಳ ವಿವರ, ನಗದು ವ್ಯವಹಾರ ಹಾಗೂ ಇತರ ಮಾಹಿತಿಗಳನ್ನು ಒಳಗೊಂಡಿದ್ದ ನೋಟ್‌ಬುಕ್ ಮತ್ತು ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇಡಿ ನ್ಯಾಯಾಲಯಕ್ಕೆ ತಿಳಿಸಿದೆ.



ಜಾಮೀನು ಅರ್ಜಿಗೆ ಆರೋಪಿಗಳ ಪರ ವಾದ: ಸಾಹುಕಾರ್ ಪರ ವಕೀಲ ಸಿ.ಎಚ್. ಹನುಮಂತರಾಯ ಅವರು, ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಜಾಮೀನು ನೀಡಲು ಅವಕಾಶವಿದೆ ಎಂದು ವಾದಿಸಿದ್ದಾರೆ. ಅಪರಾಧದಿಂದ ಬಂದ ಹಣದಲ್ಲಿ 1 ಕೋಟಿಗೂ ಅಧಿಕ ಮೊತ್ತವನ್ನು ಸಾಹುಕಾರ್ ವೈಯಕ್ತಿಕವಾಗಿ ಪಡೆದಿದ್ದಾರೆ ಎಂಬ ಆರೋಪ ಇಲ್ಲ ಎಂದು ನ್ಯಾಯಾಲಯದ ಗಮನಕ್ಕೆ ತಂದಿದ್ದಾರೆ.

ಇದಕ್ಕೆ ಪ್ರತಿಯಾಗಿ ಇಡಿ ಪರ ವಕೀಲೆ ಮಹೇಶ್ವರಿ ಡಿ.ಎಂ., ಹಣದ ಪ್ರಮಾಣವನ್ನು ಒಬ್ಬ ಅಭ್ಯರ್ಥಿಗೆ ಸಂಬಂಧಿಸಿದಂತೆ ಮಾತ್ರ ಪರಿಗಣಿಸಬಾರದು. ಕೆಪಿಎಸ್ಸಿ ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿರುವ ಒಟ್ಟಾರೆ ಭ್ರಷ್ಟಾಚಾರದ ಹಿನ್ನೆಲೆಯಲ್ಲಿ ಅದನ್ನು ನಿರ್ಧರಿಸಬೇಕು ಎಂದು ಪ್ರತಿವಾದಿಸಿದ್ದಾರೆ. ಇನ್ನು ಕೆಪಿಎಸ್‌ಸಿ ಸದಸ್ಯೆ ಬಿ.ವಿ.ಗೀತಾ ಮಹಿಳೆಯಾಗಿರುವುದರಿಂದ ಪಿಎಂಎಲ್‌ಎ ಅಡಿಯಲ್ಲಿ ವಿಶೇಷ ಪರಿಗಣನೆಗೆ ಅರ್ಹರು ಎಂದು ಅವರ ಪರ ವಕೀಲರು ವಾದಿಸಿದ್ದಾರೆ. ಆದರೆ ಗೀತಾ ಅವರು ಪ್ರಕರಣದಲ್ಲಿ ಬಲಿಪಶುವಲ್ಲ, ಆರೋಪಿತ ಅಕ್ರಮಗಳ ಅರಿವಿದ್ದೇ ಭಾಗಿಯಾಗಿದ್ದಾರೆ ಎಂಬುದು ಇಡಿ ಪ್ರತಿವಾದವಾಗಿದೆ.

ಎಸ್‌ಐಟಿ ತನಿಖೆಗೆ ಹೈಕೋರ್ಟ್ ಹೊಸ ನಿರ್ದೇಶನ : ಈ ಪ್ರಕರಣದಲ್ಲಿ ಸಾಹುಕಾರ್, ಗೀತಾ ಹಾಗೂ ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಸೇರಿದಂತೆ ಪ್ರಮುಖರ ವಿರುದ್ಧ ಸುಮಾರು 20 ಅಭ್ಯರ್ಥಿಗಳಿಗೆ ಪ್ರಶ್ನೆಗಳು ಮತ್ತು ಉತ್ತರ ಕೀಲಿ ಸೋರಿಕೆ ಮಾಡಿದ ಆರೋಪಗಳಿವೆ. ಈ ಮಧ್ಯೆ, ಕೆಪಿಎಸ್ಸಿ ನೇಮಕಾತಿ ಹಗರಣಗಳ ತನಿಖೆಗಾಗಿ ಪುನರ್‌ರಚಿಸಲಾದ ವಿಶೇಷ ತನಿಖಾ ತಂಡದ (ಎಸ್‌ಐಟಿ) ನೇತೃತ್ವವನ್ನು ಎಡಿಜಿಪಿ ಆರ್. ಹಿತೇಂದ್ರ ಅವರಿಗೆ ವಹಿಸುವಂತೆ ಕರ್ನಾಟಕ ಹೈಕೋರ್ಟ್ ಸೋಮವಾರ ಆದೇಶಿಸಿದೆ. ಅಲ್ಲದೆ, ಇಡಿ ಮತ್ತು ಎಸ್‌ಐಟಿ ನಡೆಸುವ ತನಿಖೆಗಳು ಪರಸ್ಪರ ಪೂರಕವಾಗಿರಬೇಕು ಎಂದು ನಿರ್ದೇಶಿಸಿದೆ.

ನೀರಿಗಾಗಿ ಹೋರಾಟ, ಚಿಮ್ಮನಚೋಡ ಬಂದ್

ಮುಲ್ಲಾಮಾರಿ ನೀರು ಬಿಡುಗಡೆಗೆ ಆಗ್ರಹಿಸಿ ಬೀದಿಗಿಳಿದ ಜನ

ಕಲಬುರಗಿ, ನ.4: ಮಳೆಯಿಲ್ಲದೇ ಕಂಗೆಟ್ಟಿರುವ ಪರಿಸ್ಥಿತಿಯಲ್ಲಿ ಜನರಿಗೆ ನೆರವಾಗುವ ದೃಷ್ಟಿಯಿಂದ ಕೆಳದಂಡೆ ಮುಲ್ಲಾಮಾರಿ ಯೋಜನೆಯ ನಾಗರಾಳ ಜಲಾಶಯದಿಂದ ನದಿ ಹಾಗೂ ಮುಖ್ಯ ಕಾಲುವೆಗೆ ನೀರು ಬಿಡಬೇಕು. ಸ್ಥಗಿತಗೊಳಿಸಲಾದ ವಿದ್ಯುತ್ ಸಂಪರ್ಕ ಪುನರ್ ಸ್ಥಾಪಿಸಬೇಕು ಎಂದು ಒತ್ತಾಯಿಸಿ ಚಿಮ್ಮನಚೋಡ ಹಾಗೂ ಸುತ್ತಲಿನ ಗ್ರಾಮಗಳ ರೈತರು ಕರೆ ನೀಡಿರುವ ಬಂದ್‌ಗೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಚಿಮ್ಮನ ಚೋಡ ಗ್ರಾಮದಲ್ಲಿ ಗ್ರಾಮಸ್ಥರು ನೀಡಿರುವ ಕರೆಯ ಮೇರೆಗೆ ಬೆಳಿಗ್ಗೆಯಿಂದಲೇ ಅಂಗಡಿಗಳು ಮುಚ್ಚಿವೆ. ರಾಜ್ಯ ಹೆದ್ದಾರಿ–75ರಲ್ಲಿ ವಾಹನಗಳ ಸಂಚಾರ ತಡೆದು ರಸ್ತೆಯಲ್ಲಿ ಟೆಂಟ್ ಹಾಕಿ ರೈತರು ಬಹಿರಂಗ ಸಭೆ ನಡೆಸಿದರು.



ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಚಿಮ್ಮನಚೋಡ ಗ್ರಾಮಕ್ಕೆ ಮುಲ್ಲಾಮಾರಿ ಜಲಾಶಯದಿಂದ ನೀರು ಬಿಡುವಮತೆ ಒತ್ತಾಯಿಸಿ ಕರೆ ನೀಡಿದ ಬಂದ್ ಹಗೂ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಯಿತು.

ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಂಗಾರೆಡ್ಡಿ ನರಸನ್, ರಾಮರೆಡ್ಡಿ ಪಾಟೀಲ, ಶರಣರೆಡ್ಡಿ ವಿರೆಡ್ಡಿ, ಜಗದೀಶ ತೆಲ್ಕಾಂಪಳ್ಳಿ, ನರಸಪ್ಪ ಕೊಡದೂರು, ಮಲ್ಲು ಕೂಡಾಂಬಲ್, ಶರಣರೆಡ್ಡಿ ಮೊಗಲಪ್ಪನೋರ, ಜಗನ್ನಾಥರೆಡ್ಡಿ ರಂಜೋಳ, ಮಹಮದ್ ಹುಸೇನ್ ನಾಯಕೋಡಿ, ಜಗನ್ನಾಥ ಹೊಸಮನಿ, ಗೌತಮ ಮೇತ್ರಿ, ಸಂಗಪ್ಪ ಭಕ್ತಂಪಳ್ಳಿ, ಬಸವರಾಜ ಬುರುಕಪಳ್ಳಿ, ಜಾವೀದ್ ಗಣಾಪುರ, ಬೀರಪ್ಪ ಪೂಜಾರಿ, ಶಿವಕುಮಾರ ಹಿರೇಮಠ, ನಾಗಪ್ಪ ಯಂಪಳ್ಳಿ, ಜಾವೀದ್ ಪಟೇಲ್, ರಾಜಕುಮಾರ ಕೋಳ್ಳೂರು, ಚಂದ್ರಯ್ಯ ಗುತ್ತೇದಾರ, ವೀರಭದ್ರಪ್ಪಮಲಕೂಡ, ಸುಭಾಷ ಕೊಂಡಾ, ಮೊದಲಾದವರು ಇದ್ದರು.

ಪ್ರತಿಭಟನೆಯಲ್ಲಿ ಚಿಮ್ಮನಚೋಡ, ನಾಗರಾಳ, ಗಾರಂಪಳ್ಳಿ ತಾಜಲಾಪುರ, ಕನಕಪುರ, ಖೋದವಂದಪುರ, ದೋಟಿಕೊಳ, ನರನಾಳ ಮೊದಲಾದ ಗ್ರಾಮಗಳ ರೈತರು ಪಾಲ್ಗೊಂಡಿದ್ದಾರೆ. ಚಿಮ್ಮನಚೋಡದಲ್ಲಿಂದು ಶನಿವಾರ ವಾರದ ಸಂತೆಯ ದಿನ. ಬಂದ್ ಕರೆ ನೀಡಿದ್ದರಿಂದ ಜನರು ಅಂಗಡಿಗಳ ಮುಂದೆ ಅಸಹಾಯಕರಾಗಿ ಕುಳಿತ ದೃಶ್ಯ ಕಂಡು ಬಂತು.



ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, 'ಆಲ್ ಇಂಡಿಯಾ ಗ್ರಾಮೀಣ ಡಾಕ್ ಸೇವಕ್ ಯೂನಿಯನ್'ನ ಕರ್ನಾಟಕ ವೃತ್ತದ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

ರಾಜ್ಯದ ರೈತರ ಹಿತ ಕಾಪಾಡುವುದೇ ನಮ್ಮ ಸರ್ಕಾರದ ಮುಖ್ಯಗುರಿ: ನಾಗೇಂದ್ರ

ತುಂಗಭದ್ರಾ ಜಲಾಶಯ ಭಾಗದ ಕಾಲುವೆಗಳಿಗೆ ನವೆಂಬರ್ 30 ರವರಿಗೆ ನೀರು ಹರಿಸಲು ಮುಖ್ಯಮಂತ್ರಿಗೆ ಮನವಿ



ಬೆಂಗಳೂರು, ನ.04: ತುಂಗಭದ್ರಾ ಜಲಾಶಯ ಅವಲಂಬಿತ ಕಾಲುವೆಗಳ ಭಾಗದ ರೈತರು ಬೆಳೆದ ಬೆಳೆಗಳಿಗೆ ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ನವೆಂಬರ್ 30 ರವರಿಗೆ ಸಮರ್ಪಕ ನೀರು ಹರಿಸಲು ಕ್ರಮ ಕೈಗೊಳ್ಳುವಂತೆ ಬಳ್ಳಾರಿ, ರಾಯಚೂರು, ಕೊಪ್ಪಳ ಜಿಲ್ಲೆಯ ಸಂಸದರು, ಸಚಿವರು, ಶಾಸಕರು,ವಿಧಾನಪರಿಷತ್ ಸದಸ್ಯರ ನೇತೃತ್ವದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದೇವೆ ಎಂದು ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಬಿ. ನಾಗೇಂದ್ರ ರವರು ತಿಳಿಸಿದ್ದಾರೆ.

ಅ.19ರಂದು ನಡೆದ ತುಂಗಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 20ರ ವರೆಗೆ ನೀರು ಹರಿಸಲು ತೀರ್ಮಾನಿಸಲಾಗಿತ್ತು ಆದರೇ ಮಳೆಯ ಅಭಾವದಿಂದ ಕಟಾವು ಹಂತದಲ್ಲಿರುವ ರೈತರು ಬೆಳೆದ ಬೆಳೆಗಳಿಗೆ ಇನ್ನು ಹೆಚ್ಚುವರಿಯಾಗಿ 10 ದಿನಗಳ ಕಾಲ ನೀರು ಪೂರೈಕೆ ಮಾಡಿದರೆ ಭತ್ತ, ಜೋಳ, ಮೆಣಸಿನಕಾಯಿ ಬೆಳೆ ಸಂಪೂರ್ಣವಾಗಿ ಬೆಳೆ ಬಂದು ರೈತರಿಗೆ ಆರ್ಥಿಕವಾಗಿ ಪ್ರಗತಿ ಯಾಗುತ್ತದೆ ಮತ್ತು ಬೇಸಿಗೆ ತಿಂಗಳುಗಳಿಗೆ ನೀರು ಪೂರೈಕೆ ಮಾಡಲು ಕೆರೆಗಳಿಗೆ ನೀರು ಶೇಖರಣೆ ಮಾಡಲು ಸಹಕಾರಿಯಾಗುತ್ತದೆ ತಿಳಿಸಿದರು.

ಜಿಲ್ಲಾದ್ಯಂತ ಡ್ರಗ್ಸ್ ಅಪರಾಧ ವಿರುದ್ಧ ಕಾರ್ಯಾಚರಣೆ; 4 ದಿನಗಳಲ್ಲಿ 2016 ಪ್ರಕರಣ ದಾಖಲು

ರಾಯಚೂರು, ನ. 4: ಜಿಲ್ಲೆಯಲ್ಲಿ ಗಾಂಜಾ ಹಾಗೂ ಮಾದಕ ವಸ್ತುಗಳ ಹಾವಳಿ, ಅಕ್ರಮ ಮದ್ಯ ಮಾರಾಟ, ಮೋಟರ್ ವಾಹನ ಕಾಯ್ದೆ, ಸಾರ್ವಜನಿಕರ ಶಾಂತಿ ಭಂಗ ಸೇರಿದಂತೆ ವಿವಿಧ ಅಪರಾಧ ಚಟುವಟಿಕೆಗಳ ವಿರುದ್ಧ ಜಿಲ್ಲಾ ಪೊಲೀಸ್ ಇಲಾಖೆ ವ್ಯಾಪಕ ಕಾರ್ಯಾಚರಣೆ ನಡೆಸಿದೆ. ಅ.27ರಿಂದ 30ರ ವರೆಗೆ ರಾಯಚೂರು ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ 2016 ಪ್ರಕರಣಗಳು ದಾಖಲಾಗಿವೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಶಾಂತವೀರ ನೇತೃತ್ವದಲ್ಲಿ ಆರು ತಂಡಗಳು ಈ ಕಾರ್ಯಾಚರಣೆ ನಡೆಸಿವೆ.

ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ, ಗಾಂಜಾ ಹಾಗೂ ಮಾದಕವಸ್ತುಗಳ ಸೇವನೆಯಿಂದ ಅಪರಾಧ ಚಟುವಟಿಕೆಗಳು ಹೆಚ್ಚಾಗುತ್ತಿದ್ದು, ಅದರ ನಿಯಂತ್ರಣಕ್ಕಾಗಿ ಖಾಕಿ ಪಡೆ ಚುರುಕಾಗಿ ಕೆಲಸ ಮಾಡುತ್ತಿದೆ. ಮಾದಕ ವಸ್ತು ಸೇವನೆ ಅನುಮಾನದ ಮೇಲೆ 50 ಜನರ ತಪಾಸಣೆ ಮಾಡಿದ್ದು, ಇಬ್ಬರು ಮಾದಕ ವಸ್ತುಗಳು



ಸೇವನೆ ಮಾಡಿದ್ದು ಸಾಬೀತಾಗಿ ಎರಡು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಅಕ್ರಮ ಮದ್ಯ ಸಿಎಚ್ ಪೌಡರ್ ಮಿಶ್ರಿತ ಸೇಂದಿ ಮಾರಾಟ ಮಾಡಿದ ಮಾಹಿತಿ ಮೇರೆಗೆ ಅಬಕಾರಿ ಕಾಯ್ದೆಯಡಿ 12 ಪ್ರಕರಣ ದಾಖಲು, 102 ಲೀಟರ್ ಅಕ್ರಮ ಮದ್ಯ ವಶಪಡಿಸಿಕೊಂಡಿದ್ದಾರೆ.

ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿದವರ ವಿರುದ್ಧ 42 ಪ್ರಕರಣ ದಾಖಲಿಸಲಾಗಿದೆ. ಮೋಟರ್ ವಾಹನ ಕಾಯ್ದೆಯಡಿ 895 ಪ್ರಕರಣ, ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿದವರ ಮೇಲೆ 42 ಪ್ರಕರಣ, ಸಾರ್ವಜನಿಕ ಸ್ಥಳಗಳಲ್ಲಿ ಮದ್ಯಪಾನ, ಧೂಮಪಾನ ಮಾಡಿದ ಆರೋಪದ ಕೊಟ್ಪಾ ಕಾಯ್ದೆಯಡಿ 194 ಪ್ರಕರಣ ದಾಖಲಿಸಿದ್ದಾರೆ, ಸಾರ್ವಜನಿಕ ಸ್ಥಳಗಳಲ್ಲಿ ಅಸಭ್ಯ ವರ್ತನೆ, ಸಾರ್ವಜನಿಕರಿಗೆ ತೊಂದರೆ ನೀಡಿದ ಆರೋಪದ ಮೇಲೆ ಕೆ.ಪಿ ಕಾಯ್ದೆಯ ಕಲಂ 92 ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶುಗಿರಿ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಎಎನ್ಟಿಎಫ್ ತಂಡ ಉದ್ಘಾಟನೆ: ಮಾದಕ ವಸ್ತುಗಳ ನಿಯಂತ್ರಣಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಶಾಂತವೀರರನ್ನು ಒಳಗೊಂಡ ಮಾದಕವಸ್ತುಗಳ ವಿರುದ್ಧ ವಿಶೇಷ ಮಾಹಿತಿಯುಳ್ಳ ಎಂಟು ಸಿಬ್ಬಂದಿಯನ್ನು ಒಳಗೊಂಡ ವಿಶೇಷ ತಂಡ ರಚಿಸಲಾಗಿದೆ. ಶನಿವಾರ ಏಕ್ತಾ ದಿವಸ್ ಅಂಗವಾಗಿ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಪೊಲೀಸ್ ಪರೇಡ್ ನಡೆಸಿ ನಂತರ ತಂಡಕ್ಕೆ ಚಾಲನೆ ನೀಡಲಾಯಿತು.

ಈ ತಂಡ ವಿಶೇಷ ಸಮವಸ್ತ್ರ ಮತ್ತು ವಾಹನದೊಂದಿಗೆ ಶಾಲಾ ಕಾಲೇಜುಗಳಿಗೆ ಭೇಟಿ ಮಾದಕವಸ್ತುಗಳ ಕುರಿತು ಅರಿವು ಮೂಡಿಸುತ್ತಿದ್ದಾರೆ. ಅಲ್ಲದೆ ಸಂಜೆ 5ರಿಂದ ರಾತ್ರಿ 9 ಗಂಟೆವರೆಗೆ ಆಯಂಟಿ ನಾರ್ಕೊಟಿಕ್ ಟಾಸ್ಕ್ ಫೋರ್ಸ್ ತಂಡ ಶನಿವಾರ ಉದ್ಘಾಟನೆ ಮಾಡಲಾಗಿದೆ. ಆಯಾ ಠಾಣೆಯ ಪಿಎಸ್‌ಐಗಳು, ಸಿಪಿಐಗಳು ತಂಡಗಳ ಮೇಲ್ವಿಚಾರಣೆ ಮಾಡಲಿದ್ದಾರೆ ಎಂದು ಎಸ್ಪಿ ಅವರು ಮಾಹಿತಿ ನೀಡಿದರು.

ಬಳ್ಳಾರಿ: ವಿವಿಧ ಆರೋಗ್ಯ ಕೇಂದ್ರಗಳಿಗೆ ಡಿಎಚ್‌ಓ, ಅಧಿಕಾರಿಗಳು ಭೇಟಿ: ಪರಿಶೀಲನೆ

ಬಳ್ಳಾರಿ,ನ.04: ಜಿಲ್ಲೆಯ ವಿವಿಧ ಪ್ರಾಥಮಿಕ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ ವಿವಿಧ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳ ತಂಡ ಇತ್ತೀಚೆಗೆ ಭೇಟಿನೀಡಿ ಪರಿಶೀಲನೆ ನಡೆಸಿತು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಅಲಕಾನಂದ ಮಳಗಿ ಬಳ್ಳಾರಿ ನಗರ ಪ್ರದೇಶದ ಮಿಲ್ಲರ್ ಪೇಟೆ ಮತ್ತು ಕೌಲ್ ಬಜಾರ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿದರು. ಈ ವೇಳೆ ವಾರ್ಡ್‌ಗಳ ಸ್ವಚ್ಛತೆ, ಔಷಧ ದಾಸ್ತಾನು, ನೀರಿನ ಸೌಕರ್ಯ ಹಾಗೂ ಐಇಸಿ ಪರಿಕರಗಳಾದ ಭಿತ್ತಿಪತ್ರ, ಬ್ಯಾನರ್ ಮತ್ತು ಟಿವಿಗಳ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಪ್ರದರ್ಶನಗೊಂಡಿರುವ ಬಗ್ಗೆ ವೀಕ್ಷಿಸಿದರು.

ಸಾರ್ವಜನಿಕರಿಗೆ ಇಲಾಖೆಯ ಎಲ್ಲಾ ಆರೋಗ್ಯ ಸೇವೆಗಳನ್ನು ಸಮರ್ಪಕವಾಗಿ ಮತ್ತು ಉತ್ತಮ ರೀತಿಯಲ್ಲಿ ತಲುಪಿಸುವಂತೆ ಸಂಬಂಧಪಟ್ಟ ವೈದ್ಯಾಧಿಕಾರಿಗಳಿಗೆ ಸೂಕ್ತ ಸಲಹೆ–ಸೂಚನೆಗಳನ್ನು ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ಇತರ ತಾಲೂಕುಗಳ ಆರೋಗ್ಯ ಕೇಂದ್ರಗಳಿಗೂ ಹಿರಿಯ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಸಿರುಗುಪ್ಪ ತಾಲೂಕು: ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಹಾಗೂ ಸಿರುಗುಪ್ಪ ತಾಲೂಕು ಆರೋಗ್ಯ ಅಧಿಕಾರಿ ಡಾ. ಬಸವರಾಜ್ ದಮ್ಮೂರು ಅವರು ಜಂಟಿಯಾಗಿ ಕರೂರು, ತಾಳೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ತೆಕ್ಕಲಕೋಟೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದರು.

ಚೇಳ್ಳಗುರ್ಕಿ ಕೇಂದ್ರ: ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಮರಿಯಂಬಿ ವಿ.ಕೆ. ಮತ್ತು ತಂಡದವರು ಬಳ್ಳಾರಿ ತಾಲೂಕಿನ ಚೆಳ್ಳಗುರ್ಕಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ವಾರ್ಡ್‌ಗಳನ್ನು ಪರಿಶೀಲಿಸಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಲ್ಲಿ ಪ್ರಗತಿ ಸಾಧಿಸಲು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಸಂಡೂರು ತಾಲೂಕು: ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಇಂದ್ರಾಣಿ ವಿ. ಹಾಗೂ ಸಂಡೂರು ತಾಲೂಕು ಆರೋಗ್ಯ ಅಧಿಕಾರಿ ಡಾ. ಹರೀಶ್ ಅವರು ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಸಾರ್ವಜನಿಕ ಸೇವೆಗಳು, ಆಸ್ಪತ್ರೆಯ ಸ್ವಚ್ಛತೆ ಹಾಗೂ ಐಇಸಿ ಪ್ರದರ್ಶನವನ್ನು ಪರಿಶೀಲಿಸಿದರು.

ಶಿಡಿಗಿನಮೊಳ: ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ವೀರೇಂದ್ರ ಕುಮಾರ್ ಮತ್ತು ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ವೀರಕುಮಾರ್ ರೆಡ್ಡಿ ಅವರು ಜಂಟಿಯಾಗಿ ಶಿಡಿಗಿನಮೊಳ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಸಿಬ್ಬಂದಿಯ ಸಭೆ ನಡೆಸಿ ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ತಿಳಿಸಿದರು.

ಬಸವನಬಾಗೇವಾಡಿ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ

ವಿಜಯಪುರ,ನ.4– ಬಸವನ ಬಾಗೇವಾಡಿ ಪಟ್ಟಣದ ಇವಣಗಿ ರಸ್ತೆಯಲ್ಲಿರುವ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಬುಧವಾರ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಭೇಟಿ ನೀಡಿ, ಘಟಕದ ಕಾರ್ಯನಿರ್ವಹಣೆ ಹಾಗೂ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿದರು.

ಘಟಕದ ಆವರಣವನ್ನು ಸ್ವಚ್ಛವಾಗಿಟ್ಟುಕೊಂಡು ವಿವಿಧ ಗಿಡಮರಗಳನ್ನು ಬೆಳೆಸಿರುವುದಕ್ಕೆ ಜಿಲ್ಲಾಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಘಟಕದ ಲಭ್ಯವಿರುವ ಜಾಗದಲ್ಲಿ ಹಣ್ಣಿನ ಹಾಗೂ ಹೂವಿನ ಗಿಡಗಳನ್ನು ಬೆಳೆಸಿ, ಉದ್ಯಾನವನದ ಮಾದರಿಯಲ್ಲಿ



ಈ ಸಂದರ್ಭದಲ್ಲಿ ಘಟಕದಲ್ಲಿ ಉತ್ಪಾದಿಸಲಾಗುತ್ತಿರುವ ಎರೆಹುಳು ಗೊಬ್ಬರ ತಯಾರಿಕಾ ಪ್ರಕ್ರಿಯೆಯನ್ನು ವೀಕ್ಷಿಸಿದ ಜಿಲ್ಲಾಧಿಕಾರಿಗಳು, ರೈತರಿಗೆ ಕೈಗೆಟುಕುವ ದರದಲ್ಲಿ ಗುಣಮಟ್ಟದ ಗೊಬ್ಬರ ಲಭ್ಯವಾಗುವಂತೆ ಉತ್ಪಾದನೆ ಮತ್ತು ಮಾರಾಟಕ್ಕೆ ಕ್ರಮ ಕೈಗೊಳ್ಳಬೇಕು. ಗೊಬ್ಬರವನ್ನು ಕೃಷಿ ಚಟುವಟಿಕೆಗಳಿಗೆ ಪರಿಣಾಮಕಾರಿಯಾಗಿ ಬಳಸುವ ಕುರಿತು ರೈತರಿಗೆ ಮಾಹಿತಿ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಘಟಕದಲ್ಲಿ ಸಂಗ್ರಹವಾಗುವ ಒಣ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಪ್ರತ್ಯೇಕಿಸಿ, ವ್ಯವಸ್ಥಿತವಾಗಿ ವಿಂಗಡಿಸ 'ಬೇಕು. ಮರುಬಳಕೆಗೆ ಯೋಗ್ಯವಾದ ವಸ್ತುಗಳನ್ನು ವಿಲೇವಾರಿ ಮಾಡಲು ಹೆಚ್ಚಿನ ಕಂಪನಿಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಹಸಿರು ಪರಿಸರ ನಿರ್ಮಿಸಿರುವ ಕಾರ್ಯವನ್ನು ಶ್ಲಾಘಿಸಿದರು. ಇದೇ ಮಾದರಿಯಲ್ಲಿ ಘಟಕದ ಉಳಿದ ಪ್ರದೇಶವನ್ನೂ ಅಭಿವೃದ್ಧಿಪಡಿಸುವಂತೆ ಸಲಹೆ ನೀಡಿದರು.

ಮನೆಮನೆಗೆ ತೆರಳಿ ಕಸ ಸಂಗ್ರಹಿಸುವ ಸಂದರ್ಭದಲ್ಲಿ ಹಸಿ ಮತ್ತು ಒಣ ತ್ಯಾಜ್ಯವನ್ನು ಮೂಲ ದಲ್ಲಿಯೇ ಪ್ರತ್ಯೇಕಿಸುವುದನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸ ಬೇಕು.

ಪ್ರತಿಯೊಂದು ಮನೆಗೂ ಪ್ರತಿದಿನ ಕಸ ಸಂಗ್ರಹಣಾ ವಾಹನ ತೆರಳಬೇಕು. ಪಟ್ಟಣದ ರಸ್ತೆ ಬದಿಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಸ ಸಂಗ್ರಹವಾಗದಂತೆ ಮತ್ತು ಕಸದ ಒಂದೆಡೆ (ಬ್ಲ್ಯಾಕ್ ಸ್ಪಾಟ್) ಸಂಗ್ರಹ ವಾಗದಂತೆ ನಿರಂತರ ನಿಗಾ ವಹಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸುರಕ್ಷಿತ ಬಾಲ್ಯ ರಕ್ಷಣೆಗೆ, ಶಾಲೆಗಳಲ್ಲಿ ಕಾನೂನು ಅರಿವು ಅಭಿಯಾನ ಅಗತ್ಯ: ನ್ಯಾ. ಹಣಮಂತರಾವ ಕುಲಕರ್ಣಿ



ಬಸವಕಲ್ಯಾಣ ನಗರದ ಜೀಜಾಮಾತಾ ಪ್ರೌಢ ಶಾಲೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲ್ಲೂಕು ಸಮಿತಿ ಹಾಗೂ ವಕೀಲರ ಸಂಘದಿಂದ ಆಯೋಜಿಸಿದ ಸುರಕ್ಷಿತ ಬಾಲ್ಯ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ನ್ಯಾಯಾಧೀಶ ಹಣಮಂತರಾವ್ ಕುಲಕರ್ಣಿ ಅವರು ಉದ್ಘಾಟಿಸಿ ಮಾತನಡಿದರು.

ಬಸವಕಲ್ಯಾಣ, ನ. 4: ಮಕ್ಕಳ ಸುರಕ್ಷಿತ ಬಾಲ್ಯ ರಕ್ಷಣೆಗಾಗಿ ಮಕ್ಕಳಿದ್ದಾಗಲೇ ಅರಿವು ಮೂಡಿಸುವ ಹಿನ್ನೆಲೆಯಲ್ಲಿ ಕಾನೂನಿನ ಅರಿವು ನೀಡುವುದಕ್ಕಾಗಿ ಎಲ್ಲ ಶಾಲಾ ಕಾಲೇಜುಗಳಲ್ಲಿ ಅಭಿಯಾನ ನಡೆಸಲಾಗುತ್ತಿದೆ ಎಂದು ನ್ಯಾಯಾಧೀಶ ಹಣಮಂತರಾವ ಕುಲಕರ್ಣಿ ಹೇಳಿದರು.

ಜೀಜಾಮಾತಾ ಪ್ರೌಢಶಾಲೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲ್ಲೂಕು ಕಾನೂನು ಸೇವೆಗಳ ಸಮಿತಿ ಹಾಗೂ ವಕೀಲರ ಸಂಘದಿಂದ ಆಯೋಜಿಸಿದ್ದ ಸುರಕ್ಷಿತ ಬಾಲ್ಯ–ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹೋಟೆಲ್, ಗಣಿಗಾರಿಕೆ ಇತರೆ ಕಾರ್ಖಾನೆಗಳಲ್ಲಿ ಮಕ್ಕಳನ್ನು ತೊಡಗಿಸ 'ಕೂಡದು. ಬಾಲ್ಯವನ್ನು ಸರಿಯಾಗಿ ಜೀವಿಸಬೇಕು. ವರದಕ್ಷಿಣೆ, ಬಾಲ್ಯ ವಿವಾಹ ನಿಷೇಧ ಎಂಬ ಮಕ್ಕಳ ಕಾನೂನುಗಳ ಬಗ್ಗೆ ಎಲ್ಲರಿಗೂ ಮಾಹಿತಿ ಇರಬೇಕು. ಶಿಕ್ಷಣದಿಂದ ಯಾರೂ ವಂಚಿತರಾಗ ಬಾರದು ಎಂಬ ಕಾರಣಕ್ಕಾಗಿ ಪ್ರಾಥಮಿಕ ಶಿಕ್ಷಣ ಕಡ್ಡಾಯ ಮತ್ತು ಉಚಿತವಾಗಿ ದೊರಕಲು ಕಾನೂನು ರೂಪಿಸಲಾಗಿದೆ ಎಂದು ಹೇಳಿದರು.

ಸಿವಿಲ್ ನ್ಯಾಯಾಧೀಶೆ ಶ್ರೇಯಾ ಉತ್ತೂರೆ ಮಾತನಾಡಿ, ವಿದ್ಯಾರ್ಥಿನಿಯರು ತಮ್ಮ ಮೇಲೆ ನಡೆಯುವ ದೌರ್ಜನ್ಯ, ದಬ್ಬಾಳಿಕೆ ಬಗ್ಗೆ ಪಾಲಕರು, ಪೊಲೀಸರಿಗೆ ಮಾಹಿತಿ ನೀಡಬೇಕು. ಪೋಕ್ಸೊ ಪ್ರಕರಣ ಮುಚ್ಚಿಡಬಾರದು. ತಮ್ಮ ರಕ್ಷಣೆ ತಾವು ಮಾಡುವುದಲ್ಲದೆ ಇತರರಿಗೂ ಸಹಾಯ ಸಹಕಾರ ನೀಡಬೇಕು. ಛತ್ರಪತಿ ಶಿವಾಜಿ ಮಹಾರಾಜ ಮತ್ತು ಅವರ ತಾಯಿ ಜೀಜಾಮಾತಾ ಧೈರ್ಯದ ಪ್ರತೀಕವಾಗಿದ್ದಾರೆ. ಅಂಜದೆ ಅಳುಕದೆ ಧೈರ್ಯ ತೋರಬೇಕು ಎಂದು ಸಲಹೆ ನೀಡಿದರು.

ವಕೀಲರ ಸಂಘದ ಅಧ್ಯಕ್ಷ ಭೀಮಾಶಂಕರ ಕುರಕೋಟೆ, ಸಂಪನ್ಮೂಲ ವ್ಯಕ್ತಿಗಳಾದ ರೇಣುಕಾ ಮಠಪತಿ, ರವೀಂದ್ರ ಖಂಡಾಳೆ, ಬಾಲಾಜಿ ಅದೆಪ್ಪ, ದ್ವಾರಕಾಬಾಯಿ ಪಾಟೀಲ, ಅನಿತಾ ಕೋರೆ, ಸುರೇಖಾ ಜ್ಯೋತೆಪ್ಪ ಮಾತನಾಡಿದರು.

ನಗರ ಠಾಣೆ ಸಿಪಿಐ ಅಲಿಸಾಬ್, ಮೇಲ್ವಿಚಾರಕಿ ದೈವತಾ, ಜಗದೇವಿ ಚೋಂಡೆ, ಅರವಿಂದ ಸಿಂಗೋಡೆ, ಶಿವರಾಜ ಕನಕಟ್ಟೆ, ಗಿರಿಧರ ಧಾನೂರೆ, ನಾಸೀರ್ ಪಟೇಲ್, ದಯಾನಂದ ಸೂರ್ಯವಂಶಿ, ಪ್ರತಾಪ ಸೂರ್ಯವಂಶಿ, ಪ್ರಕಾಶ ದಾಡಗೆ, ಬಾಲಾಜಿ ಬಿರಾದಾರ, ಸೋಮನಾಥ ಬಿರಾದಾರ, ಗೋವಿಂದರಾವ್ ಸಾತಭಾಯಿ ಉಪಸ್ಥಿತರಿದ್ದರು. ನ್ಯಾಯಾಧೀಶರಿಗೆ ಮತ್ತು ಸಂಪನ್ಮೂಲ ವ್ಯಕ್ತಿಗಳಿಗೆ ವಿದ್ಯಾರ್ಥಿಗಳು ಪ್ರಶ್ನೆಗಳನ್ನು ಕೇಳಿ ಕಾನೂನಿನ ಹೆಚ್ಚಿನ ಮಾಹಿತಿ ಪಡೆದುಕೊಂಡರು.

ಛಲವಾದಿ ನಾರಾಯಣಸ್ವಾಮಿ ವಿವಾದಾತ್ಮಕ ಹೇಳಿಕೆ ಮುಂಡರಗಿ ನಾಗರಾಜ್ ಖಂಡನೆ

ಬಳ್ಳಾರಿ, ನ 04: ಕಾಂಗ್ರೆಸ್ ಪಕ್ಷದ ನಾಯಕರ ವಿರುದ್ಧ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ನೀಡಿರುವ ವಿವಾದಾತ್ಮಕ ಹೇಳಿಕೆಯನ್ನು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಮುಂಡರಗಿನಾಗರಾಜ್ ತೀವ್ರವಾಗಿ ಖಂಡಿಸಿದ್ದಾರೆ. ಕೋಲಾರದಲ್ಲಿ ಬಿಜೆಪಿ ವತಿಯಿಂದ ಆಯೋಜಿಸಿದ್ದ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಶೀರ್ಷಿಕೆಯಡಿ ನಡೆದ ಪಾದಯಾತ್ರೆಯಲ್ಲಿ ಛಲವಾದಿ ನಾರಾಯಣಸ್ವಾಮಿ, ಕಾಂಗ್ರೆಸ್ ಪಕ್ಷವು ದೇಶಾದ್ಯಂತ ಅರಾಜಕತೆ ಸೃಷ್ಟಿಸಲು ಹೊರಟಿದೆ. ಕಾಂಗ್ರೆಸ್ ಅರಾಜಕತೆ ಸೃಷ್ಟಿಸಿದರೆ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರು ಕಾಂಗ್ರೆಸ್ ನಾಯಕರನ್ನು ತುಂಡು ತುಂಡಾಗಿ ಕತ್ತರಿಸಿ ಅರಬ್ಬಿ ಸಮುದ್ರಕ್ಕೆ ಎಸೆಯುತ್ತಾರೆ ಎಂದು ಎಚ್ಚರಿಕೆ ನೀಡಿರುವುದು ಅತ್ಯಂತ ಖಂಡನೀಯ ಎಂದು ಮುಂಡರಗಿ ನಾಗರಾಜ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜವಾಬ್ದಾರಿಯುತ

ಸ್ಥಾನದಲ್ಲಿರುವ ವ್ಯಕ್ತಿಗಳು ಸಂವಿಧಾನದ ಆಶಯ, ಕಾನೂನಿನ ನಿಯಮ ಹಾಗೂ ರಾಜಕೀಯ ಸಭ್ಯತೆಯನ್ನು ಪಾಲಿಸಬೇಕು. ಆದರೆ ಛಲವಾದಿ ನಾರಾಯಣಸ್ವಾಮಿ ಅವರು ಈ ರೀತಿಯ ಪ್ರಚೋದನಕಾರಿ ಹೇಳಿಕೆ ನೀಡುವ ಮೂಲಕ ತಮ್ಮ ಸಂಯಮ ಕಳೆದುಕೊಂಡಿರುವುದು ವಿಷಾದನೀಯ. ಇಂತಹ ಹೇಳಿಕೆಗಳು ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆ ತರುವ ಸಾಧ್ಯತೆಯಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.



ಕಾಂಗ್ರೆಸ್ ಪಕ್ಷದಲ್ಲಿಯೇ ಸುದೀರ್ಘ ಕಾಲ ರಾಜಕೀಯ ಅನುಭವ ಹೊಂದಿದ್ದ ಛಲವಾದಿ ನಾರಾಯಣಸ್ವಾಮಿ ಅವರು ರಾಜಕೀಯ ಪಟ್ಟುಗಳನ್ನು ಕಲಿತಿದ್ದಾರೆ.

ಇದೀಗ ರಾಜಕೀಯ ಕ್ಷೇತ್ರಕ್ಕೆ ಬರುತ್ತಿರುವ ಯುವಜನತೆಗೆ ಇಂತಹ ಹೇಳಿಕೆಗಳ ಮೂಲಕ ಯಾವ ಸಂದೇಶ ನೀಡಲು ಹೊರಟಿದ್ದಾರೆ ಎಂದು ಪ್ರಶ್ನಿಸಿರುವ ಮುಂಡರಗಿನಾಗರಾಜ್, ಕಾಂಗ್ರೆಸ್ ಪಕ್ಷದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡುವ ಮೂಲಕ ಬಿಜೆಪಿ ಹಿರಿಯ ನಾಯಕರ ವಲಯದಲ್ಲಿ ತಮ್ಮ ಅಸ್ತಿತ್ವ ಉಳಿಸಿಕೊಳ್ಳಲು ಹಾಗೂ ಉನ್ನತ ಸ್ಥಾನಮಾನ ಪಡೆಯಲು ಪ್ರಯತ್ನಿಸುತ್ತಿರುವುದು ಸರಿಯಲ್ಲ ಎಂದು ಟೀಕಿಸಿದ್ದಾರೆ. ರಾಜಕೀಯ ಭಿನ್ನಾಭಿಪ್ರಾಯ ಗಳಿದ್ದರೆ ಪ್ರಜಾಪ್ರಭುತ್ವದ ಚೌಕಟ್ಟಿನಲ್ಲಿ ಟೀಕೆ–ಟಿಪ್ಪಣಿಗಳನ್ನು ಮಾಡಬಹುದು. ಆದರೆ ಹಿಂಸಾಚಾರಕ್ಕೆ ಪ್ರಚೋದನೆ ನೀಡುವಂತಹ ಭಾಷೆ ಬಳಸುವುದು ಜವಾಬ್ದಾರಿಯುತ ನಾಯಕರಿಗೆ ಶೋಭೆ ತರುವುದಿಲ್ಲ. ಆದ್ದ ರಿಂದ ಛಲವಾದಿ ನಾರಾಯಣಸ್ವಾಮಿ ಅವರು ಕೂಡಲೇ ತಮ್ಮ ಹೇಳಿಕೆಯನ್ನು ಹಿಂಪಡೆದು ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು ಎಂದು ಮುಂಡರಗಿ ನಾಗರಾಜ್ ಆಗ್ರಹಿಸಿದ್ದಾರೆ.

ಮತದಾನಕ್ಕೆ ಮಾತ್ರ ಸೀಮಿತವಾಗಬೇಡಿ, ಮುಸ್ಲಿಂ ಸಮುದಾಯದಲ್ಲಿ ನಾಯಕತ್ವ ರೂಪಿಸಿ: ಓವೈಸಿ ಕರೆ

ಬೀದರ್, ನ. 4: ಶಿಕ್ಷಣ, ಭೂಮಿಯ ಒಡೆತನ ಮತ್ತು ಸರ್ಕಾರಿ ಉದ್ಯೋಗ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಮುಸ್ಲಿಂ ಸಮುದಾಯ ಅತ್ಯಂತ ಹಿಂದುಳಿದಿದೆ. ಕೇವಲ ಚುನಾವಣೆ ಸಂದರ್ಭದಲ್ಲಿ ಮತದಾನ ಮಾಡುವುದರಿಂದ ಸಮಾಜ ಅಭಿವೃದ್ಧಿಯಾಗುವದಿಲ್ಲ.

ಹಿಂದುಳಿದ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಾಧಿಸಬೇಕು ಮತ್ತು ಸಮುದಾಯದ ಸಮಸ್ಯೆಗಳಿಗೆ ಪರಿಣಾಮಕರಿ ಧ್ವನಿಯಾಗಲು ಸ್ವಂತ ನಾಯಕತ್ವ ಬೆಳೆಸಿಕೊಳ್ಳುವುದು ತುರ್ತು ಅಗತ್ಯವಿದೆ ಎಂದು ಎಐಎಂಐಎಂ ಅಧ್ಯಕ್ಷ ಹಾಗೂ ಹೈದರಾಬಾದ್ ಸಂಸದ ಅಸಾದುದ್ದೀನ್ ಓವೈಸಿ ಕರೆ ನೀಡಿದರು.

ಜಿಲ್ಲೆಯ ಬಗದಲ್ ಗ್ರಾಮದಲ್ಲಿ ನಡೆದ



ಎಐಎಂಐಎಂ ಪಕ್ಷದ ಕಾರ್ಯಕ್ರಮದಲ್ಲಿ ಮಾತನಾಡಿದ ಓವೈಸಿ, ರಾಜಕೀಯ ಪ್ರಾತಿನಿಧ್ಯ ಹೊಂದಿರುವ ಸಮುದಾಯಗಳಿಗೆ ಮಾತ್ರ ಗೌರವ ಮತ್ತು ಅಧಿಕಾರದಲ್ಲಿ ಪಾಲು ದೊರೆಯುತ್ತದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ನಾಯಕತ್ವದ ಕೊರತೆಯಿರುವ ಸಮುದಾಯಗಳನ್ನು ಚುನಾವಣೆ ಸಂದರ್ಭದಲ್ಲಿ ಮತದಾನಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ಅವರು ಆರೋಪಿಸಿದರು. ದಲಿತ ಮತ್ತು ಆದಿವಾಸಿ ಸಮುದಾಯಗಳ ನಂತರ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಮುಸ್ಲಿಂ ಸಮುದಾಯದಲ್ಲಿ ಹೆಚ್ಚಿದೆ. ಭೂಮಿಯ ಒಡೆತನ ಮತ್ತು ಸರ್ಕಾರಿ ಉದ್ಯೋಗಗಳಲ್ಲಿಯೂ ಮುಸ್ಲಿಮರ ಪ್ರಾತಿನಿಧ್ಯ ಕಡಿಮೆ ಇದೆ ಎಂದು ಅವರು ಉಲ್ಲೇಖಿಸಿದರು.

ಸಮುದಾಯದ ಅಭಿವೃದ್ಧಿಗೆ ಶಿಕ್ಷಣ, ಆರ್ಥಿಕ ಪ್ರಗತಿ ಮತ್ತು ರಾಜಕೀಯ ಪ್ರಾತಿನಿಧ್ಯ ಮುಖ್ಯವಾಗಿದ್ದು, ಈ ಕ್ಷೇತ್ರಗಳಲ್ಲಿ ಮುನ್ನಡೆಯಲು ಸಂಘಟಿತ ಪ್ರಯತ್ನ ಅಗತ್ಯ ಎಂದು ತಿಳಿಸಿದರು.

ನಮ್ಮ ಸಮುದಾಯದ ರಾಜಕೀಯ ನಾಯಕರನ್ನು ನಾವೇ ರೂಪಿಸಬೇಕು ಎಂದು ಹೇಳಿದ ಓವೈಸಿ, ಮುಸ್ಲಿಂ ಸಮುದಾಯದಲ್ಲಿ ಬಲಿಷ್ಠ ನಾಯಕತ್ವ ಬೆಳೆದರೆ ದೇಶದ ಪ್ರಜಾಪ್ರಭುತ್ವವೂ ಮತ್ತಷ್ಟು ಬಲಗೊಳ್ಳಲಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು. ಮತದಾನದ ಮೂಲಕ ಅಧಿಕಾರಕ್ಕೆ ಬರುವವರು ಸಮುದಾಯದ ಸಮಸ್ಯೆಗಳಿಗೂ ಸ್ಪಂದಿಸಬೇಕು ಎಂದು ಹೇಳಿದರು.

ಆರೆಸ್ಸೆಸ್ ವಿರುದ್ಧ ಟೀಕೆ: ಭಾರತದಲ್ಲಿ ಮುಸ್ಲಿಮರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾತನಾಡಿದ ಓವೈಸಿ, ದೇಶದ ಮೇಲೆ ಎಲ್ಲ ಸಮುದಾಯಗಳಿಗೂ ಸಮಾನ ಹಕ್ಕು ಇದೆ ಎಂದು ಪ್ರತಿಪಾದಿಸಿದರು.

ಆರೆಸ್ಸೆಸ್ ವಿರುದ್ಧ ಟೀಕೆಗಳನ್ನು ವ್ಯಕ್ತಪಡಿಸಿದ ಅವರು, ಸ್ವಾತಂತ್ರ್ಯ ಹೋರಾಟದಲ್ಲಿ ಅದರ ಪಾತ್ರದ ಕುರಿತು ಪ್ರಶ್ನೆ ಎತ್ತಿದರು.

ರಾಯಚೂರು ಸಾಹಿತ್ಯ ಸಮ್ಮೇಳನದ ಲಾಂಛನ ಬಿಡುಗಡೆ

ಸಮ್ಮೇಳನ ಯಶಸ್ಸಿಗೆ ಪ್ರತಿಯೊಬ್ಬರೂ ಶ್ರಮಿಸಿ: ಬೋಸರಾಜು ಕರೆ



ರಾಯಚೂರು, ನ. 4: ಜಿಲ್ಲೆಯ ಸಂಸ್ಕೃತಿ, ಕನ್ನಡ ಭಾಷೆ, ನಾಡು–ನುಡಿ ಹಾಗೂ ಸಾಹಿತ್ಯ ಪರಂಪರೆಯನ್ನು ಬಿಂಬಿಸುವ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನವೆಂಬರ್ 14 ಮತ್ತು 15ರಂದು ಆಯೋಜಿಸಲಾಗಿದೆ. ಸಮ್ಮೇಳನದ ಯಶಸ್ಸಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಸ್ವಾಗತ ಸಮಿತಿ ಅಧ್ಯಕ್ಷ ಎನ್.ಎಸ್.ಬೋಸರಾಜು ಮನವಿ ಮಾಡಿದರು.

ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಸಮ್ಮೇಳನದ ಲಾಂಛನ ಬಿಡುಗಡೆ ಹಾಗೂ ಮಾಧ್ಯಮಗೋಷ್ಠಿಯಲ್ಲಿ ಜಿಲ್ಲಾ ಸಾಹಿತ್ಯ ಸಮ್ಮೇಳನವು ಜಿಲ್ಲೆಯ ಸಂಸ್ಕೃತಿ, ಭಾಷೆ ಮತ್ತು ಪರಂಪರೆಯನ್ನು ಪರಿಚಯಿಸುವ ಉತ್ಸವವಾಗಿದೆ. ಸಮ್ಮೇಳನಕ್ಕೆ ಆಗಮಿಸುವ ಸಾಹಿತಿಗಳು, ಕವಿಗಳು, ಸಾಧಕರು ಹಾಗೂ ಗಣ್ಯರಿಗೆ ಯಾವುದೇ ಕೊರತೆಯಾಗದಂತೆ ಅಗತ್ಯ ವ್ಯವಸ್ಥೆ ಕಲ್ಪಿಸಲು ವಿವಿಧ ಸಮಿತಿಗಳಿಗೆ ಹೊಣೆ ವಹಿಸಲಾಗಿದೆ ಎಂದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ವೀರಹನುಮಾನ ಮಾತನಾಡಿ, ಜಿಲ್ಲೆಯ ಸಂಸ್ಕೃತಿ, ಇತಿಹಾಸ, ಕೃಷಿ ಹಾಗೂ ಸ್ಮಾರಕಗಳನ್ನು ಪ್ರತಿಬಿಂಬಿಸುವಂತೆ ಸಮ್ಮೇಳನದ ಲಾಂಛನ ರೂಪಿಸಲಾಗಿದೆ. ಕಲ್ಲಾನೆ, ಹಟ್ಟಿ ಚಿನ್ನದ ಗಣಿ, ಹತ್ತಿ, ಭತ್ತ, ಪುಸ್ತಕ, ದೇವದುರ್ಗದ ಕೋಟೆ ಬಾಗಿಲು, ಸಾಥ್ ಕಚೇರಿ ಹಾಗೂ ಜಿಲ್ಲಾಡಳಿತ ಭವನ ಸೇರಿದಂತೆ ಪ್ರಮುಖ ಸ್ಥಳಗಳ ಚಿತ್ರಣವನ್ನು ಲಾಂಛನದಲ್ಲಿ ಅಳವಡಿಸಲಾಗಿದೆ. ಈ ಲಾಂಛನವನ್ನು ನಾನು ಹಾಗೂ ಕಲಾವಿದ ಈಶ್ವರ ಸಿದ್ಧಪಡಿಸಿದ್ದೇವೆ ಎಂದು ತಿಳಿಸಿದರು.

ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಎ. ಪಾಪರೆಡ್ಡಿ ಮಾತನಾಡಿ, 1992ರಲ್ಲಿ ಜಿಲ್ಲಾ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗಿತ್ತು. ಆಗ ಸಾಹಿತಿಗಳು, ಕಲಾವಿದರು ಹಾಗೂ ಕಸಾಪ ಪದಾಧಿಕಾರಿಗಳ ಸಹಕಾರದಿಂದ ಸಮ್ಮೇಳನ ಯಶಸ್ವಿಯಾಗಿ ನಡೆದಿತ್ತು. ಈಗ ಮತ್ತೊಮ್ಮೆ ಸಮ್ಮೇಳನ ಆಯೋಜಿಸುವ ಅವಕಾಶ ದೊರೆತಿದ್ದು, ಎಲ್ಲರ ಸಹಕಾರದೊಂದಿಗೆ ಸ್ಮರಣೀಯವಾಗಿ ನಡೆಸಲಾಗುವುದು ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ರಂಗಣ್ಣ ಪಾಟೀಲ ಅಳ್ಳುಂಡಿ ಮಾತನಾಡಿ, ಅಕ್ಟೋಬರ್‌ನಲ್ಲಿ ನಿಗದಿಯಾಗಿದ್ದ ಸಮ್ಮೇಳನವನ್ನು ಚುನಾವಣೆ ಹಿನ್ನೆಲೆಯಲ್ಲಿ ನ.14 ಮತ್ತು 15ಕ್ಕೆ ಮುಂದೂಡಲಾಗಿದೆ. ಸಮ್ಮೇಳನದ ಯಶಸ್ಸಿಗೆ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಸಹಕಾರ ಅಗತ್ಯ ಎಂದರು.

ಎಣ್ಣೆಕಾಳು ಬೆಳೆಸಲು ಹೆಚ್ಚಿನ ಒತ್ತು ಕೊಡಿ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಬೀದರ್, ನ. 4: ಎಣ್ಣೆ ಕಾಳುಗಳನ್ನು ಬೆಳೆಸಲು ಹೆಚ್ಚಿನ ಒತ್ತು ನೀಡುವ ಮೂಲಕ ಎಣ್ಣೆ ಆಮದು ಹೊರೆಯನ್ನು ತಪ್ಪಿಸಲು ನಿಮ್ಮ ಕೊಡುಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ರೈತರಿಗೆ ಸಲಹೆ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ನಗರದ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಈಚೆಗೆ ರಾಷ್ಟ್ರೀಯ ಖಾದ್ಯತೈಲ ಅಭಿಯಾನ (ಎಣ್ಣೆಕಾಳು) ಯೋಜನೆಯ ಜಿಲ್ಲಾಮಟ್ಟದ ಕಾರ್ಯಾಗಾರ ಹಾಗೂ ಕೃಷಿ–ಕೃಷಿ ಸಂಬಂಧಿತ ಇಲಾಖೆಗಳ ವಸ್ತು ಪ್ರದರ್ಶನ ಮಳಿಗೆಗಳನ್ನು ಉದ್ಘಾಟಿಸಿ ಮಾತನಾಡಿದರು.

ಕುಸುಬೆ, ಶೇಂಗಾ ಮತ್ತು ಸೂರ್ಯಕಾಂತಿ ಬೆಳೆಗಳನ್ನು ಹೆಚ್ಚಿನ ಪ್ರದೇಶದಲ್ಲಿ ಬೆಳೆಯಬೇಕು. ಜಿಲ್ಲೆಯಲ್ಲಿ ಎಣ್ಣೆಕಾಳುಗಳನ್ನು ಬೆಳೆಸಿ ಅನ್ಯ ಜಿಲ್ಲೆ ಹಾಗೂ ರಾಜ್ಯಗಳಿಗೂ ಪೂರೈಸುವಂತಾಗಬೇಕು ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್. ಮಾತನಾಡಿ, ರೈತರು ಎಣ್ಣೆಕಾಳು ಕೃಷಿಗೆ ಒಲವು ತೋರಿ ಹೆಚ್ಚಿನ ಪ್ರದೇಶದಲ್ಲಿ ಬೆಳೆಸಿ ಉತ್ಪಾದಕತೆಯನ್ನು ಹೆಚ್ಚಿಸಬೇಕು. ಶುದ್ಧ ಖಾದ್ಯತೈಲ ಬಳಸಬೇಕು ಎಂದರು.

ಎಣ್ಣೆಕಾಳು ಬೆಳೆಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ಎಣ್ಣೆಕಾಳು ಕೊಯ್ಲೋತರ ಘಟಕಗಳಿಗೆ ಅವಶ್ಯವಿರುವ ಯಂತ್ರೋಪಕರಣಗಳನ್ನು ಖರೀದಿಸಲು ರೈತರಿಗೆ, ಸರ್ಕಾರೇತರ ಸಂಸ್ಥೆಗಳಿಗೆ, ರೈತ ಉತ್ಪಾದಕ ಸಂಘಗಳಿಗೆ ಹಾಗೂ ಸ್ವ–ಸಹಾಯ ಗುಂಪುಗಳಿಗೆ ಯೋಜನಾ ವೆಚ್ಚದ ಶೇ 33ರಷ್ಟು ಅಥವಾ ಗರಿಷ್ಠ 9.90 ಲಕ್ಷಗಳವರೆಗೆ ಸಹಾಯಧನ ಒದಗಿಸಲಾಗುವುದು ಎಂದರು.

ಔರಾದ್ (ಬಿ) ಸಹಾಯಕ ಕೃಷಿ ನಿರ್ದೇಶಕ ಮಾರ್ತಾಂಡ ಅವರು ಎಣ್ಣೆಕಾಳುಗಳ ಉತ್ಪಾದನೆ ಹೆಚ್ಚಳ ಮತ್ತು ರೈತರ ಆದಾಯ ಹೆಚ್ಚಿಸುವಲ್ಲಿ ತಾಂತ್ರಿಕತೆ ಪಾತ್ರ ಕುರಿತು ವಿವರಿಸಿದರು.

ಮೆಗಾ ಮಾರ್ಕೆಟ್ ಹಾಗೂ ಕುಡಿಯುವ ನೀರಿನ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಡಾ. ಆನಂದ ಕೆ. ಸೂಚನೆ



ವಿಜಯಪುರ, ನ.4:ನಿಡಗುಂದಿ ಹಾಗೂ ಬಸವನ ಬಾಗೇವಾಡಿಯಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು ಮತ್ತು ಪಟ್ಟಣದ ಕುಡಿಯುವ ನೀರಿನ ಯೋಜನೆಗಳನ್ನು ನಿಗದಿತ ಕಾಲಮಿತಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು

ಬುಧವಾರ ನಿಡಗುಂದಿ ಹಾಗೂ ಬಸವನ ಬಾಗೇವಾಡಿ ಪಟ್ಟಣಕ್ಕೆ ಭೇಟಿ ನೀಡಿದ ಅವರು, ಜಲಧಾರೆ ಹಾಗೂ ಅಮೃತ 2.0 ಯೋಜನೆಗಳಡಿ ಕೈಗೊಂಡಿರುವ ಪೈಪ್‌ಲೈನ್ ಅಳವಡಿಕೆ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು. ರೈತರ ಜಮೀನುಗಳಲ್ಲಿ ಪೈಪ್‌ಲೈನ್ ಅಳವಡಿಸುವ ಸಂದರ್ಭದಲ್ಲಿ ಕೆಲವೆಡೆ ಉಂಟಾಗುತ್ತಿರುವ ಅಡಚಣೆಗಳನ್ನು ಗಮನಿಸಿ, ರೈತರೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆಗಳನ್ನು ಬಗೆಹರಿಸುವಂತೆ ಸೂಚಿಸಿದರು. ಹೆಬ್ಬಾಳ ಹಾಗೂ ಜಲಧಾರೆ ಮತ್ತು ಅಮೃತ 2.0 ಯೋಜನೆಗಳ ಕಾಮಗಾರಿ ಶೀಘ್ರ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಕಲಬುರಗಿ ಪ್ರಾದೇಶಿಕ ಅಂಚೆ ಕಚೇರಿ ಆರಂಭಕ್ಕೆ ಕೇಂದ್ರ ಅನುಮೋದನೆ



ಕಲಬುರಗಿ ಪ್ರಾದೇಶಿಕ ಅಂಚೆ ಕಚೇರಿ ಆರಂಭಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದ್ದು, ಇದಕ್ಕಾಗಿ ಶ್ರಮಿಸಿದ್ದ ಅಂದಿನ ಕೇಂದ್ರ ಸಚಿವ ಭಗವಂತ ಖೂಬಾರವರಿಗೆ ಅಂಚೆ ಸಿಬ್ಬಂದಿ ಮತ್ತು ಅಧಿಕರಿಗಳು ಅಭಿನಂದಿಸಿ ಸನ್ಮಾನಿಸಿದರು.

ಕಲಬುರಗಿ, ನ. 4: ಕಲ್ಯಾಣ ಕರ್ನಾಟಕ ಭಾಗದ ಅಂಚೆ ಸಿಬ್ಬಂದಿ ಹಾಗೂ ಸಾರ್ವಜನಿಕರ ಬಹುದಿನಗಳ ಬೇಡಿಕೆಯಾದ ಕಲಬುರಗಿ ಪ್ರಾದೇಶಿಕ ಅಂಚೆ ಕಚೇರಿ ಆರಂಭಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈ ಹಿನ್ನೆಲೆಯಲ್ಲಿ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಅವರನ್ನು ಅಂಚೆ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಂಘಟನೆಯ ಪದಾಧಿಕಾರಿಗಳು ಭೇಟಿ ಮಾಡಿ ಸನ್ಮಾನಿಸಿದರು.

ಅಂಚೆ ಇಲಾಖೆಯ ಅಧಿಕೃತ ಕೆಲಸಗಳಿಗಾಗಿ ಕಲ್ಯಾಣ ಕರ್ನಾಟಕದ ಸಿಬ್ಬಂದಿ ಹಾಗೂ ಸಾರ್ವಜನಿಕರು ಧಾರವಾಡದ ಪ್ರಾದೇಶಿಕ ಕಚೇರಿಗೆ ತೆರಳಬೇಕಾದ ಅನಿವಾರ್ಯತೆ ಇತ್ತು. ಈ ಸಮಸ್ಯೆ ಕುರಿತು ಅ.17ರಂದು ಅಂಚೆ ಸಿಬ್ಬಂದಿ ಸಂಘಟನೆಯ ಪದಾಧಿಕಾರಿಗಳು ಖೂಬಾ ಅವರಿಗೆ ಮನವಿ ಸಲ್ಲಿಸಿದ್ದರು.

ಮನವಿಗೆ ಸ್ಪಂದಿಸಿದ ಖೂಬಾ ಅವರು ಕೇಂದ್ರ ದೂರಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, ಅಂಚೆ ಇಲಾಖೆ ಕಾರ್ಯದರ್ಶಿ ಹಾಗೂ ಬೆಂಗಳೂರಿನ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಅವರಿಗೆ ಪತ್ರ ಬರೆದು ಕಲಬುರಗಿಯಲ್ಲಿ ಪ್ರಾದೇಶಿಕ ಕಚೇರಿ ಆರಂಭಿಸುವಂತೆ ಒತ್ತಾಯಿಸಿದ್ದರು. ಇದಾದ 12 ದಿನಗಳೊಳಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಪ್ರಕಟಣೆ ತಿಳಿಸಿದೆ.

ಸನ್ಮಾನ ಸ್ವೀಕರಿಸಿ ಮಾತನಾಡಿದ ಖೂಬಾ, ಅಂಚೆ ಇಲಾಖೆಯು ಪಾಸ್‌ಪೋರ್ಟ್, ಆಧಾರ್, ಅಂಚೆ ಪಾವತಿ ಬ್ಯಾಂಕ್, ವೃದ್ಧಾಪ್ಯ ವೇತನ ಹಾಗೂ ಸುಕನ್ಯಾ ಸಮೃದ್ಧಿ ಯೋಜನೆ ಸೇರಿದಂತೆ ಹಲವು ಸೇವೆಗಳನ್ನು ಒದಗಿಸುತ್ತಿದೆ. ಜಿಲ್ಲೆಯಲ್ಲಿ ರೈಲ್ವೆ, ಹೆದ್ದಾರಿ, ವಿಮಾನ ನಿಲ್ದಾಣ, ಸೈನಿಕ ಶಾಲೆ, ಸಿಪೆಟ್ ಕಾಲೇಜು, ಸೌರಶಕ್ತಿ ಯೋಜನೆ ಹಾಗೂ ಪಾಸ್‌ಪೋರ್ಟ್ ಸೇವಾ ಕೇಂದ್ರಗಳನ್ನು ತರಲು ಪ್ರಯತ್ನಿಸಲಾಗಿದೆ ಎಂದರು.

ಜಿಲ್ಲೆಯ ಔದ್ಯೋಗಿಕ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ರೂಪಿಸಲಾಗಿದ್ದು, ಮುಂದಿನ ದಿನಗಳಲ್ಲಿ ಅವುಗಳನ್ನು ಸಾಕಾರಗೊಳಿಸುವ ವಿಶ್ವಾಸವಿದೆ ಎಂದು ತಿಳಿಸಿದರು.

ಜಿಲ್ಲಾ ಅಂಚೆ ಇಲಾಖೆಯ ಪೋಸ್ಟ್ ಮಾಸ್ಟರ್ ರಾಜೇಂದ್ರ ವಗ್ಗೆ, ಉಪ ಅಂಚೆ ಅಧಿಕಾರಿ ಕಾಶಿನಾಥ ವರ್ಮಾ, ಪ್ರವೀಣ, ಪ್ರಶಾಂತ ಫಾಳೆ, ಪ್ರದೀಪ ನಾಯಕವಾಡೆ, ರಾಜೇಂದ್ರ, ವೆಂಕಟೇಶ, ಮಹೇಶ, ರಾಧಾಕೃಷ್ಣನ್, ಬಾಲಕೃಷ್ಣನ್ ಸೇರಿದಂತೆ ಅಂಚೆ ಸಿಬ್ಬಂದಿ ಹಾಗೂ ಸಂಘಟನೆಯ ಮುಖಂಡರು ಇದ್ದರು.



'ಸರ್ಕಾರಿ ಶಾಲೆಗಳನ್ನು ಉಳಿಸಿ' ಅಭಿಯಾನದೊಂದಿಗೆ, ಎಐಡಿಎಸ್‌ಓ ಕರ್ನಾಟಕದ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

ಸ್ಥಳೀಯ ಉತ್ಪನ್ನಗಳನ್ನು ಖರೀದಿಸಿ ಮಹಿಳಾ ಉದ್ಯಮಶೀಲತೆ ಪ್ರೋತ್ಸಾಹಿಸಿ: ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಕರೆ



ದಾವಣಗೆರೆ. ನ.4: ಗ್ರಾಮೀಣ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಸಾರ್ವಜನಿಕರ ಸಹಕಾರ ಅತ್ಯಗತ್ಯ. ಸ್ವಸಹಾಯ ಸಂಘಗಳ ಮಹಿಳೆಯರು ತಯಾರಿಸಿದ ಸ್ಥಳೀಯ ಉತ್ಪನ್ನಗಳನ್ನು ಖರೀದಿಸುವ ಮೂಲಕ ಅವರ ಉದ್ಯಮಶೀಲತೆಗೆ ಪ್ರೋತ್ಸಾಹ ನೀಡಬೇಕು ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಕರೆ ನೀಡಿದರು.

ನಗರದ ಎಸ್.ಎಸ್. ಮಾಲ್ ಎದುರು ಬುಧವಾರ ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಸಂಜೀವಿನಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ಸಹಯೋಗದಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಆಯೋಜಿಸಿದ್ದ ದೀಪ ಸಂಜೀವಿನಿ ವಿಶೇಷ ಮಾರಾಟ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೀಪಾವಳಿ ಬೆಳಕಿನ ಹಬ್ಬ. ಈ ಹಬ್ಬದ ಸಂದರ್ಭದಲ್ಲಿ ಗ್ರಾಮೀಣ ಮಹಿಳೆಯರು ತಯಾರಿಸಿದ ಮಣ್ಣಿನ ದೀಪಗಳು ಹಾಗೂ ಅಲಂಕಾರಿಕ ವಸ್ತುಗಳನ್ನು ಖರೀದಿಸಿ ಮನೆಗಳನ್ನು ಬೆಳಗಿಸುವುದರ ಜೊತೆಗೆ, ಆ ಮಹಿಳೆಯರ ಬದುಕಿನಲ್ಲೂ ಆರ್ಥಿಕ ಭರವಸೆಯ ಬೆಳಕು ಮೂಡಿಸಬೇಕು. ಮಹಿಳೆಯರ ಶ್ರಮಕ್ಕೆ ಸೂಕ್ತ ಮಾರುಕಟ್ಟೆ ಒದಗಿಸುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿ ಎಂದು ಹೇಳಿದರು.

ದಸರಾ ಆಚರಣೆ ವೇಳೆ ಪೊಲೀಸರ ನಿರ್ಬಂಧಕ್ಕೆ ಆಕ್ಷೇಪ

ಸಚಿವ ಯತೀಂದ್ರ ಹೇಳಿಕೆಗೆ ಪ್ರಮೋದಾದೇವಿ ಒಡೆಯರ್ ತಿರುಗೇಟು



ಮೈಸೂರು, ನ.4– ಮೈಸೂರು ದಸರಾ ಸಂಪ್ರದಾಯಗಳ ಕುರಿತ ಗೊಂದಲಗಳ ನಡುವೆ, ಅರಮನೆಯ ಭೂಮಿ ಹಸ್ತಾಂತರದ ಬಗ್ಗೆ ಸ್ಪಷ್ಟನೆ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ನೀಡಿದ್ದಾರೆ. ಅರಮನೆಯ ಸಂಪೂರ್ಣ ಜಾಗವನ್ನು ಸರ್ಕಾರಕ್ಕೆ ಹಸ್ತಾಂತರಿಸಿಲ್ಲ ಎಂದು ಅವರು ಖಚಿತಪಡಿಸಿದ್ದಾರೆ.

ಮೈಸೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ನಮಗೆ ಅರಮನೆಯಲ್ಲಿ ಉಳಿದುಕೊಳ್ಳಲು ಸರ್ಕಾರ ಜಾಗ ಕೊಟ್ಟಿದ್ದಲ್ಲ, ಅದು ನಮ್ಮದೇ ಜಾಗ ಎಂದು ಸ್ಪಷ್ಟಪಡಿಸಿದ್ದಾರೆ. ಅರಮನೆ ಬೋರ್ಡ್ ಸರ್ಕಾರದ್ದು, ಅರಮನೆ ಜಾಗ ಸರ್ಕಾರದ್ದು. ಅವರು ಉಳಿದುಕೊಳ್ಳಲು ಒಂದಿಷ್ಟು ಜಾಗ ಕೊಟ್ಟಿದ್ದೇವೆ, ಅಷ್ಟೇ ಎಂದು ಸಚಿವ ಯತೀಂದ್ರ ಇತ್ತೀಚೆಗೆ ಹೇಳಿಕೆ ನೀಡಿದ್ದರು. ಇದೀಗ ಪ್ರಮೋದಾ ದೇವಿ ತಿರುಗೇಟು ನೀಡಿದ್ದಾರೆ.ಅಂಬಾರಿ ಹಾಗೂ ಸಿಂಹಾಸನವು ಅರಮನೆ ಸ್ವಾಧೀನ ಕಾಯ್ದೆಗೆ ಒಳಪಡದ ಸಂಪೂರ್ಣ ಖಾಸಗಿ ಸ್ವತ್ತಾಗಿದ್ದು, ಹಿಂದೆಯೂ ನಮ್ಮ ಸುಪರ್ದಿಯಲ್ಲೇ ಇತ್ತು, ಮುಂದೆಯೂ ನಮ್ಮದಾಗಿಯೇ ಇರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

1947ರಲ್ಲಿಯೇ ಖಾಸಗಿ ಸ್ವತ್ತುಗಳ ಪಟ್ಟಿಯನ್ನು ಕೇಂದ್ರ ಸರ್ಕಾರಕ್ಕೆ ನೀಡಲಾಗಿದ್ದು, 1951ರಲ್ಲಿ ವಿ.ಪಿ. ಮೆನನ್ ಅವರು ಅಧಿಕೃತವಾಗಿ ಅನುಮೋದನೆ ನೀಡಿದ್ದಾರೆ ಎಂದರು. ಅರಮನೆಯ ವಾಸದ ವಿಭಾಗ ಈಗಲೂ ರಾಜಮನೆತನದ ಸುಪರ್ದಿ ಯಲ್ಲಿದೆ. ಸಾರ್ವಜನಿಕರು ವೀಕ್ಷಿಸುವ ಮುಂಭಾಗದ ಭಾಗವನ್ನು ಮಾತ್ರ ಸರ್ಕಾರ ನಿರ್ವಹಿಸುತ್ತಿದೆ. ಅಂಬಾರಿ ಮತ್ತು ಸಿಂಹಾಸನ ಸೇರಿದಂತೆ ಕೆಲವು ಪ್ರಮುಖ ವಸ್ತುಗಳು ಎಂದಿಗೂ ಸರ್ಕಾರದ ವಶಕ್ಕೆ ಹೋಗಿಲ್ಲ, ಅವು ಸದಾ ಅರಮನೆಯಲ್ಲೇ ಇವೆ ಎಂದು ಪ್ರಮೋದಾದೇವಿ ಒಡೆಯರ್ ತಿಳಿಸಿದ್ದಾರೆ.ಜಯಚಾಮರಾಜ ಒಡೆಯರ್ ನಿಧನದ ಬಳಿಕ 8 ಕೋಟಿ ರೂ.ಗೂ ಅಧಿಕ ತೆರಿಗೆ ಕಟ್ಟಬೇಕಾದ ಪರಿಸ್ಥಿತಿ ಬಂದಾಗ, ಅರಮನೆ ನೋಡಿಕೊಳ್ಳುವುದಾಗಿ ಸರ್ಕಾರ ಒಪ್ಪಂದ ಮಾಡಿಕೊಂಡಿತ್ತು. ಆದರೆ ಒಪ್ಪಂದದಂತೆ ನಡೆದುಕೊಳ್ಳದ ಕಾರಣ ನಾವು ಕೋರ್ಟ್ ಮೊರೆ ಹೋಗಿದ್ದು, 30 ದಿನಗಳಲ್ಲಿ ಅರಮನೆ ಮರಳಿಸುವಂತೆ ಕೋರ್ಟ್ ಆದೇಶಿಸಿದ್ದರೂ ಸರ್ಕಾರ ಜಾರಿಗೆ ತಂದಿಲ್ಲ ಎಂದು ಆರೋಪಿಸಿದರು.

ಅಧಿಕಾರಿಗಳಿಗೆ ನಮ್ಮ ಖಾಸಗಿ ಆಸ್ತಿಗಳ ಬಗ್ಗೆ ಸರಿಯಾದ ಓದು ಹಾಗೂ ಮಾಹಿತಿಯಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದಸರಾ ಸಂದರ್ಭದಲ್ಲಿ ಪೊಲೀಸರ ಅತಿಯಾದ ನಿರ್ಬಂಧದಿಂದ ಧಾರ್ಮಿಕ ವಿಧಿವಿಧಾನಗಳಿಗೆ ತೊಂದರೆಯಾಗಿದೆ ಎಂದ ಅವರು, ಬ್ರಹ್ಮಪುರಿ ಗೇಟ್ ಬಳಿ ಕರ್ತವ್ಯ ಲೋಪ ಎಸಗಿರುವ ಎಸಿಪಿ ಚಂದ್ರಶೇಖರ್ ವಿರುದ್ಧ ಕ್ರಮವಾಗಬೇಕು ಎಂದರು. ಜಟ್ಟಿ ಕಾಳಗ ಹಾಗೂ ಪಟ್ಟದ ಕತ್ತಿಯಿಂದ ಕುಂಬಳಕಾಯಿ ಕತ್ತರಿಸುವುದು ನಮ್ಮ ಪರಂಪರೆಯ ಧಾರ್ಮಿಕ ಆಚರಣೆ ಯಾಗಿದ್ದು, ಇದಕ್ಕೆ ಅಡ್ಡಿಪಡಿಸುವುದು ಸರಿಯಲ್ಲ ಎಂದರು.

ಅಂಬಾರಿಗೆ ಅವರು ಕೊಡುತ್ತಿರೋದು ಬಾಡಿಗೆಯಲ್ಲ, ಅದು ರಾಯಲ್ಟಿ, ನಮ್ಮ ವಸ್ತು ಬಳಸಿಕೊಂಡು ಅವರು ಪ್ರಚಾರ ಮಾಡುತ್ತಾರೆ. ಅದಕ್ಕಾಗಿ ರಾಯಲ್ಟಿ ಕೊಡುತ್ತಾರೆ. ರಾಯಲ್ಟಿ ಎಷ್ಟು ಬೇಕಾದರೂ ಕೇಳಬಹುದು. ಎಷ್ಟು ಪಡೆಯುತ್ತೇವೆ ಎಂಬುದನ್ನು ನಾನು ಹೇಳುವುದಿಲ್ಲ. ಸರ್ಕಾರ ಅದನ್ನು ಬಹಿರಂಗ ಮಾಡುತ್ತದೆ ಎಂದರೆ ನನ್ನ ಆಕ್ಷೇಪಣೆ ಇಲ್ಲ ಎಂದು ಹೇಳಿದರು.

ಇಲ್ಲಿ ಪ್ರಮುಖವಾಗಿ ಗಮನಿಸ ಬೇಕಾದ ಅಂಶವೆಂದರೆ, ಯದು ವಂಶದ ಆಚರಣೆಯನ್ನು ಸರ್ಕಾರ ಮುಂದುವರೆಸುತ್ತಿಲ್ಲ. ಸರ್ಕಾರ ಯದು ವಂಶದ ವಾರಸುದಾರ ಅಲ್ಲ. ಅವರು ಮಾಡುತ್ತಿರುವುದು ಸಾಂಸ್ಕೃತಿಕ ಕಾರ್ಯಕ್ರಮ. ನಾನು ಹಿಂದೆಯೇ ಹೇಳಿದ್ದೇನೆ. ನೀವು ದಸರಾ ಮಾಡುವಾಗ ನಮ್ಮನ್ಯಾಕೆ ಅಂಬಾರಿ ಕೇಳುತ್ತೀರಿ ಎಂದಿದ್ದೇನೆ. ನೀವೇ ಒಂದು ಅಂಬಾರಿ ತಯಾರಿಸಿಕೊಳ್ಳಿ ಎಂದು ಸಲಹೆ ಕೊಟ್ಟಿದ್ದೇನೆ. ಸರ್ಕಾರ ಅವರೇ ಒಂದು ಅಂಬಾರಿ ತಯಾರಿಸಿಕೊಂಡು ದಸರಾ ಮಾಡಿದರೆ ನಮ್ಮ ಅಭ್ಯಂತರ ಇಲ್ಲ ಎಂದು ಪ್ರಮೋದಾದೇವಿ ಒಡೆಯರ್ ಸ್ಪಷ್ಟನೆ ನೀಡಿದರು.

1998 ರಲ್ಲಿ ಒಂದು ಕೋಟಿ ಹಣ, ಒಂದು ಎಕರೆ ಜಾಗ ಕೊಡುತ್ತೇವೆ. ನೀವು 6 ತಿಂಗಳಲ್ಲಿ ಅರಮನೆ ಬಿಟ್ಟು ಕೊಡಿ ಎಂದು ಹೇಳಿದ್ದರು. ಇದಕ್ಕೆ ನಮ್ಮ ಪತಿ ದಿವಂಗತ ಶ್ರೀಕಂಠದತ್ತ ಒಡೆಯರ್ ಒಪ್ಪಲಿಲ್ಲ. ಒಂದು ಕೋಟಿ ಹಣ ಇವತ್ತು ಅರಮನೆಯ ಒಂದು ಕಂಬಕ್ಕೆ ಆಗಲ್ಲ. ಮುಖ್ಯಮಂತ್ರಿ ಮತ್ತು ಸಚಿವರ ಜೊತೆ ಮಾತನಾಡಲು ನಾನು ಸಿದ್ದ. ಮಾತುಕತೆ ಮೂಲಕ ಬಗೆಹರಿಸಿ ಕೊಳ್ಳುತ್ತೇನೆ ಎಂದು ಸಿಎಂ ಹೇಳಿರುವುದಕ್ಕೆ ಧನ್ಯವಾದಗಳು. ನಮ್ಮ ಹೇಳಿಕೆಯನ್ನು ಸೆನ್ಸೇಷನ್ಲೈಸ್ ಮಾಡುವುದು ಬೇಡ, ನಾನು ಹೇಳಿರುವದನ್ನು ಅಷ್ಟೇ ಜನರಿಗೆ ತಲುಪಿಸಿ ಎಂದು ಮನವಿ ಮಾಡಿದರು.

ಅಂಬಾರಿ ಮೆರವಣಿಗೆಗೆ ಸರ್ಕಾರ ಯಾವುದೇ 'ಬಾಡಿಗೆ' ನೀಡುವುದಿಲ್ಲ, ಬದಲಿಗೆ ಗೌರವಧನ ನೀಡುತ್ತದೆ ಎಂದು ಸ್ಪಷ್ಟಪಡಿಸಿದರು. ಅಂತಿಮವಾಗಿ, ಮುಖ್ಯಮಂತ್ರಿ ಹಾಗೂ ಸಚಿವರು ಈ ಕುರಿತು ಮಾತನಾಡಲು ಬಯಸಿದರೆ, ಸರ್ಕಾರದೊಂದಿಗೆ ಮಾತುಕತೆ ನಡೆಸಲು ಸಿದ್ಧವಿರುವುದಾಗಿ ಪ್ರಮೋದಾದೇವಿ ಒಡೆಯರ್ ತಿಳಿಸಿದ್ದಾರೆ. ಅರಮನೆಯ ವಾಸದ ಭಾಗದ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ನ್ಯಾಯಾಲಯ ಆದೇಶ ನೀಡಿದೆ. ಧಾರ್ಮಿಕ ಆಚರಣೆಗಳಿಗೆ ಅಡ್ಡಿ ಉಂಟಾದರೆ ನ್ಯಾಯಾಲಯವನ್ನು ಸಂಪರ್ಕಿಸುವ ಹಕ್ಕು ರಾಜಮನೆತನಕ್ಕಿದೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ. ಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಧನ್ಯವಾದ ಅರ್ಪಿಸಿದ್ದಾರೆ.

ರಾಜಮನೆತನದ ಬಗ್ಗೆ ಗೌರವವಿದೆ: ಸಿಎಂ



ಮೈಸೂರಿನ ರಾಜಮಾತೆ ಪ್ರಮೋದಾದೇವಿ ಯವರು ದಸರಾ ಅವ್ಯವಸ್ಥೆಯ ಬಗ್ಗೆ ಸಿಎಂ ಮಾತನಾಡುವುದಾಗಿ ಹೇಳಿದ್ದು ಇನ್ನೂ ಮಾತನಾಡಿಲ್ಲದ್ದರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ರುವ ಬಗ್ಗೆ ಕೇಳಿದಾಗ 'ಈ ಬಗ್ಗೆ ನನಗೆ ಗೊತ್ತಿಲ್ಲ. ಈ ರಾಜ್ಯದ ರಾಜಮನೆತನಕ್ಕೆ ಗೌರವ ನೀಡುತ್ತೇವೆ. ನೀವು ಹೇಳಿದಿರಿ ಎಂದು ನಿಮ್ಮ ಮಾತುಗಳನ್ನು ಕೇಳುವುದಕ್ಕೆ ಸಾಧ್ಯವಿಲ್ಲ. ಮಾಧ್ಯಮಗಳು ಬೇಕಾದಂತೆ ಕೇಳಿದರೆ ಪ್ರತಿಕ್ರಿಯೆ ನೀಡಲಾಗುವುದಿಲ್ಲ. ಇದರ ಬಗ್ಗೆ ತಿಳಿದುಕೊಂಡು ಅವರೊಂದಿಗೂ ಮಾತನಾಡುತ್ತೇನೆ' ಎಂದರು.

ಡಿಜಿಟಲ್ ಆರ್ಥಿಕತೆಯ ಸ್ಟಾರ್ಟ್‌ಅಪ್‌ನಲ್ಲಿ ತೊಡಗಿಸಿಕೊಳ್ಳಲು ಯುವಕರಿಗೆ ಪ್ರೊ.ಆರ್.ಆರ್.ಬಿರಾದಾರ ಕರೆ



ಕಲಬುರಗಿ, ನ. 4: ವಿದ್ಯಾರ್ಥಿಗಳು ನವೀನ ಆಲೋಚನೆ ಬೆಳೆಸಿಕೊಳ್ಳುವುದರ ಜತೆಗೆ ಡಿಜಿಟಲ್ ಆರ್ಥಿಕತೆಯಲ್ಲಿ ಉದಯೋನ್ಮುಖವಾಗುತ್ತಿರುವ ಅವಕಾಶ ಅನ್ವೇಷಿಸಿ, ಬೆಳೆಯುತ್ತಿರುವ ಸ್ಟಾರ್ಟಪ್ ಪರಿಸರ ವ್ಯವಸ್ಥೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಕುಲಸಚಿವ ಪ್ರೊ. ಆರ್.ಆರ್.ಬಿರಾದಾರ ಕರೆ ನೀಡಿದರು.

ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಆಯೋಜಿಸಿದ್ದ ಕರ್ನಾಟಕದ ಉದಯೋನ್ಮುಖ ಡಿಜಿಟಲ್ ಆರ್ಥಿಕತೆಯಲ್ಲಿ ವೃತ್ತಿ ಅವಕಾಶ ಮತ್ತು ನಾವೀನ್ಯತೆಯ ಕುರಿತ ತರ ಅಧಿವೇಶನ ಉದ್ಘಾಟಿಸಿ ಮಾತನಾಡಿ, ನಾವಿನ್ಯತೆ ಉತ್ತೇಜಿಸುವುದು, ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡುವುದು ಹಾಗೂ ರಾಷ್ಟ್ರೀಯ ಆರ್ಥಿಕತೆ ಬಲಪಡಿಸುವಲ್ಲಿ ಯುವಜನರು ಪ್ರಮುಖ ಪಾತ್ರ ವಹಿಸುತ್ತಾರೆ. ನೈಜ ಜಗತ್ತಿನ ಸವಾಲುಗಳಿಗೆ ನವೀನ ಪರಿಹಾರ ಕಂಡುಕೊಳ್ಳುವ ಮೂಲಕ ವಿಕಸಿತ ಭಾರತ ಮತ್ತು 2047ರ ಆಶಯ ಸಾಕಾರಗೊಳಿಸಲು ವಿದ್ಯಾರ್ಥಿಗಳು ತಮ್ಮ ಜ್ಞಾನ, ಕೌಶಲ ಹಾಗೂ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಸಂಪನ್ಮೂಲ ಸಮರ್ಥವಾಗಿ ಬಳಸಿಕೊಳ್ಳ ಬೇಕು ಎಂದು ಸಲಹೆ ನೀಡಿದರು.

ಇನ್‌ಕ್ಯುಬೇಷನ್ ಮತ್ತು ಕೌಶಲ ಅಭಿವೃದ್ಧಿ ಕೇಂದ್ರದ ನಿರ್ದೇಶಕ ಪ್ರೊ.ರಾಜೀವ್ ಜೋಶಿ ಮಾತನಾಡಿ, ನಾವೀನ್ಯತೆಯು ಪ್ರಕೃತಿಯೊಂದಿಗೆ ಬೆಸೆದುಕೊಂಡಿರಬೇಕು, ಸಾಮಾಜಿಕ ಅಗತ್ಯಗಳಿಗೆ ಸ್ಪಂದಿಸಬೇಕು. ರಾಷ್ಟ್ರೀಯ ಆರ್ಥಿಕ ಅಭಿವೃದ್ಧಿಗೆ ಕೊಡುಗೆ ನೀಡುವಂತಿರಬೇಕು ಎಂದು ಹೇಳಿದರು.


ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್‌ನ ಕ್ಲಸ್ಟರ್ ಮುಖ್ಯಸ್ಥ ವೆಂಕಟೇಶ ದೇಶಪಾಂಡೆ ವಿಶೇಷ ಉಪನ್ಯಾಸ ನೀಡಿದರು. ಕಲಬುರಗಿ ಕ್ಲಸ್ಟರ್ ಮುಖ್ಯಸ್ಥ ಸುಜಯ್ ಮುದ್ಗಲ್, ಕಂಪ್ಯೂಟರ್ ವಿಜ್ಞಾನ ಇಂಜನಿಯರಿಂಗ್ ನಿಕಾಯದ ಡೀನ್ ಪ್ರೊ.ಆರ್.ಎಸ್. ಹೆಗಡಿ ಮಾತನಾಡಿದರು.

ಭಾರತದ ಜನಸಂಖ್ಯೆಯಲ್ಲಿ ಸುಮಾರು ಶೇ.65 ಮಂದಿ 35ಕ್ಕಿಂತ ಕಡಿಮೆ ವಯಸ್ಸಿನವರಾಗಿದ್ದಾರೆ. ಈ ಯುವಜನ ರಾಷ್ಟದ ಬಹುದೊಡ್ಡ ಶಕ್ತಿ. ತಾಂತ್ರಿಕ ಪ್ರಗತಿ, ಉದ್ಯಮಶೀಲತೆ, ಎಲ್ಲರನ್ನೂ ಒಳಗೊಂಡ ಆರ್ಥಿಕ ಬೆಳವಣಿಗೆ ವೇಗಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಬಲ್ಲದು. ಯುವಜನರು ಅಗತ್ಯ ಕೌಶಲ ಮತ್ತು ನವೀನ ಸಾಮರ್ಥ್ಯಗಳೊಂದಿಗೆ ರಾಷ್ಟ ನಿರ್ಮಾಣದಲ್ಲಿ ಅರ್ಥಪೂರ್ಣ ಕೊಡುಗೆ ನೀಡಬೇಕು.

– ಪ್ರೊ.ಆರ್.ಆರ್.ಬಿರಾದಾರ, ಕುಲಸಚಿವ, ಕೇಂದ್ರೀಯ ವಿವಿ ಕಲಬುರಗಿ.

ಅಂಗೈನಲ್ಲೇ ಮೈಸೂರು ಪ್ರವಾಸಿತಾಣಗಳ ಮಾಹಿತಿ ಲಭ್ಯ

ಪ್ರವಾಸೋದ್ಯಮ ಇಲಾಖೆ ವೆಬ್‌ಸೈಟ್‌ನಲ್ಲಿ ವಿಶ್ವದ 7 ಭಾಷೆಗಳಲ್ಲಿ ಮಾಹಿತಿ ಲಭ್ಯ



ಮೈಸೂರು, ನ.4: ಮೈಸೂರಿನ ಪ್ರವಾಸೋದ್ಯಮ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಂತಾರಾಷ್ಟ್ರೀಯ ಮಟ್ಟದ 7 ಭಾಷೆಗಳ ಮೂಲಕ ಪ್ರವಾಸಿತಾಣಗಳ ಮಾಹಿತಿಯು ಅಂಗೈನಲ್ಲಿ ಲಭ್ಯವಾಗಲಿದೆ. ಇಂಗ್ಲಿಷ್, ಕನ್ನಡ, ಫ್ರೆಂಚ್, ಸ್ಪಾನಿಷ್, ಉರ್ದು, ಡಚ್ (ಜರ್ಮನ್ ಭಾಷೆ), ಇಟಲಿಯನ್ (ರೋಮನ್ಸ್ ಭಾಷೆ), ರಷ್ಯಾ ಭಾಷೆಗಳ ಮೂಲಕ ಪ್ರವಾಸಿ ತಾಣಗಳ ಮಾಹಿತಿ ಪಡೆಯಬಹುದಾಗಿದೆ.

ಮೈಸೂರಿನ ಐತಿಹಾಸಿಕ ಪರಂಪರೆ, ಸಂಸ್ಕೃತಿ, ಪ್ರವಾಸಿ ತಾಣಗಳು ಹಾಗೂ ವೈವಿಧ್ಯಮಯ ಪ್ರವಾಸೋದ್ಯಮ ಅನುಭವಗಳನ್ನು ದೇಶ – ವಿದೇಶಗಳ ಪ್ರವಾಸಿಗರು, ಮೈಸೂರು ಪ್ರವಾಸೋದ್ಯಮ ಪ್ರೋಗ್ರೆಸಿವ್ ವೆಬ್ ಆಪ್(ಪಿಡಬ್ಲ್ಯೂಎ) ಮೂಲಕ ನೋಡಬಹುದಾಗಿದೆ.

ಆಧುನಿಕ ತಂತ್ರಜ್ಞಾನ, ಮೊಬೈಲ್‌ಸ್ನೇಹಿ ವಿನ್ಯಾಸ ಮತ್ತು ಸುಲಭ ಬಳಕೆಯ ಅನುಕೂಲವಾಗುವಂತೆ ಈ ವೆಬ್ಸೈಟ್ ರಚನೆ ಮಾಡಲಾಗಿದ್ದು, ಕನ್ನಡ ಮತ್ತು 7 ವಿದೇಶಿ ಭಾಷೆಗಳಲ್ಲಿ ಮಾಹಿತಿ ಪಡೆಯುವ ಸೌಲಭ್ಯ ಹೊಂದಿರುವುದು ಅಂತಾರಾಷ್ಟ್ರೀಯ ಪ್ರವಾಸಿಗರಿಗೆ ಮೈಸೂರನ್ನು ಸುಲಭವಾಗಿ ಪರಿಚಯಿಸಿಕೊಳ್ಳಲು ನೆರವಾಗಲಿದೆ.

ಜಿಲ್ಲೆಯ ಎಂಟು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ವಿವಿಧ ಸ್ವಸಹಾಯ ಸಂಘಗಳ ಮಹಿಳೆಯರು ಒಗ್ಗೂಡಿ ಮಣ್ಣಿನ ದೀಪಗಳು, ಅಲಂಕಾರಿಕ ದೀಪಗಳು ಸೇರಿದಂತೆ ದೀಪಾವಳಿ ಹಬ್ಬಕ್ಕೆ ವೈವಿಧ್ಯಮಯ ಉತ್ಪನ್ನಗಳನ್ನು ತಯಾರಿಸಿದ್ದಾರೆ. ಈ ಉತ್ಪನ್ನಗಳ ಮಾರಾಟಕ್ಕೆ ನಗರದ ಪ್ರಮುಖ ಸ್ಥಳಗಳಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ನಗರದ ಎಸ್.ಎಸ್. ಮಾಲ್ ಎದುರು, ರೈಲು ನಿಲ್ದಾಣ ಹಾಗೂ ಬಸ್‌ನಿಲ್ದಾಣದ ಬಳಿ ಉತ್ಪನ್ನಗಳ ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ, ಬಿ.ಎಸ್. ಚನ್ನಬಸಪ್ಪ ಮಳಿಗೆಯ ಎದುರು ಶನಿವಾರವೂ ವಿಶೇಷ ಮಾರಾಟ ನಡೆಯಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಮಹಿಳೆಯರು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ ಕಲ್ಪಿಸುವ ಇಂತಹ ಮೇಳಗಳು ಆದಾಯ ವೃದ್ಧಿಗೆ ಸಹಕಾರಿಯಾಗಲಿವೆ ಎಂದು ಅಭಿಪ್ರಾಯಪಟ್ಟರು.


ಶ್ರೀ ಬಿ.ವೈ.ವಿಜಯೇಂದ್ರ
ಅವರಿಗೆ
ಜನುಮದಿನದ
ಶುಭಾಶಯಗಳು
05 ನವೆಂಬರ್ 2026
ಶುಭ ಕೋರುವವರು
ಬಿ. ನಾಗರಾಜ್ ಶೆಟ್ಟಿ
ಮಾಜಿ ಸಚಿವರು, ಬಂಟ್ವಾಳ
ವಿಧಾನಸಭಾ ಕ್ಷೇತ್ರ,
ಮಂಗಳೂರು, ಕರ್ನಾಟಕ


ಶ್ರೀ ಬಿ.ವೈ.ವಿಜಯೇಂದ್ರ
ಅವರಿಗೆ
ಜನುಮದಿನದ
ಶುಭಾಶಯಗಳು
05 ನವೆಂಬರ್ 2026
ಶುಭ ಕೋರುವವರು
ಗಣೇಶ್ ಪ್ರಸಾದ್ ಶೆಟ್ಟಿ
ಮೋದಿ ಬ್ರಿಗೇಡ್ ರಾಷ್ಟ್ರೀಯ ಅಧ್ಯಕ್ಷರು
ಬೆಂಗಳೂರು/ನವದೆಹಲಿ


ಶ್ರೀ ಬಿ.ವೈ.ವಿಜಯೇಂದ್ರ
ಅವರಿಗೆ
ಜನುಮದಿನದ
ಶುಭಾಶಯಗಳು
5-11-2026
ಶುಭ ಕೋರುವವರು
ಬಸವರಾಜ್ ಮತ್ತಿಮಡು
ಶಾಸಕರು, ಕಲಬುರಗಿ ಗ್ರಾಮೀಣ ಕ್ಷೇತ್ರ


5-11-2026
ಶ್ರೀ ಬಿ.ವೈ.ವಿಜಯೇಂದ್ರ
ಅವರಿಗೆ
ಜನುಮದಿನದ
ಶುಭಾಶಯಗಳು
ಶುಭ ಕೋರುವವರು
ಮಾಡಾಳ್ ಮಲ್ಲಿಕಾರ್ಜುನ್
ಬಿಜೆಪಿ ಮುಖಂಡರು, ಚನ್ನಗಿರಿ